24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 20 | ನವದೆಹಲಿ | ಬೆಲೆ ₹10 | ಜುಲೈ 16 2026, ಗುರುವಾರ

## ಬಿಡದಿ ಟೌನ್‌ಶಿಪ್‌ಗಾಗಿ ರೈತರ ಜಾಗ ಬಲವಂತ ಸ್ವಾಧೀನ ಮಾಡಲ್ಲ: ಡಿಕೆಶಿ

**ಬೆಂಗಳೂರು ಜು 15: ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ಬಲವಂತವಾಗಿ ಒಬ್ಬನೇ ಒಬ್ಬ ರೈತರ, ರೈತ ತಾಯಂದಿರ ಜಮೀನನ್ನೂ ಪಡೆದುಕೊಳ್ಳುವುದಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟವಾಗಿ ಹೇಳಿದರು.**

ಬುಧವಾರ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ದಾಖಲೆಗಳ ಸಮೇತ ಮಾತನಾಡಿದ ಅವರು, ಯಾವುದೇ ಕಾರಣಕ್ಕೂ ರೈತರ ಮೇಲೆ ಒತ್ತಡ ಹೇರಿ ಜಮೀನು ಕಿತ್ತುಕೊಳ್ಳುವುದಿಲ್ಲ. ರೈತರು ಸ್ವಇಚ್ಛೆಯಿಂದ ಭೂಮಿ ಕೊಟ್ಟರೆ ಮಾತ್ರ ಭೂಸ್ವಾಧೀನ ಪ್ರಕ್ರಿಯೆ ನಡೆಯುತ್ತದೆ. ಒಪ್ಪದಿದ್ದರೆ ಬಲವಂತ ಇಲ್ಲ ಎಂದು ಸ್ಪಷ್ಟಪಡಿಸಿದರು.

ಬಿಡದಿಯಲ್ಲಿ ನಡೆದ ಘಟನೆ ಮನಸ್ಸಿಗೆ ನೋವಾಗಿದೆ. ರಾಜಕೀಯಪ್ರೇರಿತ ಕುಮ್ಮಕ್ಕಿನಿಂದ ಅಧಿಕಾರಿಗಳಿಗೆ ತೊಂದರೆ ನೀಡಿದ್ದಾರೆ. ರೈತರನ್ನು ತಪ್ಪುದಾರಿಗೆ ಎಳೆಯುವ ಸಂಚು ನಡೆಯುತ್ತಿದೆ. ಎಲ್ಲರ ಮನಸ್ಸಿಗೆ ನೋವುಂಟು ಮಾಡುವುದು ನನಗೆ ಇಷ್ಟವಿಲ್ಲ. ಇದು ನನ್ನ ಕನಸಿನ ಯೋಜನೆಯಲ್ಲ. ಹಾಗೆಂದು ನಾನೆಲ್ಲೂ ಹೇಳಿಲ್ಲ. ಈ ಯೋಜನೆಯ ಪಿತಾಮಹ ಆಗಲು ಇಷ್ಟವಿಲ್ಲ. ಹಿರಿಯರು ನೀಡಿದ ಮಾರ್ಗದರ್ಶನದ ಪ್ರಕಾರ ಮುನ್ನಡೆಯುವ ಕೆಲಸ ಮಾತ್ರ ಮಾಡುತ್ತಿದ್ದೇನೆ ಎಂದರು.

**ರಿಯಲ್ ಎಸ್ಟೇಟ್ ದಂಧೆ ಮಾಡಿದ್ದು ಯಾರು?:** ಬೆಂಗಳೂರಿನ ಸುತ್ತಮುತ್ತಲು ಹಲವಾರು ಸಾವಿರ ಎಕರೆ ಜಮೀನು ಹಲವು ಯೋಜನೆಗಳಿಗೆ ಸ್ವಾಧೀನ ಆಗಿದೆ. ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ಸಾವಿರಾರು ಎಕರೆ ಸ್ವಾಧೀನ ಮಾಡಲಾಗಿದೆ.



### ನಾನು ಸಿಎಂ ಆಗಿರೋದು ಕೆಲವರಿಗೆ ಸಹಿಸಲು ಆಗುತ್ತಿಲ್ಲ

**ನಾನು ಹುಟ್ಟಾ ರೈತನ ಮಗ. ರೈತನ ಶ್ರಮದ ಬಗ್ಗೆ ನನಗೆ ವೈಯಕ್ತಿಕ ಅನುಭವಿದೆ. ನಾನು ಸಿಎಂ ಅಗಿರುವುದು ಕೆಲವರಿಗೆ ತಡೆದುಕೊಳ್ಳಲು ಆಗುತ್ತಿಲ್ಲ. ಅವರಿಗೆ ನಿದ್ರೆ ಬರುತ್ತಿಲ್ಲ. ನನ್ನನ್ನು ಜೈಲಿಗೆ ಕಳುಹಿಸಲು ಎಷ್ಟು ವರ್ಷದಿಂದ ಸಂಚು ಮಾಡುತ್ತಿದ್ದಾರೆ ಎಂದು ಎಲ್ಲರಿಗೂ ತಿಳಿದಿದೆ. ಡಿಕೆಶಿ ಜೈಲಿಗೆ ಹೋಗುವ ದಿನ ಬಂದೇ ಬರುತ್ತದೆ ಎಂದು ಕುಮಾರಣ್ಣ ಅವರು ಇಂದೂ ಹೇಳಿದ್ದಾರೆ. ಅವರಿಗೆ ಒಳ್ಳೆಯದಾಗಲಿ. ನನಗೆ ಜೈಲು ಹೊಸದೇನಲ್ಲ ಎಂದು ಡಿ.ಕೆ. ಶಿವಕುಮಾರ್ ವ್ಯಂಗ್ಯವಾಡಿದರು.**

### ಸಾಧಕ-ಬಾಧಕ ಆಲಿಸಲು ವಿಶೇಷ ಸಮಿತಿ ರಚನೆ

**ಬೆಂಗಳೂರು, ಜು.15: ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ಸಾಧಕ–ಬಾಧಕಗಳ ಪರಿಶೀಲನೆ ಹಾಗೂ ರೈತರ ಅಹವಾಲು ಆಲಿಸಲು ವಿಶೇಷ ಸಮಿತಿ ರಚಿಸುವುದಾಗಿ ಸಿಎಂ ಡಿ.ಕೆ. ಶಿವಕುಮಾರ್ ಘೋಷಿಸಿದ್ದಾರೆ. ವಿಧಾನಸೌಧದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಮಿತಿಯು ನೇರವಾಗಿ ರೈತರ ಸಮಸ್ಯೆಗಳನ್ನು ಕೇಳಬೇಕು. ಈ ಯೋಜನೆ ಜನರಿಗೆ ಬೇಕೋ ಅಥವಾ ಬೇಡವೋ ಎಂಬ ಎಲ್ಲ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ವರದಿ ನೀಡಲು ಸೂಚಿಸಲಾಗುವುದುಎಂದು ಸ್ಪಷ್ಟಪಡಿಸಿದರು. ಹಾಗೂ ರೆಡ್‌ಜೋನ್ ಯಾವುದೇ ಕಾರಣಕ್ಕೂ ತೆರವು ಮಾಡುವುದಿಲ್ಲ. ಈ ಹಿಂದೆ ಹೊರಡಿಸಲಾಗಿರುವ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದರು.**

ಇಂದು ಸುತ್ತಮುತ್ತಲಿನ ಜಮೀನಿನ ಬೆಲೆ ಏನೆಂದು ಎಲ್ಲರಿಗೂ ಗೊತ್ತು. 2006ರಲ್ಲಿ ಮುಖ್ಯಮಂತ್ರಿ ಆಗಿದ್ದ ಕುಮಾರಸ್ವಾಮಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, 5 ಉಪನಗರಗಳ ಸಮಗ್ರ ಅಭಿವೃದ್ಧಿಗೆ ಯೋಜನೆಗೆ ತೀರ್ಮಾನಿಸಿದ್ದರು. ...6ನೇ ಪುಟಕ್ಕೆ

## ಬಡವರ ಭೂಮಿ ಕಸಿಯಲು ಅಧಿಸೂಚನೆ ಹೊರಡಿಸಿರುವುದು ಅಮಾನವೀಯ: ಎಚ್‌ಡಿಕೆ

**ನವದೆಹಲಿ, ಜು.15: ಈಗಾಗಲೇ ಭೂಸ್ವಾಧೀನಕ್ಕೆ ಅಧಿಸೂಚನೆ ಮಾಡಲ್ಪಟ್ಟ ಮೂರು ಗ್ರಾಮಗಳ ರೈತರು ಬೀದಿಯಲ್ಲಿ ಹೋರಾಟ ನಡೆಸುತ್ತಿದ್ದರೆ, ಇನ್ನೊಂದೆಡೆ ನಾಲ್ಕು ಹಳ್ಳಿಗಳ ಬಡಜನರ ಭೂಮಿ ಕಸಿಯಲು ರಾಜ್ಯ ಸರ್ಕಾರ ನೋಟಿಫಿಕೇಶನ್ ಹೊರಡಿಸಿರುವುದು ಅಮಾನವೀಯ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಕಿಡಿಕಾರಿದ್ದಾರೆ.**

ನವದೆಹಲಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಒಂದು ಕಡೆ ಕರ್ನಾಟಕದ ಮುಖ್ಯಮಂತ್ರಿಗಳು ಮಾಧ್ಯಮಗೋಷ್ಠಿ ನಡೆಸಿ ನಾಟಕವಾಡುತ್ತಿದ್ದರೆ, ಮತ್ತೊಂದು ಕಡೆ ಗುಟ್ಟು ಗುಟ್ಟಾಗಿ ನಾಲ್ಕು ಗ್ರಾಮಗಳ ರೈತರನ್ನು ಶಾಶ್ವತವಾಗಿ ಒಕ್ಕಲೆಬ್ಬಿಸಲು ಅಧಿಸೂಚನೆ ಹೊರಡಿಸಿರುವುದು ಅಮಾನವೀಯ ಮತ್ತು ಖಂಡನೀಯ. ಬಲವಂತವಾಗಿ ಯಾರಿಂದಲೂ ಭೂಮಿ ಪಡೆಯುವುದಿಲ್ಲ ಎನ್ನುತ್ತೀರಿ, 2 ತಿಂಗಳು ಕಾಯುತ್ತೇನೆ, ಸಮಿತಿ ಮಾಡುತ್ತೇನೆ ಎಂದೆಲ್ಲಾ ಹೇಳಿಕೆ ನೀಡುತ್ತೀರಿ.

ಜನರು ಈಗ ಕೆರಳಿ ನಿಂತಿದ್ದಾರೆ. ನಿಮ್ಮ ಗ್ರಹಚಾರ ಬಿಡಿಸಲು ರೆಡಿಯಾಗಿದ್ದಾರೆ. ಒಪ್ಪಿಗೆ ಇಲ್ಲದೆ ಅವರ ಜಮೀನು ಜಂಟಿ ಮಾಪನ ಮಾಡಲು ಹೋದರೆ ಮಹಿಳೆಯರು ಸುಮ್ಮನೆ ಇರುತ್ತಾರೆಯೇ? 'ಬನ್ನಿ, ಬೇಕಾದರೆ ನನ್ನನ್ನು ಪೊರಕೆಯಲ್ಲಿ ಹೊಡೆಯಿರಿ' ಎಂದು ಮುಖ್ಯಮಂತ್ರಿ ಹೇಳುತ್ತಾರೆ. ಒಬ್ಬ ಮುಖ್ಯಮಂತ್ರಿ ಬಾಯಲ್ಲಿ ಬರುವ ಮಾತೇ ಇದು? ಎಲ್ಲಿಗೆ ಬಂತು ನೋಡಿ



ಕರ್ನಾಟಕದ ಸ್ಥಿತಿ ಎಂದು ಎಚ್‌ಡಿಕೆ ತೀವ್ರ ಬೇಸರ ವ್ಯಕ್ತಪಡಿಸಿದರು.

**ಬೇಡ ಎಂದಾದರೆ ಯೋಜನೆ ಕೈಬಿಡಿ:** ಬಿಡದಿ ಉಪನಗರ ಯೋಜನೆ ಅಗತ್ಯವಿಲ್ಲ, ಇದು ನನ್ನ ಯೋಜನೆಯಲ್ಲ ಎನ್ನುತ್ತೀರಿ. ಹಾಗಿದ್ದಮೇಲೆ ಮುಂದುವರಿಸುತ್ತಿದ್ದೀರಿ ಏಕೆ, ತಕ್ಷಣವೇ ಕೈಬಿಡಿ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಒತ್ತಾಯಿಸಿದರು.

ಕುಮಾರಸ್ವಾಮಿ ಮಾಡಿದ್ದನ್ನು ಮುಂದುವರಿಸಿಕೊಂಡು ಹೋಗುತ್ತಿದ್ದೇನೆ ಎಂದು ಹೇಳುವುದಕ್ಕೆ ಆತ್ಮಸಾಕ್ಷಿ ಹೇಗೆ ಬರುತ್ತದೆ ಇದೇ ಕಾಂಗ್ರೆಸ್ ಪಕ್ಷದ ನಾಯಕರು ಹಾಗೂ ರೈತರು ಟೌನ್‌ಶಿಪ್ ಯೋಜನೆ ಬೇಡ ಎಂದು ಒತ್ತಾಯಿಸಿದ ಕಾರಣಕ್ಕೆ ಯೋಜನೆಯನ್ನೇ ರದ್ದು ಮಾಡಿದ್ದೇನೆ. ಅದರ ಬಗ್ಗೆ ವಿಧಾನ ಕಲಾಪದಲ್ಲಿ ಹಾಗೂ

### ಬ್ರ್ಯಾಂಡ್ ಬೆಂಗಳೂರಿನ ಹಣೆಬರಹ ಜನರು ನೋಡುತ್ತಿದ್ದಾರೆ

**ಸಿಂಗಾಪುರ ಹೆಸರಿನಲ್ಲಿ ನೀವು ಬೆಂಗಳೂರಿನ ನಗರವನ್ನು ಅಭಿವೃದ್ಧಿ ಮಾಡಿದ್ದರಲ್ಲಾ, ಇವತ್ತು ಕೂಡ ಬೆಂಗಳೂರು ಜನರು ಅದರ ನೋವು ಅನುಭವಿಸುತ್ತಿದ್ದಾರೆ. ಹಾಗೆಯೇ ನಿಮ್ಮ ಬ್ರ್ಯಾಂಡ್ ಬೆಂಗಳೂರಿನ ಹಣೆಬರವನ್ನು ಜನರು ಮೂರು ವರ್ಷಗಳಿಂದ ನೋಡುತ್ತಿದ್ದಾರೆ. ಇನ್ನು ಬಿಡದಿ ಟೌನ್‌ಶಿಪ್ ಮಾಡಿದರೆ ಇನ್ನೇನು ಇನ್ನೇನು ಮಾಡುತ್ತಿರೋ ದೇವರೇ ಬಲ್ಲ. ಯಾರು ಯಾರಿಗೆ ರೈತರ ಭೂಮಿಯನ್ನು ಹರಿದು ಹರಾಜು ಹಾಕುತ್ತಿರೋ ಗೊತ್ತಿಲ್ಲ ಎಂದು ಎಚ್.ಡಿ.ಕೆ. ಮಾರ್ಮಿಕವಾಗಿ ಹೇಳಿದರು.**

ಸ್ವಾತಂತ್ರ್ಯ ದಿನಾಚರಣೆಯ ಭಾಷಣದಲ್ಲಿ ಬಹಿರಂಗವಾಗಿ ಘೋಷಣೆ ಮಾಡಿದ್ದೇನೆ. ಈ ವಿಷಯ ಈ ಮುಖ್ಯಮಂತ್ರಿಗೆ ಗೊತ್ತಿಲ್ಲವೇ ಎಂದು ಟಾಂಗ್ ನೀಡಿದರು. ಯಾರಿಗೂ ಬೇಡದ ಯೋಜನೆಯನ್ನು ಜಾರಿಗೆ ತರಲು ಯಾಕೆ ಇಷ್ಟೊಂದು ಹಠವೇಕೆ. ಇದರಲ್ಲಿ ಯಾರ ಹಿತಾಸಕ್ತಿ ಅಡಗಿದೆ ಎಂದು ಎಚ್‌ಡಿಕೆ ಪ್ರಶ್ನಿಸಿದರು.

ಜನರೇನು ದಡ್ಡರಲ್ಲ. ಜನರಿಗೆ ಎಲ್ಲಾ ಒಳಸುಳಿಗಳು ಅರ್ಥವಾಗುತ್ತಿವೆ.

...6ನೇ ಪುಟಕ್ಕೆ

## ಮಾಜಿ ಪ್ರಧಾನಿ ಎಚ್‌ಡಿಡಿ ಪತ್ನಿ ಆಸ್ಪತ್ರೆಗೆ ದಾಖಲು

**ಬೆಂಗಳೂರು, ಜು.15:** ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರ ಪತ್ನಿ ಚೆನ್ನಮ್ಮ ಆರೋಗ್ಯದಲ್ಲಿ ಏರುಪೇರು ಕಂಡುಬಂದ ಹಿನ್ನೆಲೆಯಲ್ಲಿ ಅವರನ್ನು ಬುಧವಾರ ನಗರದ ಮಣಿಪಾಲ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.



## ಮಳೆ ಕೊರತೆ: ನೀರು ಹರಿಸದೆ ಯಥಾಸ್ಥಿತಿ ಕಾಪಾಡಿಕೊಳ್ಳಿ

■ **ಕರ್ನಾಟಕ–ತಮಿಳುನಾಡು, ಪುದುಚೇರಿ ರಾಜ್ಯಗಳಿಗೆ ಸಿಡಬ್ಲ್ಯುಎಂಎ ಸೂಚನೆ**

**ನವದೆಹಲಿ, ಜು.15:** ಕರ್ನಾಟಕದಲ್ಲಿ ವಾಡಿಕೆಯಂತೆ ಈ ಬಾರಿ ಕಾವೇರಿ ಜಲಾಯನ ಪ್ರದೇಶದಲ್ಲಿ ಮಳೆಯಾಗದ ಹಿನ್ನೆಲೆಯಲ್ಲಿ ತಮಿಳುನಾಡಿಗೆ ಸದ್ಯಕ್ಕೆ ಕೆಆರ್‌ಎಸ್ ಅಣೆಕಟ್ಟಿನಿಂದ ನೀರು ಹರಿಸದೆ ಯಥಾಸ್ಥಿತಿ ಕಾಪಾಡಿಕೊಳ್ಳಬೇಕೆಂದು ಉಭಯ ರಾಜ್ಯಗಳಿಗೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ(ಸಿಡಬ್ಲ್ಯುಎಂಎ) ಸೂಚನೆ ನೀಡಿದೆ. ರಾಜ್ಯದ ಪರವಾಗಿ ಮಾತನಾಡಿದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕರ್ನಾಟಕದಲ್ಲಿ ಈ ಬಾರಿ ಜುಲೈ ತಿಂಗಳ ಮಧ್ಯ ಭಾಗ ಸಮೀಪಿಸಿದ್ದರೂ ನಮಗೆ ವಾಡಿಕೆಯಂತೆ ಮಳೆ ಬಂದಿಲ್ಲ. ಕಾವೇರಿ ಜಲಾನಯನ ಪ್ರದೇಶಗಳ ವ್ಯಾಪ್ತಿಗೆ ಒಳಪಡುವ ಕೆಆರ್‌ಎಸ್, ಕಬಿನಿ, ಹಾರಂಗಿ ಮತ್ತು ಹೇಮಾವತಿ ಜಲಾಶಕ್ತಿ ಇಲಾಖೆಗಳಲ್ಲಿ ನೀರಿನ ಸಂಗ್ರಹ ಅತ್ಯಂತ ಕಡಿಮೆ ಪ್ರಮಾಣದಲ್ಲಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಇದು ಏನೇನೂ ಸಾಲದು. ಹೀಗಾಗಿ ಪ್ರಸ್ತುತ ಸಂದರ್ಭದಲ್ಲಿ ತಮಿಳುನಾಡಿಗೆ ನೀರು ಹರಿಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು. ಬಹುತೇಕ ಜಲಾಶಯಗಳಲ್ಲಿ ನೀರಿನ ಸಂಗ್ರಹ ಡೆಡ್ ಸ್ಟೋರೇಜ್ ತಲುಪಿದೆ. ಈ ಹಂತದಲ್ಲಿ ನಾವು ನೀರು ಹರಿಸುವುದಾದರೂ ಹೇಗೆ? ಎಂದು ಪ್ರಶ್ನೆ ಮಾಡಿದರು. ಈ ನಾಲ್ಕು ಜಲಾಶಯಗಳಲ್ಲಿ ನೀರನ್ನು ಕೃಷಿ ಚಟುವಟಿಕೆಗಳಿಗೂ ಬಳಸದೆ ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳುತ್ತಿದ್ದೇವೆ. ರೈತರ ಮನವಿ ಮಾಡಿದರೂ ನಾಲೆಗಳಿಗೆ ನೀರನ್ನು ಹರಿಸಿಲ್ಲ. ಮುಂದೆ ಮಳೆಯಾದರೆ ಸಂಕಷ್ಟ ಸೂತ್ರದ ಪ್ರಕಾರ ನೆರೆಯ ರಾಜ್ಯಕ್ಕೆ ನೀರು ಹರಿಸಲು ಅಭ್ಯಂತರವಿಲ್ಲ ಎಂದು ಸ್ಪಷ್ಟಪಡಿಸಿದರು. ಕೃಷಿ ಚಟುವಟಿಕೆಗೆ ನೀರು ಹರಿಸುವಂತೆ ತಮ ತಮಿಳುನಾಡು ಬೇಡಿಕೆ ಇಟ್ಟಿದೆ. ಇದು ಹೇಗೆ ಸಾಧ್ಯ ಎಂದು ಗೌರವ ಗುಪ್ತ ಪ್ರಶ್ನಿಸಿದರು. ಕರ್ನಾಟಕದ ವಾದವನ್ನು ಒಪ್ಪದ ತಮಿಳುನಾಡು ಅಧಿಕಾರಿಗಳು ಸಂಕಷ್ಟ ಸೂತ್ರದ ಪ್ರಕಾರ ನಮಗೆ ಈ ವರ್ಷದ ನೀರನ್ನು ಹರಿಸಲು ಸೂಕ್ತ ನಿರ್ದೇಶನ ನೀಡಬೇಕೆಂದು ಸಭೆಯಲ್ಲಿ ತಮ ವಾದವನ್ನು ಮಂಡಿಸಿದರು. ಅಂತಿಮವಾಗಿ ಎರಡು ಕಡೆ ವಾದ–ಪ್ರತಿವಾದ ಆಲಿಸಿದ ಪ್ರಾಧಿಕಾರದ ಅಧಿಕಾರಿಗಳು ಯಥಾಸ್ಥಿತಿ ಕಾಪಾಡಿಕೊಳ್ಳಲು ಮೂರು ರಾಜ್ಯದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಮತ್ತೆ ಚುರುಕು ಪಡೆದ ಸಂಪುಟ ವಿಸ್ತರಣೆ ಪ್ರಕ್ರಿಯೆ

**ನವದೆಹಲಿ, ಜು.15:** ರಾಜ್ಯ ಕಾಂಗ್ರೆಸ್ ಸರ್ಕಾರದ ಬಹುನಿರೀಕ್ಷಿತ ಸಚಿವ ಸಂಪುಟ ವಿಸ್ತರಣೆ ಪ್ರಕ್ರಿಯೆಗೆ ಮತ್ತೆ ವೇಗ ಸಿಕ್ಕಿದೆ. ಸುಮಾರು ಒಂದು ತಿಂಗಳ ವಿರಾಮದ ಬಳಿಕ ಸಚಿವ ಸಂಪುಟ ವಿಸ್ತರಣೆ ಕುರಿತು ಚಟುವಟಿಕೆಗಳು ತೀವ್ರಗೊಂಡಿದ್ದು, ಹೈಕಮಾಂಡ್ ಬುಲಾವ್ ಬೆನ್ನಲ್ಲೇ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಮಾಜಿ ಸಿಎಂ ಸಿದ್ಧರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ದೆಹಲಿ ತಲುಪಿದ್ದಾರೆ.

ಇಂದು ಕಾಂಗ್ರೆಸ್ ಹೈಕಮಾಂಡ್ ನಾಯಕರೊಂದಿಗೆ ರಾಜ್ಯದ ರಾಜಕೀಯ ಬೆಳವಣಿಗೆ, ಸಚಿವ ಸಂಪುಟ ವಿಸ್ತರಣೆ, ಪ್ರಾದೇಶಿಕ ಹಾಗೂ ಜಾತಿ ಸಮತೋಲನ ಸೇರಿದಂತೆ ಹಲವು ವಿಷಯಗಳ ಕುರಿತು ಮಹತ್ವದ ಸಭೆ ನಡೆಯಲಿದ್ದು, ಅದರಲ್ಲೇ ಅಂತಿಮ ತೀರ್ಮಾನ ಹೊರಬೀಳುವ ಸಾಧ್ಯತೆ ಇದೆ. ಎಲ್ಲವೂ ಯೋಜನೆಯಂತೆ ನಡೆದರೆ ಭಾನುವಾರದೊಳಗೆ ನೂತನ ಸಚಿವರ ಪ್ರಮಾಣವಚನ ಸಮಾರಂಭ ನಡೆಯುವ ಸಾಧ್ಯತೆ ಇದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

### ವರಿಷ್ಠರ ಬುಲಾವ್ ಬೆನ್ನಲ್ಲೇ ದೆಹಲಿ ತಲುಪಿದ ಸಿಎಂ, ಮಾಜಿ ಸಿಎಂ ಹಾಗೂ ಕೆಪಿಸಿಸಿ ಅಧ್ಯಕ್ಷರು

### ದೆಹಲಿಯಲ್ಲಿ ಹೈಕಮಾಂಡ್ ಸಭೆ, ವಾರಾಂತ್ಯದಲ್ಲಿ ಪ್ರಮಾಣವಚನ ಸಾಧ್ಯತೆ

ಸಚಿವ ಸ್ಥಾನಕ್ಕಾಗಿ ಆಕಾಂಕ್ಷಿಗಳ ಪೈಪೋಟಿಯೂ ಜೋರಾಗಿದ್ದು, ಹಲವು ಶಾಸಕರು ಮತ್ತು ಹಿರಿಯ ನಾಯಕರು ದೆಹಲಿಯಲ್ಲಿ ಬೀಡುಬಿಟ್ಟಿದ್ದಾರೆ. ರಾಜೇಂದ್ರ ರಾಜಣ್ಣ, ವಿಜಯಾನಂದ ಕಾಶಪ್ಪನವರ್, ಹಂಪನಗೌಡ ಬಾದರ್ಲಿ, ಬಸನಗೌಡ ದದ್ದಲ್, ಎಂ.ಬಿ. ಪಾಟೀಲ, ಕೃಷ್ಣಮೂರ್ತಿ, ಬಿ. ನಾಗೇಂದ್ರ, ಲಕ್ಷ್ಮಣ ಸವದಿ, ಡಾ. ಅಜಯ್ ಸಿಂಗ್, ಜಿ.ಎಸ್. ಪಾಟೀಲ, ನಾರಾ ಭರತ್ ರೆಡ್ಡಿ, ಕಂಪ್ಲಿ ಗಣೇಶ್, ಶ್ರೀನಿವಾಸಯ್ಯ ಎನ್., ಜಿ.ಎಚ್. ಶ್ರೀನಿವಾಸ್, ಎಚ್.ಡಿ. ತಮ್ಮಯ್ಯ, ಆರ್.ಬಿ. ತಿಮ್ಮಾಪುರ, ಸಲೀಂ ಅಹ್ಮದ್, ಸಿ. ಪುಟ್ಟರಂಗಶೆಟ್ಟಿ, ಶರಣಬಸಪ್ಪ ದರ್ಶನಾಪುರ, ಎ. ವಸಂತ್ ಕುಮಾರ್, ಶರಣೇಗೌಡ ಬಯ್ಯಾಪುರ, ಬಿ. ಶಿವಣ್ಣ ಸೇರಿದಂತೆ ಹಲವು ನಾಯಕರು ದೆಹಲಿಯಲ್ಲಿ ಲಾಬಿ ನಡೆಸುತ್ತಿದ್ದಾರೆ.

ರಾಹುಲ್ ಗಾಂಧಿ ಸಮ್ಮುಖದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್, ಉಸ್ತುವಾರಿ ರಣದೀಪ್ ಸುರ್ಜೆವಾಲ ಚರ್ಚೆಗಳು ನಡೆಯಲಿದ್ದು ಚುನಾವಣಾ ಲೆಕ್ಕಚಾರದಲ್ಲಿ ಸಂಪುಟ ವಿಸ್ತರಣೆಯಾಗಬಹುದು, ಒಂದಷ್ಟು ಯುವ ಮುಖಗಳಿಗೂ ಆದ್ಯತೆ ಸಿಗಬಹುದು ಎನ್ನಲಾಗುತ್ತಿದೆ.

### ಸಚಿವ ಸ್ಥಾನ ನೀಡುವಂತೆ ಮುಖ್ಯಮಂತ್ರಿಗೆ ಪಂಚ ಪೀಠಾಧಿಪತಿಗಳ ಒತ್ತಾಯ

## ವಿಜಯಾನಂದ ಕಾಶಪ್ಪನವರಿಗೆ ಕೃಪೆ ತೋರುವರೇ ಡಿ.ಕೆ. ಶಿವಕುಮಾರ್?

**ನವದೆಹಲಿ, ಜು. 15:** ಸಚಿವ ಸಂಪುಟ ವಿಸ್ತರಣೆ ಸೂಚನೆ ಸಿಕ್ಕ ಬೆನ್ನಲ್ಲೇ ದೆಹಲಿಯಲ್ಲಿ ಬೀಡುಬಿಟ್ಟಿರುವ ಸಚಿವ ಸ್ಥಾನದ ಆಕಾಂಕ್ಷಿಗಳು ನಾಯಕರ ಮೇಲೆ ಒತ್ತಡ ಹೇರುತ್ತಿದ್ದಾರೆ. ಈ ಪೈಕಿ ಉತ್ತರಕರ್ನಾಟಕದ ಪ್ರಭಾವಿ ನಾಯಕ ವಿಜಯಾನಂದ ಕಾಶಪ್ಪನವರ್‌ಗೆ ಸಚಿವ ಸ್ಥಾನ ನೀಡಲೇಬೇಕೆಂದು ವೀರಶೈವ ಸಮುದಾಯದ ಧಾರ್ಮಿಕ ಮುಖಂಡರೇ ಬಹಿರಂಗವಾಗಿ ಧ್ವನಿಯೆತ್ತುವ ಮೂಲಕ ಒತ್ತಡ ಹೆಚ್ಚಿಸಿದ್ದಾರೆ.

ಪಂಚ ಪೀಠಾಧೀಶರಾದ ರಂಭಾಪುರಿ ಮಹಾಪೀಠದ ಡಾ. ಪ್ರಸನ್ನ ರೇಣುಕ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು, ಉಜ್ಜಯಿನಿ ಮಹಾಪೀಠದ ಜಗದ್ಗುರು ಸಿದ್ದಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ, ಕೇದಾರ ಪೀಠದ ಭೀಮಾಶಂಕರ ಲಿಂಗ ಶಿವಾಚಾರ್ಯ ಭಗವತ್ಪಾದರು, ಶ್ರೀಶೈಲ ಪೀಠದ ಡಾ. ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯರು ಹಾಗೂ ಕಾಶೀ ಮಹಾಪೀಠದ ಡಾ. ಚಂದ್ರಶೇಖರ ಶಿವಾಚಾರ್ಯ ಆಶೀರ್ವಾದದಿಂದ ಈ ಬಾರಿ ಸಚಿವ ಸಂಪುಟದಲ್ಲಿ ಸ್ಥಾನ ಸಿಗಲಿದೆ ಎಂದು ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈ ನಡುವೆ ದೆಹಲಿಯಲ್ಲಿರುವ ಶಾಸಕ ವಿಜಯಾನಂದ ಕಾಶಪ್ಪನವರ ಅವರು ನನ್ನ ಜನಪರ ಸೇವೆ, ಕಾರ್ಯಗಳಿಂದಲೇ ಸಚಿವ ಸಂಪುಟದಲ್ಲಿ ಸ್ಥಾನ ಸಿಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಪಂಚ ಪೀಠಾಧೀಶರ ಆಶೀರ್ವಾದದಿಂದ ನಮ್ಮ ಕುಟುಂಬದ ಬೆಳವಣಿಗೆ ಸಾಧ್ಯವಾಗಿದೆ. ವೀರಶೈವ–ಲಿಂಗಾಯತ ಸಮುದಾಯದ ಎಲ್ಲ ಒಳಪಂಗಡಗಳನ್ನೂ ಒಟ್ಟಿಗೆ ಕೊಂಡೊಯ್ಯಬೇಕಾಗಿದೆ. ತಂದೆಯವರ ಕನಸಿನಂತೆ ಇಡೀ ಕ್ಷೇತ್ರವನ್ನು ಸಂಪೂರ್ಣ ನೀರಾವರಿ ಮಾಡುವುದು ನನ್ನ ಗುರಿಯಾಗಿದೆ. ಈ ನಿಟ್ಟಿನಲ್ಲಿ ಸಚಿವ ಸ್ಥಾನ ಸಿಕ್ಕರೆ ಹೆಚ್ಚಿನ ಅನುಕೂಲವಾಗಲಿದೆ ಎಂದಿದ್ದಾರೆ.

ಕೆಲವು ಪಟ್ಟಭದ್ರ ಹಿತಾಸಕ್ತಿಗಳು ವೀರಶೈವ ಮತ್ತು ಲಿಂಗಾಯತರನ್ನು ಒಡೆದು ಆಳುತ್ತಿದ್ದಾರೆ. ನಾವು ಒಂದಾದಾಗ ಮಾತ್ರ ದೊಡ್ಡ ಶಕ್ತಿಯಾಗಿ ಹೊರಹೊಮ್ಮಲು ಸಾಧ್ಯ. ನಮ್ಮ ತಂದೆಯವರ ಕಾಲದಲ್ಲಿ ಸುಕ್ಷೇತ್ರ ಕೂಡಲಸಂಗಮದಲ್ಲಿ ಸರ್ವಧರ್ಮ ಸಮ್ಮೇಳನ ಮಾಡುವ ಮೂಲಕ ಪಂಚ ಪೀಠಾಧೀಶ್ವರ ಅಡ್ಡಪಲ್ಲಕ್ಕಿಯ ಉತ್ಸವ ಮಾಡಲಾಗಿತ್ತು. ಸದ್ಯ ಪಂಚ ಪೀಠಾಧೀಶ್ವರರು ಒಂದು ಸಮಯ ನಿಗದಿ ಮಾಡಿ ಅವಕಾಶ ಕೊಟ್ಟರೆ ಮತ್ತೊಮ್ಮೆ ಕೂಡಲಸಂಗಮದಲ್ಲಿ ಅಡ್ಡಪಲ್ಲಕ್ಕಿ ಉತ್ಸವ ಆಯೋಜಿಸುವ ಮೂಲಕ ರಾಜ್ಯಕ್ಕೆ ಹೊಸ ಸಂದೇಶ ನೀಡಬಹುದಾಗಿದೆ ಎಂದು ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ್ ಆಶಯ ವ್ಯಕ್ತಪಡಿಸಿದ್ದಾರೆ.



ಜತೆಗೆ ಮುಖ್ಯಮಂತ್ರಿಗಳು ಸ್ವಾಮೀಜಿಗಳ ಸಮ್ಮುಖದಲ್ಲಿ ಕಾಶಪ್ಪನವರಿಗೆ ಸಚಿವ ಸ್ಥಾನದ ಭರವಸೆ ನೀಡಿದ್ದು ಅದರಂತೆ ಸಿಎಂ ಮಾತು ಉಳಿಸಿಕೊಳ್ಳುತ್ತಾರಾ ನೋಡಬೇಕು.

ಇತ್ತೀಚೆಗೆ ಹುನಗುಂದದಲ್ಲಿ ನಡೆದ ಎಸ್.ಆರ್. ಕಾಶಪ್ಪನವರ 24ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಇಳಕಲ್‌ನ ಗುರು ಮಹಾಂತ ಸ್ವಾಮೀಜಿ, ಶಾಸಕ ವಿಜಯಾನಂದ ಕಾಶಪ್ಪನವರ್ ಸಮಾಜಸೇವೆಯನ್ನು ಕೊಂಡಾಡಿದರು. ಹಾಗೂ ಇವರು ಯಾವುದೇ ಜವಾಬ್ದಾರಿ ನೀಡಿದರೂ ಸಮರ್ಥವಾಗಿ ನಿರ್ವಹಿಸಬಲ್ಲವರಾಗಿದ್ದಾರೆ ಎಂದಿದ್ದಾರೆ.

ಹುನಗುಂದ ತಾಲೂಕಿನ ಹಾವರಗಿ ಗ್ರಾಮದಲ್ಲಿ ಇತ್ತೀಚೆಗೆ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಶೈಲ ಮಹಾಪೀಠದ ಚನ್ನಸಿದ್ದರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ದಿವಂಗತ ಎಸ್.ಆರ್ ಕಾಶಪ್ಪನವರ್ ರಾಜ್ಯದಲ್ಲಿ ನೀರಿನ ಬರ ಎದುರಾದಾಗ ಮಹಾರಾಷ್ಟ್ರದ ಭೀಮಾ ನದಿಯ ಗೇಟ್ ಮುರಿದು ರಾಜ್ಯದ ಜನಕ್ಕೆ ನೀರು ತಂದಿದ್ದರು. ಅವರ ಧರ್ಮ, ಸಮಾಜ ಮತ್ತು ರಾಜಕೀಯ ಈ ಮೂರು ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಾ ನಾಯಕರಾಗಿದ್ದರು. ಧರ್ಮ ಪರಂಪರೆಯನ್ನು ಕಾಪಾಡುವಲ್ಲಿ ಮುಂಚೂಣಿಯಲ್ಲಿದ್ದವರು. ತಂದೆಯವರ ಹಾದಿಯಲ್ಲಿಯೇ ವಿಜಯಾನಂದ ಕಾಶಪ್ಪನವರ ಕೂಡ ಸಾಗುತ್ತಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಜಯಾನಂದ ಕಾಶಪ್ಪನವರಿಗೆ ಸಂಪುಟದಲ್ಲಿ ಸ್ಥಾನ ನೀಡಬೇಕು ಆಗ್ರಹಿಸಿದ್ದಾರೆ.

...6ನೇ ಪುಟಕ್ಕೆ

## ರಷ್ಯಾ ಮೇಲಿನ ಅಮೆರಿಕ ಸುಂಕ ಶೇ.500 ರಿಂದ ಶೇ.100ಕ್ಕೆ ಇಳಿಕೆ

### ಅತಿಹೆಚ್ಚು ತೈಲು ಖರೀದಿಸುವ ಪ್ರಮುಖ ರಾಷ್ಟ್ರಗಳಾದ ಭಾರತ, ಚೀನಾ ನಿರಾಳ

**ವಾಷಿಂಗ್ಟನ್, ಜು.15:** ರಷ್ಯಾದಿಂದ ಕಚ್ಚಾತೈಲ ಮತ್ತು ನೈಸರ್ಗಿಕ ಅನಿಲವನ್ನು ಆಮದು ಮಾಡಿಕೊಳ್ಳುವ ಪ್ರಮುಖ ದೇಶಗಳ ಮೇಲಿನ ಆರ್ಥಿಕ ಒತ್ತಡವನ್ನು ಅಮೆರಿಕ ಗಣನೀಯವಾಗಿ ಕಡಿಮೆ ಮಾಡಿದೆ. ರಷ್ಯಾ ಮೇಲಿನ ನಿರ್ಬಂಧಗಳ ಮಸೂದೆಯನ್ನು ಪರಿಷ್ಕರಿಸಿರುವ ಅಮೆರಿಕದ ಸೆನೆಟರ್‌ಗಳು, ತೈಲ ಆಮದಿನ ಮೇಲಿನ ಗರಿಷ್ಠ ಸುಂಕವನ್ನು ಈ ಹಿಂದೆ ಪ್ರಸ್ತಾವಿಸಲಾಗಿದ್ದ 500%ರಿಂದ 100%ಗೆ ಇಳಿಕೆ ಮಾಡಿದ್ದಾರೆ. ಅಮೆರಿಕದ ಈ ತೀರ್ಮಾನವು ರಷ್ಯಾದಿಂದ ಅತಿ ಹೆಚ್ಚು ತೈಲ ಖರೀದಿಸುವ ಭಾರತ ಮತ್ತು ಚೀನಾಗೆ ಭಾರೀ ನಿರಾಳತೆ ತರಲಿದೆ ಎನ್ನಲಾಗಿದೆ.

ರಾಯಿಟರ್ಸ್ ವರದಿಯ ಪ್ರಕಾರ, ದಿವಂಗತ ಸೆನೆಟರ್ ಲಿಂಡ್ಸೆ ಗ್ರಹಾಂ ಅವರು ಆರಂಭದಲ್ಲಿ ಈ ದ್ವಿಪಕ್ಷೀಯ ಮಸೂದೆಯನ್ನು ಮಂಡಿಸಿದ್ದರು. ರಷ್ಯಾದ ಮೇಲೆ ಕಠಿಣ ನಿರ್ಬಂಧ ಹೇರುವುದು ಮತ್ತು ರಷ್ಯಾ ಇಂಧನದ ಮೇಲೆ ಅತಿಯಾಗಿ ಅವಲಂಬಿತವಾಗಿರುವ ದೇಶಗಳು ತಮ್ಮ ಅವಲಂಬನೆಯನ್ನು ಕಡಿಮೆ ಮಾಡಿಕೊಳ್ಳಲು ಭಾರಿ ಸುಂಕ ವಿಧಿಸುವುದು ಈ ಮಸೂದೆಯ ಮೂಲ ಉದ್ದೇಶವಾಗಿತ್ತು.

ಅದರಂತೆ, ಮೊದಲಿನ ಮಸೂದೆಯಲ್ಲಿ ರಷ್ಯಾದ ತೈಲ ಖರೀದಿಸುವ ದೇಶಗಳ ಮೇಲೆ 500%ರಷ್ಟು ಬ್ಲಾಂಕೆಟ್ ಸುಂಕ ವಿಧಿಸಲು ಪ್ರಸ್ತಾಪಿಸಲಾಗಿತ್ತು. ಆದರೆ, ಈಗ ಪರಿಷ್ಕೃತ ಮಸೂದೆಯಲ್ಲಿ ರಷ್ಯಾದ ಕಚ್ಚಾ ತೈಲ ಮತ್ತು ನೈಸರ್ಗಿಕ ಅನಿಲವನ್ನು ಅತಿ ಹೆಚ್ಚು ಖರೀದಿಸುವ ಪ್ರಮುಖ 5 ದೇಶಗಳಿಗೆ ಈ ಸುಂಕದ ಮಿತಿಯನ್ನು 100%ಗೆ ಸೀಮಿತಗೊಳಿಸಲಾಗಿದೆ.

ಅಮೆರಿಕ ಸಂಸತ್ತು ಮೂಲಗಳ ಪ್ರಕಾರ, ಚೀನಾ, ಭಾರತ, ಸ್ಲೋವಾಕಿಯಾ, ಹಂಗೇರಿ ಹಾಗೂ ಅಜೆರ್ಬೈಜಾನ್ ದೇಶಗಳು ರಷ್ಯಾದ ಕಚ್ಚಾ ತೈಲದ ಐದು ಪ್ರಮುಖ ಗ್ರಾಹಕ ರಾಷ್ಟ್ರಗಳಾಗಿವೆ. ಹಾಗೆಯೇ ಚೀನಾ, ಫ್ರಾನ್ಸ್, ಜಪಾನ್, ಹಂಗೇರಿ ಹಾಗೂ ಬೆಲ್ಜಿಯಂ ರಷ್ಯಾದ ನೈಸರ್ಗಿಕ ಅನಿಲವನ್ನು ಅತಿ ಹೆಚ್ಚು ಆಮದು ಮಾಡಿಕೊಳ್ಳುವ ದೇಶಗಳಾಗಿವೆ.

## ಫೋರ್ಸ್ಡ್ ಲೇಬರ್ ಬಳಸಿ ಉತ್ಪಾದಿಸಿದ ಸರಕು ಆಮದಿಗೆ ನಿಷೇಧ

**ನವದೆಹಲಿ, ಜು.15:** ಬಲವಂತದ ದುಡಿಮೆಯ ಕಾರ್ಮಿಕ ಪದ್ಧತಿ (ಫೋರ್ಸ್ಡ್ ಲೇಬರ್) ಬಳಸಿ ಉತ್ಪಾದಿಸಿದ ಸರಕುಗಳ ಆಮದನ್ನು ಕೇಂದ್ರ ಸರ್ಕಾರ ನಿಷೇಧಿಸಿದೆ. ಭಾರತ ಸೇರಿ 60 ದೇಶಗಳಲ್ಲಿನ ಕಡ್ಡಾಯ ಕಾರ್ಮಿಕ ಪದ್ಧತಿಯ ಕುರಿತು ಅಮೆರಿಕ ತನಿಖೆ ನಡೆಸುತ್ತಿರುವ ಬೆನ್ನಲ್ಲೇ ಈ ಕ್ರಮ ಕೈಗೊಳ್ಳಲಾಗಿದೆ.

### 60 ದೇಶಗಳಲ್ಲಿನ ಕಡ್ಡಾಯ ಕಾರ್ಮಿಕ ಪದ್ಧತಿ ಬಗ್ಗೆ ಅಮೆರಿಕ ತನಿಖೆ ಬೆನ್ನಲ್ಲೇ ವಿದೇಶಿ ವ್ಯಾಪಾರ ನೀತಿ ತಿದ್ದುಪಡಿಗೆ ಮುಂದಾದ ಭಾರತ

ಕೇಂದ್ರ ಸರ್ಕಾರ ತನ್ನ ವಿದೇಶಿ ವ್ಯಾಪಾರ ನೀತಿ 2023ಕ್ಕೆ ತಿದ್ದುಪಡಿ ತಂದಿದ್ದು, ಜುಲೈ 13ರ ಗೆಜೆಟ್ ಅಧಿಸೂಚನೆಯಲ್ಲಿ ಈ ಹೊಸ ನಿಯಮವನ್ನು ಸೇರಿಸಿದೆ. ಈ ನಿಯಮ ಅಧಿಕೃತವಾಗಿ ಪ್ರಕಟಗೊಂಡ 30 ದಿನಗಳ ನಂತರ ಜಾರಿಗೆ ಬರಲಿದೆ. ಈ ಹೊಸ ತಿದ್ದುಪಡಿ ತಕ್ಷಣವೇ ಯಾವುದೇ ದೇಶ ಅಥವಾ ಉತ್ಪನ್ನದ ಮೇಲೆ ನೇರ ನಿಷೇಧ ಹೇರಿಲ್ಲ. ಬದಲಿಗೆ, ಭವಿಷ್ಯದಲ್ಲಿ ವಿದೇಶಿ ವ್ಯಾಪಾರ ಮಹಾನಿರ್ದೇಶನಾಲಯ ನಡೆಸುವ ತನಿಖೆ ಅಥವಾ ಲಭ್ಯವಾಗುವ ಪುರಾವೆಗಳ ಆಧಾರದ ಮೇಲೆ ನಿರ್ದಿಷ್ಟ ಸರಕುಗಳ ಆಮದನ್ನು ನಿಷೇಧಿಸಲು ಸರ್ಕಾರಕ್ಕೆ ಇದು ಅಧಿಕಾರ ನೀಡುತ್ತದೆ.

ಅಂತಾರಾಷ್ಟ್ರೀಯ ಕಾರ್ಮಿಕ ಸಂಸ್ಥೆಯ 1930ರ ಸಮಾವೇಶದ ನಿಯಮಾವಳಿಗಳ ಅನ್ವಯ ಬಲವಂತದ ದುಡಿಮೆ ಪದ್ಧತಿಗೆ ಇಲ್ಲಿ ವ್ಯಾಖ್ಯಾನ ನೀಡಲಾಗಿದೆ. ಇಂತಹ ಉತ್ಪನ್ನಗಳ ಆಮದು ತಡೆಯದ ಕಾರಣಕ್ಕೆ ಭಾರತ ಸೇರಿದಂತೆ 54 ದೇಶಗಳ ಮೇಲೆ ಶೇ. 12.5ರಷ್ಟು ಹೆಚ್ಚುವರಿ ಸುಂಕ ವಿಧಿಸಲು ಅಮೆರಿಕ ಇತ್ತೀಚೆಗೆ ಪ್ರಸ್ತಾಪಿಸಿದೆ. ಆದರೆ, ಈಗಾಗಲೇ ಇಂತಹ ನಿಷೇಧಾತ್ಮಕ ಕ್ರಮ ಕೈಗೊಂಡಿರುವ ಕೆನಡಾ, ಐರೋಪ್ಯ ಒಕ್ಕೂಟ, ಪಾಕಿಸ್ತಾನ ಸೇರಿದಂತೆ 6 ದೇಶಗಳಿಗೆ ಶೇ. 10ರಷ್ಟು ಸುಂಕ ಪ್ರಸ್ತಾಪಿಸಲಾಗಿದೆ. ಪ್ರಸ್ತುತ ಭಾರತ–ಅಮೆರಿಕ ನಡುವೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮಾತುಕತೆ ನಡೆಯುತ್ತಿದೆ.

## ಮಣಿಪುರ: ಸೇನಾ ಶಿಬಿರದ ಮೇಲೆ ದಾಳಿ, ವಾಹನಗಳಿಗೆ ಬೆಂಕಿ

**ಇಂಫಾಲ, ಜು.15:** ಮಣಿಪುರದ ಸೇನಾಪತಿ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಶೋಧ ಕಾರ್ಯಾಚರಣೆಯು ತೀವ್ರ ಸ್ವರೂಪಕ್ಕೆ ತಿರುಗಿದೆ. ಅಸ್ಸಾಂ ರೈಫಲ್ಸ್ ಶಿಬಿರದ ಮೇಲೆ ಆಕ್ರೋಶಿತ ಗುಂಪೊಂದು ಮುತ್ತಿಗೆ ಹಾಕಿ, ಕಲ್ಲು ತೂರಾಟ ನಡೆಸುವುದರ ಜೊತೆಗೆ ಭದ್ರತಾ ಪಡೆಗಳ ವಾಹನಗಳಿಗೆ ಬೆಂಕಿ ಹಚ್ಚಿ ದಾಂಧಲೆ ನಡೆಸಿರುವ ಘಟನೆ ಮಂಗಳವಾರ ರಾತ್ರಿ ವರದಿಯಾಗಿದೆ.

ಮಣಿಪುರದ ಸೇನಾಪತಿ ಜಿಲ್ಲೆಯ ನಾಗಾ ತಫೌನಲ್ಲಿರುವ ಅಸ್ಸಾಂ ರೈಫಲ್ಸ್ ಶಿಬಿರದ ಮೇಲೆ ಈ ದಾಳಿ ನಡೆದಿದೆ. ಎನ್‌ಎಸ್‌ಸಿಎನ್ (ಐಎಂ) ನ ಓಕ್ಲಾಂಗ್ ಶಿಬಿರದ ಸಮೀಪವಿರುವ ಮಕುಇಲಾಂಗ್ಡಿ ಪ್ರದೇಶದಲ್ಲಿ ಶಸ್ತ್ರಸಜ್ಜಿತ ವ್ಯಕ್ತಿಗಳ ಚಲನವಲನಗಳ ಬಗ್ಗೆ ಖಚಿತ ಮಾಹಿತಿ ದೊರೆತಿತ್ತು. ಕದನ ವಿರಾಮ ನಿಯಮಗಳನ್ನು ಉಲ್ಲಂಘಿಸಿ ಶಸ್ತ್ರಾಸ್ತ್ರಗಳನ್ನು ಹಿಡಿದು ಹಾಗೂ ಸಮವಸ್ತ್ರ ಧರಿಸಿ ಶಸ್ತ್ರಸಜ್ಜಿತ ಗುಂಪುಗಳು ಓಡಾಡುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಕಂಡುಬಂದ ಹಿನ್ನೆಲೆಯಲ್ಲಿ, ಅಸ್ಸಾಂ ರೈಫಲ್ಸ್ ಪಡೆಗಳು ಅಲ್ಲಿ ಶೋಧ ಕಾರ್ಯಾಚರಣೆಯನ್ನು ಕೈಗೊಂಡಿದ್ದವು. ಈ ವಿಷಯವನ್ನು ಕದನ ವಿರಾಮ ಮೇಲ್ವಿಚಾರಣಾ ಗುಂಪಿನ ಗಮನಕ್ಕೂ ತರಲಾಗಿತ್ತು ಎಂದು ರಕ್ಷಣಾ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಆದರೆ, ಕಾರ್ಯಾಚರಣೆಯ ಸಂದರ್ಭದಲ್ಲಿ ಮಕುಇಲಾಂಗ್ಡಿ ಮತ್ತು ಓಕ್ಲಾಂಗ್ ಗ್ರಾಮಗಳ ನಿವಾಸಿಗಳು, ವಿಶೇಷವಾಗಿ ಮಹಿಳೆಯರು ಭದ್ರತಾ ಪಡೆಗಳ ದಾರಿಗೆ ಅಡ್ಡಿಪಡಿಸಿ ಪ್ರತಿರೋಧ ವ್ಯಕ್ತಪಡಿಸಿದ್ದಾರೆ. ಬಳಿಕ ಭದ್ರತಾ ಪಡೆಗಳು ಕಾರ್ಯಾಚರಣೆಯನ್ನು ಮೊಟಕುಗೊಳಿಸಿ ಹಿಂದಕ್ಕೆ ಸರಿದಿದ್ದರೂ, ರಾತ್ರಿ ನೂರಾರು ಜನರಿದ್ದ ಗುಂಪು ಸೇನಾಪತಿ ಪಟ್ಟಣದಲ್ಲಿ ಜಮಾಯಿಸಿ ಅಸ್ಸಾಂ ರೈಫಲ್ಸ್ ಶಿಬಿರದ ಕಡೆಗೆ ನುಗ್ಗಿ ಬಂದಿದೆ. ಶಿಬಿರದ ಒಳಗೆ ನುಗ್ಗಿದ ಆಕ್ರೋಶಿತ ಗುಂಪು ಮನಬಂದಂತೆ ಕಲ್ಲು ತೂರಾಟ ನಡೆಸಿದೆ. ಈ ವೇಳೆ ಒಂದು ಲಘು ವಾಹನಕ್ಕೆ ಬೆಂಕಿ ಹಚ್ಚಲಾಗಿದ್ದು, ಎರಡು ಟ್ರಕ್‌ಗಳನ್ನು ಉರುಳಿಸಿ ಹಾನಿಗೊಳಿಸಲಾಗಿದೆ.

**ನಿತ್ಯ ಪಂಚಾಂಗ 16.07.2026 ಗುರುವಾರ**



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಢ ಮಾಸ**

**ಆಷಾಢ ಶುದ್ಧ, ಬಿದಿಗೆ,**
**ಆಶ್ಲೇಷ ನಕ್ಷತ್ರ,**
**ವಕ್ಕಲಕೇರಿ ಮಾರ್ಕಂಡೇಯೋತ್ಸವ,**
**ಶ್ರೀರಾಮ ರಥೋತ್ಸವ, ಉತ್ತರಶೃಂಗ ಚಂದ್ರೋದಯ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20–9.04 | 10.30–12.00 | 1.30– 12.00 |
| ಮಂಗಳ | ಮ. 3.25–4.59 | 9.00–10.30 | 12.00– 1.30 |
| ಬುಧ | ಮ.12.16–1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42– 12.16 | 3.00– 4.30 | 7.30– 9.00 |
| ಶನಿ | ಬೆ. 9.07– 10.41 | 1.30– 3.00 | 6.00– 7.30 |

# ಬಿಡದಿ ಟೌನ್‌ಶಿಪ್: ಪ್ರಮುಖ 3 ಗ್ರಾಮಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆಗೆ ಅಂತಿಮ ಅಧಿಸೂಚನೆ

**2ನೇ ಹಂತದ ಅಭಿವೃದ್ಧಿಗಾಗಿ ಒಟ್ಟು 2550 ಎಕರೆಗೂ ಅಧಿಕ ಭೂಮಿ ವಶಪಡಿಸಿಕೊಳ್ಳಲು ತೀರ್ಮಾನ**

**ಬೆಂಗಳೂರು, ಜು.15:** ಬೆಂಗಳೂರು ಸಮೀಪದ ಬಿಡದಿ ಸ್ಮಾರ್ಟ್ ಸಿಟಿ ಯೋಜನೆಯ ಜಾರಿಗೆ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆಯನ್ನಿಟ್ಟಿದೆ. ಬಹುನಿರೀಕ್ಷಿತ ಬಿಡದಿ ಟೌನ್‌ಶಿಪ್ ಎರಡನೇ ಹಂತದ ಅಭಿವೃದ್ಧಿಗಾಗಿ ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ ತಾಲೂಕಿನ ಪ್ರಮುಖ ಮೂರು ಗ್ರಾಮಗಳ ಭೂಸ್ವಾಧೀನ ಪ್ರಕ್ರಿಯೆಗೆ ರಾಜ್ಯ ಸರ್ಕಾರ ಇದೀಗ ಅಂತಿಮ ಅಧಿಸೂಚನೆಯನ್ನು ಹೊರಡಿಸಿದೆ.

**ಎಲ್ಲೆಲ್ಲಿ ಭೂಸ್ವಾಧೀನ?**

ಈ ಯೋಜನೆಯಡಿ ಒಟ್ಟು 2,550 ಎಕರೆಗೂ ಅಧಿಕ ಭೂಮಿಯನ್ನು ವಶಪಡಿಸಿಕೊಳ್ಳಲು ತೀರ್ಮಾನಿಸಲಾಗಿದ್ದು, ಈ ಭಾಗದ ಕೈಗಾರಿಕಾ ಮತ್ತು ವಸತಿ ವಲಯದ ಅಭಿವೃದ್ಧಿಗೆ ಹೊಸ ವೇಗ ಸಿಗಲಿದೆ.ಸರ್ಕಾರದ ಅಧಿಕೃತ ಪ್ರಕಟಣೆಯ ಪ್ರಕಾರ, ರಾಮನಗರ ತಾಲೂಕಿನ ಕೆ.ಜಿ.ಗೊಲ್ಲರಪಾಳ್ಯ, ಬನ್ನಿಗಿರಿ ಮತ್ತು ಅರಳಾಳುಸಂದ್ರ ಗ್ರಾಮಗಳ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗುತ್ತಿದ್ದು, ಅದರ ವಿವರಗಳು ಈ ಕೆಳಗಿನಂತಿವೆ:

**1. ಕೆ.ಜಿ.ಗೊಲ್ಲರಪಾಳ್ಯ:** ಈ ಗ್ರಾಮದಲ್ಲಿ ಒಟ್ಟು 313 ಎಕರೆ ಭೂಮಿಯನ್ನು ಸ್ವಾಧೀನಪಡಿಸಿ ಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದ್ದು, ಇದರಲ್ಲಿ 5 ಎಕರೆ ಖರಾಬು ಜಮೀನು ಕೂಡ ಸೇರಿದೆ.

**2. ಬನ್ನಿಗಿರಿ ಗ್ರಾಮ:** ಇಲ್ಲಿ ಒಟ್ಟು 775 ಎಕರೆ 6 ಗುಂಟೆ ಪ್ರದೇಶವನ್ನು ಸ್ವಾಧೀನಪಡಿಸಿ ಕೊಳ್ಳಲಾಗುತ್ತಿದ್ದು, ಇದರಲ್ಲಿ 99 ಎಕರೆ ಖರಾಬು ಭೂಮಿ ಒಳಗೊಂಡಿದೆ.

**3. ಅರಳಾಳುಸಂದ್ರ:** ಅತ್ಯಂತ ಹೆಚ್ಚಿನ ಪ್ರಮಾಣದ ಅಂದರೆ 1,460 ಎಕರೆ 21 ಗುಂಟೆ ಭೂಮಿಯನ್ನು ವಶಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದ್ದು, ಇದರಲ್ಲಿ 30 ಎಕರೆ ಖರಾಬು ಜಮೀನು ಸಹ ಸೇರಿದೆ.

ಒಟ್ಟಾರೆಯಾಗಿ ಈ ಮೂರು ಗ್ರಾಮಗಳಿಂದ ಒಟ್ಟು 2,550 ಎಕರೆ ವಿಸ್ತೀರ್ಣದ ಭೂಮಿಯನ್ನು ಬಿಡದಿ ಟೌನ್‌ಶಿಪ್‌ನ 2ನೇ ಹಂತದ ಬೃಹತ್ ಯೋಜನೆಗಾಗಿ ಬಳಸಿಕೊಳ್ಳಲು ಸರ್ಕಾರ ಸಂಪೂರ್ಣ ಸಿದ್ಧತೆ ನಡೆಸಿದೆ. ಈ ಭೂಸ್ವಾಧೀನ ಪ್ರಕ್ರಿಯೆಯು ಮುಂಬರುವ ದಿನಗಳಲ್ಲಿ ಬಿಡದಿ ಮತ್ತು ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶಗಳ ಮೂಲಸೌಕರ್ಯ ಹಾಗೂ ಆರ್ಥಿಕ ಪ್ರಗತಿಗೆ ಪ್ರಮುಖ ಹೆಜ್ಜೆಯಾಗಲಿದೆ ಎನ್ನಲಾಗಿದೆ.

## ಜಮೀರ್ ಖಾನ್ ವಿರುದ್ಧದ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರ ಅನುಮತಿಯಿಲ್ಲ



ಬೆಂಗಳೂರು, ಜು.15: ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧದ ಐಎಂಎ ಹಗರಣ ಹಾಗೂ ಅಕ್ರಮ ಆಸ್ತಿಗಳಿಕೆ ಆರೋಪಗಳಿಗೆ ಸಂಬಂಧಿಸಿದಂತೆ ತನಿಖೆ ನಡೆಸಲು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ಕೋರಿ ಲೋಕಾಯುಕ್ತ ಸಲ್ಲಿಸಿದ್ದ ಮನವಿಯನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ತಿರಸ್ಕರಿಸಿದ್ದಾರೆ. ತಾಂತ್ರಿಕ ಹಾಗೂ ಕಾನೂನಾತ್ಮಕ ಕಾರಣಗಳನ್ನು ಉಲ್ಲೇಖಿಸಿ ಈ ಸಂಬಂಧದ ಕಡತವನ್ನು ರಾಜ್ಯಪಾಲರು ಲೋಕಾಯುಕ್ತಕ್ಕೆ ವಾಪಸ್ ಕಳುಹಿಸಿದ್ದಾರೆ ಎಂದು ತಿಳಿದುಬಂದಿದೆ.ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಕುರಿತ ಚರ್ಚೆಗಳು ನಡೆಯುತ್ತಿರುವ ಸಂದರ್ಭದಲ್ಲೇ ಈ ನಿರ್ಧಾರ ಹೊರಬಿದ್ದಿರುವುದು ರಾಜಕೀಯ ವಲಯದಲ್ಲಿ ಕುತೂಹಲಕ್ಕೆ ಕಾರಣವಾಗಿದೆ.ರಾಜ್ಯಪಾಲರ ಈ ನಿರ್ಧಾರದಿಂದ ಝಮೀರ್ ಅಹ್ಮದ್ ಖಾನ್ ವಿರುದ್ಧ ಲೋಕಾಯುಕ್ತ ಮುಂದಿಟ್ಟಿದ್ದ ಕಾನೂನು ಪ್ರಕ್ರಿಯೆಗೆ ಸದ್ಯಕ್ಕೆ ಹಿನ್ನಡೆಯಾದಂತಾಗಿದೆ.



ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಶಾಸಕ ಬೇಳೂರು ಗೋಪಾಲಕೃಷ್ಣ ಅವರ ನೇತೃತ್ವದಲ್ಲಿ ಬಿಲ್ಲವ ಅಸೋಸಿಯೇಶನ್ ಪದಾಧಿಕಾರಿಗಳು ಬುಧವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿದರು.

# 1010 ಕೋಟಿ ವೆಚ್ಚದಲ್ಲಿ 10,000 ಭಾರತ್ ಜೋಡೋ ಯುವ ಸಂಘ ಸ್ಥಾಪನೆ

**ಸರ್ಕಾರದ ಯೋಜನೆಗೆ ಟಿ.ಎಂ. ಶಾಹೀದ್ ತೆಕ್ಕಿಲ್ ಶ್ಲಾಘನೆ; ರಾಜ್ಯ ಯುವಜನ ಆಯೋಗ ಸ್ಥಾಪನೆಗೆ ಆಗ್ರಹ**

ಬೆಂಗಳೂರು, ಜು.15: ರಾಜ್ಯದ ಯುವಜನರಲ್ಲಿ ಕ್ರೀಡೆ, ಸಂಸ್ಕೃತಿ ಹಾಗೂ ಸಾಮುದಾಯಿಕ ಸಾಮರಸ್ಯವನ್ನು ಉತ್ತೇಜಿಸಲು ಕರ್ನಾಟಕ ಸರ್ಕಾರವು 10,000 ಭಾರತ್ ಜೋಡೋ ಯುವ ಸಂಘಗಳನ್ನು ಸ್ಥಾಪಿಸಲು ಆದೇಶ ಹೊರಡಿಸಿದೆ. ಒಟ್ಟು 1,010 ಕೋಟಿ ಭಾರಿ ಮೊತ್ತದ ಈ ಯೋಜನೆಗೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷರಾದ (ಸಚಿವ ದರ್ಜೆ) ಟಿ.ಎಂ. ಶಾಹೀದ್ ತೆಕ್ಕಿಲ್ ಅವರು ಮುಕ್ತಕಂಠದಿಂದ ಶ್ಲಾಘಿಸಿ, ಸರ್ಕಾರಕ್ಕೆ ಅಭಿನಂದನೆ ಸಲ್ಲಿಸಿದ್ದಾರೆ. ಇದೇ ಸಂದರ್ಭದಲ್ಲಿ ಅವರು ರಾಜ್ಯದಲ್ಲಿ ಯುವಜನ ಆಯೋಗ ಸ್ಥಾಪಿಸಬೇಕೆಂದು ಸರ್ಕಾರವನ್ನು ಆಗ್ರಹಿಸಿದರು.

ದೇಶದಲ್ಲಿ ಒಗ್ಗಟ್ಟು ಮತ್ತು ಸೌಹಾರ್ದತೆಯನ್ನು ಮೂಡಿಸಲು ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಹಮ್ಮಿಕೊಂಡಿದ್ದ ಐತಿಹಾಸಿಕ 'ಭಾರತ್ ಜೋಡೋ' ಪಾದಯಾತ್ರೆಯ ಆಶಯ ಹಾಗೂ ಸೋದರತ್ವದ ಭಾವನೆಯನ್ನು ತಳಮಟ್ಟದಲ್ಲಿ ಸಾರುವ ನಿಟ್ಟಿನಲ್ಲಿ ಈ ಯೋಜನೆಯನ್ನು ರೂಪಿಸಲಾಗಿದೆ.

ಡಿಕೆಶಿ ನಾಯಕತ್ವದಲ್ಲಿ ಯುವ ಸಬಲೀಕರಣ: ಮಾನ್ಯ ಮುಖ್ಯಮಂತ್ರಿ ಅವರ ವಿಶೇಷ ಕಾಳಜಿಯೊಂದಿಗೆ, ಯುವ ಜನತೆಗೆ ಹೊಸ ನಾಯಕತ್ವದ ಅವಕಾಶಗಳನ್ನು ಸೃಷ್ಟಿಸಲು ಮತ್ತು ಅವರನ್ನು ಸಾಮಾಜಿಕವಾಗಿ ಬಲಿಷ್ಠಗೊಳಿಸಲು ಈ ಯೋಜನೆಗೆ ಮರುಜೀವ ನೀಡಲಾಗಿದೆ. ವಿವಿಧ



ಜಾತಿ, ಧರ್ಮ ಮತ್ತು ಭಾಷೆಯ ಯುವಜನರನ್ನು ಒಂದುಗೂಡಿಸಿ, ಕೋಮು ಸೌಹಾರ್ದತೆ ಹಾಗೂ ಸಾಮುದಾಯಿಕ ಸಾಮರಸ್ಯವನ್ನು ಕಾಪಾಡುವುದು ಮತ್ತು ಸಂವಿಧಾನದ ಮೌಲ್ಯಗಳನ್ನು ಯುವ ಮನಸ್ಸುಗಳಲ್ಲಿ ಬಿತ್ತುವುದು ಈ ಸಂಘಗಳ ಪ್ರಮುಖ ಉದ್ದೇಶವಾಗಿದೆ. ಗ್ರಾಮೀಣ ಭಾಗದ ಪ್ರತಿ ಗ್ರಾಮ ಪಂಚಾಯಿತಿ ಹಾಗೂ ನಗರ ಪ್ರದೇಶದ ವಾರ್ಡ್‌ಗಳಲ್ಲಿ ಸ್ಥಾಪನೆಯಾಗುವ ಪ್ರತಿ ಸಂಘಕ್ಕೆ ವಾರ್ಷಿಕ ತಲಾ ?10 ಲಕ್ಷ ಬಂಡವಾಳ ಮತ್ತು ಕಾರ್ಯಕಾರಿ ಅನುದಾನ ಸಿಗಲಿದೆ.

ಈ ಕುರಿತು ತಿಳಿಸಿದ ಟಿ.ಎಂ. ಶಾಹೀದ್ ತೆಕ್ಕಿಲ್ ಅವರು, ರಾಹುಲ್ ಗಾಂಧೀಜಿಯವರ ಭಾರತ್ ಜೋಡೋ ಪರಿಕಲ್ಪನೆ ಹಾಗೂ ಡಿ.ಕೆ. ಶಿವಕುಮಾರ್ ಅವರ ಯುವ ಸಬಲೀಕರಣದ ದೃಷ್ಟಿಕೋನಕ್ಕೆ ಪೂರಕವಾಗಿರುವ ಈ ಯೋಜನೆ ಐತಿಹಾಸಿಕ ರಾಷ್ಟ್ರ ನಿರ್ಮಾಣದ ಕೆಲಸವಾಗಿದೆ. ಇದರೊಂದಿಗೆ ರಾಜ್ಯದಲ್ಲಿ ಯುವಕರ ಸಮಸ್ಯೆಗಳಿಗೆ ಸ್ಪಂದಿಸಲು ಅಮಲು ಪದಾರ್ಥ ವಿರೋಧಿ ಯೋಜನೆ ನಿರುದ್ಯೋಗ ಸಮಸ್ಯೆ ನಿವಾರಣೆ ಕೋಮು ಸೌಹಾರ್ದತೆ ಸಹಕಾರ ಮನೋಭಾವ ಯುವಜನರ ಸಭಾಲೀಕರಣಕ್ಕೆ ಪ್ರತ್ಯೇಕ 'ಯುವಜನ ಆಯೋಗ'ವನ್ನು ತಕ್ಷಣವೇ ಸ್ಥಾಪಿಸಬೇಕು, ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಟಿ.ಎಂ.ಶಾಹಿದ್ ತೆಕ್ಕಿಲ್ ಒತ್ತಾಯಿಸಿದರು.

# ಗದಗ ಜಿಲ್ಲೆಯ ಹೆಸರುಕಾಳು, ಹತ್ತಿ ಬೆಳೆಗಾರರ ರಕ್ಷಣೆಗೆ ಮುಂದಾದ ಸಂಸದ ಬಸವರಾಜ ಬೊಮ್ಮಾಯಿ

**ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಗೆ ನೊಂದಾಯಿಸಿಕೊಳ್ಳಲು ಗಡುವು ವಿಸ್ತರಣೆಗೆ ಕೇಂದ್ರ ಸಚಿವರಿಗೆ ಬೊಮ್ಮಾಯಿ ಪತ್ರ**

ಗದಗ: 2026–27 ನೇ ಸಾಲಿನ ಪ್ರಧಾನ ಮಂತ್ರಿ ಫಸಲ್ ಬಿಮಾ (ಬೆಳೆ ವಿಮೆ) ಯೋಜನೆಯಡಿ ಹೆಸರುಕಾಳು ಮತ್ತು ಹತ್ತಿ ಬೆಳೆಗಳಿಗೆ ನೋಂದಾಯಿಸಿಕೊಳ್ಳುವ ಅವಧಿಯನ್ನು ವಿಸ್ತರಿಸುವಂತೆ ಸಂಸದ ಬಸವರಾಜ ಬೊಮ್ಮಾಯಿ ಅವರು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಕೋರಿದ್ದಾರೆ.



ಈ ಕುರಿತು ಪತ್ರ ಬರೆದಿರುವ ಅವರು, ಗದಗದ ಜಿಲ್ಲಾಧಿಕಾರಿ ಕಚೇರಿಯಿಂದ ಸ್ವೀಕರಿಸಲಾದ ಮನವಿಯ ಮೇರೆಗೆ 2026–27ನೇ ಸಾಲಿನ ಪ್ರಧಾನಮಂತ್ರಿ ಫಸಲ್ ಬಿಮಾ (ಬೆಳೆವಿಮೆ) ಯೋಜನೆಯಡಿ ಹೆಸರುಕಾಳು ಮತ್ತು ಹತ್ತಿ ಬೆಳೆಗಳಿಗೆ ನೋಂದಾಯಿಸಿಕೊಳ್ಳುವ ಅವಧಿಯನ್ನು ವಿಸ್ತರಿಸುವಂತೆ ಅವರು ಕೋರಿದ್ದಾರೆ.

**ತೀವ್ರ ಮಳೆ ಕೊರತೆಯಿಂದ ಒಣಗುತ್ತಿರುವ ಬೆಳೆಗಳು:** ಗದಗ ಭಾಗದ ರೈತರು ಪ್ರತಿ ವರ್ಷದಂತೆ ಈ ಬಾರಿಯೂ ಅಪಾರ ಪ್ರಮಾಣದಲ್ಲಿ ಹೆಸರುಕಾಳು ಮತ್ತು ಹತ್ತಿ ಬೆಳೆಗಳನ್ನು ಬಿತ್ತನೆ ಮಾಡಿದ್ದಾರೆ.

ಆದರೆ ಪ್ರಸ್ತುತ ಜಿಲ್ಲೆಯಲ್ಲಿ ಮಳೆಯ ತೀವ್ರ ಕೊರತೆ ಎದುರಾಗಿದ್ದು, ಹೊಲದಲ್ಲಿರುವ ಬೆಳೆಗಳು ಒಣಗುವ ಹಂತ ತಲುಪಿವೆ. ಇದರಿಂದ ಆತಂಕಗೊಂಡಿರುವ ರೈತರು ತಮ್ಮ ಬೆಳೆಗಳನ್ನು ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ವಿಮೆಗೊಳಪಡಿಸಲು ಮುಂದಾಗಿದ್ದಾರೆ.

ಪ್ರಸಕ್ತ ವಿಮೆ ಯೋಜನೆಗೆ ನೋಂದಾಯಿಸಿ ಕೊಳ್ಳಲು ನಿಗದಿಪಡಿಸಲಾಗಿದ್ದ ಕೊನೆಯ ದಿನಾಂಕ ಜುಲೈ 15ರಂದು ಮುಕ್ತಾಯಗೊಳ್ಳುತ್ತಿದೆ. ಈ ಹಿನ್ನೆಲೆಯಲ್ಲಿ ರೈತರಿಗೆ ನೆರವಾಗಲು ವಿಮೆಯ ನೋಂದಣಿ ಅವಧಿಯನ್ನು ವಿಸ್ತರಿಸುವುದು ಅತ್ಯಂತ ಅನಿವಾರ್ಯವಾಗಿದೆ ಎಂದು ಬೊಮ್ಮಾಯಿ ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ರೈತರ ಹಿತದೃಷ್ಟಿಯಿಂದ ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಕೃಷಿ ಸಚಿವಾಲಯದ ಉನ್ನತ ಅಧಿಕಾರಿಗಳಿಗೆ ಕಾಲಾವಕಾಶ ವಿಸ್ತರಿಸುವಂತೆ ತಕ್ಷಣವೇ ಸೂಕ್ತ ಆದೇಶ ಹೊರಡಿಸಬೇಕೆಂದು ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಲ್ಲಿ ಬಸವರಾಜ ಬೊಮ್ಮಾಯಿ ವಿನಂತಿಸಿದ್ದಾರೆ.



ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಹಿಂದೂ ಮುಜರಾಯಿ ದೇವಸ್ಥಾನಗಳ ಅರ್ಚಕರು ಮತ್ತು ಉಪಾಧಿವಂತರ ಒಕ್ಕೂಟದ ಪದಾಧಿಕಾರಿಗಳು ಬುಧವಾರ ಭೇಟಿಮಾಡಿದ್ದರು. ಈ ಸಂದರ್ಭದಲ್ಲಿ ಒಕ್ಕೂಟದ ಅಧ್ಯಕ್ಷ ಶ್ರೀವತ್ಸ, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಸಂಘಟನಾ ಕಾರ್ಯದರ್ಶಿ ಮಂಜುನಾಥ್ ದೀಕ್ಷಿತ್ ಮತ್ತಿತರರು ಇದ್ದರು.

**ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ಆರೋಪ**

# ಕಾಂಗ್ರೆಸ್‌ಗೆ ಮತ ಹಾಕುವವರಿಗೆ ಪಿಆರ್‌ಸಿ ನೀಡಿ ಶಾಶ್ವತವಾಗಿ ಇಲ್ಲೇ ನೆಲೆಸುವಂತೆ ಮಾಡುವ ಹುನ್ನಾರ



ರಾಜ್ಯದ ಸುರಕ್ಷತೆ ಮತ್ತು ಹಾಗೂ ಕನ್ನಡಿಗರ ಹಕ್ಕುಗಳಿಗೆ ಧಕ್ಕೆ ತರುವ ಕಾಂಗ್ರೆಸ್ ಸರ್ಕಾರದ ಸಂವಿಧಾನಬಾಹಿರ ಶಾಶ್ವತ ನಿವಾಸ ಪ್ರಮಾಣಪತ್ರ (PRC) ಪ್ರಸ್ತಾವನೆಯನ್ನು ತಕ್ಷಣ ಹಿಂಪಡೆಯುವಂತೆ ಆಗ್ರಹಿಸಿ ಪ್ರತಿಪಕ್ಷ ನಾಯಕ ಆರ್,ಅಶೋಕ್ ಬುಧವಾರ ರಾಜ್ಯ ಬಿಜೆಪಿ ನಿಯೋಗದೊಂದಿಗೆ ಗೌರವಾನ್ವಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರನ್ನು ಲೋಕಭವನದಲ್ಲಿ ಭೇಟಿ ಮಾಡಿ ಅಧಿಕೃತ ಮನವಿ ಸಲಿಸಿದರು.

**ಬೆಂಗಳೂರು, ಜು.15:** ಕಾಂಗ್ರೆಸ್‌ಗೆ ಮತ ಹಾಕುವವರಿಗೆ ಶಾಶ್ವತ ನಿವಾಸಿ ಪ್ರಮಾಣಪತ್ರ (ಪಿಆರ್‌ಸಿ) ನೀಡಿ ಶಾಶ್ವತವಾಗಿ ಇಲ್ಲೇ ನೆಲೆಸುವಂತೆ ಮಾಡಲು ಹುನ್ನಾರ ಮಾಡುತ್ತಿದೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಅವರು ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದರೆ.

ಸರ್ಕಾರದ ನಡೆಯನ್ನು ಆಕ್ಷೇಪಿಸಿ ಪಿಆರ್‌ಸಿ ನೀಡದಂತೆ ರಾಜ್ಯಪಾಲರಿಗೆ ಬುಧವಾರ ದೂರು ನೀಡಿದ ನಂತರ ಸುದ್ದಿಗಾರರ ಜತೆ ಮಾತನಾಡಿ, 10 ವರ್ಷ ರಾಜ್ಯದಲ್ಲಿ ಇರುವವರಿಗೆ ಪಿಆರ್‌ಸಿ ನೀಡುವ ಮೂಲಕ ಅವರು ಈ ರಾಜ್ಯದ ಶಾಶ್ವತ ಪ್ರಜೆ ಎಂಬಂತೆ ಬಿಂಬಿಸಿ ರೇಷನ್ ಕಾರ್ಡ್, ಆರೋಗ್ಯ ಕಾರ್ಡ್, ಮನೆ ಮತ್ತಿತರ ಸೌಕರ್ಯಗಳನ್ನು ನೀಡಲು ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಟೀಕಿಸಿದರು.

ಪಿಎಫ್‌ಐ, ಕೆಎಫ್‌ಡಿ ಉಪಟಳ ರಾಜ್ಯದಲ್ಲಿ ಜಾಸ್ತಿಯಾಗಿದೆ. ಅವರ ಮೇಲಿದ್ದ ಕೇಸುಗಳನ್ನು ಕಾಂಗ್ರೆಸ್‌ನವರು ವಾಪಸ್ ಪಡೆಯುತ್ತಿದ್ದಾರೆ. ಪ್ರಸ್ತುತ ಕರ್ನಾಟಕದಲ್ಲಿ 25ರಿಂದ 30 ಲಕ್ಷ ಈಗ ಬಾಂಗ್ಲಾದೇಶಿಗಳಿರುವ ಬಗ್ಗೆ ಮಾಹಿತಿ ಇದೆ. ಈಗ ಎಸ್‌ಐಆರ್ ನಡೆಯುತ್ತಿದೆ. ಅದಕ್ಕೆ ವಿರುದ್ಧವಾಗಿ ಇವರು ಪಿಆರ್‌ಸಿ ಕೊಡುವುದು ಸರಿಯಲ್ಲ, ಕೇಂದ್ರ ಸರ್ಕಾರಕ್ಕೆ ಮಾತ್ರ ಇಂಥ ಪ್ರಮಾಣಪತ್ರ ಕೊಡಲು ಅಧಿಕಾರ ಇದೆ ಎಂಬುದನ್ನು ಅವರು ರಾಜ್ಯಪಾಲರ ಗಮನಕ್ಕೆ ತಂದರು. ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ), ಜಿಲ್ಲಾ ಪಂಚಾಯಿತಿ ಸೇರಿದಂತೆ ವಿವಿಧ ಚುನಾವಣೆಗೆ ಮತದಾರರನ್ನು ಉಳಿಸಿಕೊಳ್ಳಲು ಅಕ್ರಮವಾಗಿ, ದೇಶದ್ರೋಹಿ ಕ್ರಮ ಕೈಗೊಳ್ಳುತ್ತಿದ್ದಾರೆ. ಈ ಸಂಬಂಧ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ಕೊಡುವುದಾಗಿ ರಾಜ್ಯಪಾಲರು ತಿಳಿಸಿದರು.

ಕಾಲ್ತುಳಿತ ಪ್ರಕರಣ ಮುಚ್ಚಿಹಾಕುವ ಕೆಲಸ

ಕಳೆದ ವರ್ಷ ಆರ್‌ಸಿಬಿ ವಿಕ್ಟರಿ ವೇಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಬಳಿ 11 ಜನರು ಕಾಲ್ತುಳಿತದಲ್ಲಿ ಸಾವನ್ನಪ್ಪಿದ ಪ್ರಶ್ನೆಗೆ ಉತ್ತರಿಸಿದ ಅವರು, ಈ ದುರ್ಘಟನೆಗೆ ರಾಜ್ಯ ಸರ್ಕಾರವೇ ನೇರ ಕಾರಣ ಎಂದು ವಿಧಾನಸಭೆಯಲ್ಲಿ ತಿಳಿಸಿದ್ದೆವು. ಈಗ ವರದಿಯಲ್ಲೇ ಕ್ಲೀನ್‌ಚಿಟ್ ಕೊಟ್ಟಿದ್ದಾರೆ. ಅವತ್ತು ಕಮಿಷನರ್, ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿದ್ದರು. ಇದೀಗ ದೋಷ ಮುಕ್ತರನ್ನಾಗಿ ಮಾಡಿದ್ದಾರೆ. ಹೆಂಡತಿ, ಮಕ್ಕಳ, ಮೊಮ್ಮಕ್ಕಳ ಜೊತೆ ವೇದಿಕೆಯಲ್ಲಿ ಇದ್ದವರ ಮೇಲೆ ಕ್ರಮ ಆಗಬೇಕಿತ್ತು. ಅವರ ಮೇಲೆ ಕೇಸೇ ಮಾಡಿಲ್ಲ ಎಂದು ಆಕ್ಷೇಪಿಸಿದರು. ಇದೀಗ ಅಧಿಕಾರಿಗಳು ನಿರಪರಾಧಿಗಳಾದರೆ, ಅಪರಾಧಿಗಳು ಯಾರು? ಈ ಯುವಜನರ ಸಾವಿಗೆ ನ್ಯಾಯ ಎಲ್ಲಿದೆ? ಎಂದು ಅಶೋಕ್ ಪ್ರಶ್ನಿಸಿದರು. ಈ ಪ್ರಕರಣ ಮುಚ್ಚಿ ಹಾಕುವ ಕೆಲಸವನ್ನು ಮಾಡಿದ್ದಾರೆ. ಇದು ಅಕ್ಷಮ್ಯ ಎಂದು ಆರೋಪಿಸಿದರು.

**ಬಿಡದಿ ಟೌನ್‌ಶಿಪ್ ವಿರೋಧಿಸಿ ನಾಳೆ ಬೃಹತ್ ಪ್ರತಿಭಟನೆ**

ಬಿಡದಿ ಸಮಗ್ರ ಟೌನ್‌ಶಿಪ್ ಯೋಜನೆ ಯನ್ನು ರಾಜ್ಯ ಸರ್ಕಾರ ತಕ್ಷಣವೇ ಕೈಬಿಡಬೇಕು ಎಂದು ಆಗ್ರಹಿಸಿ ಜು.17ರಂದು ಬೆಂಗಳೂರಿನಲ್ಲಿ ಬಿಜೆಪಿ ಬೃಹತ್ ಪ್ರತಿಭಟನೆ ನಡೆಸಲು ನಿರ್ಧರಿಸಿದೆ. ಈ ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯ ನಾಯಕರು, ಶಾಸಕರು, ಸಂಸದರು ಹಾಗೂ ರೈತರು ಭಾಗವಹಿಸಲಿದ್ದಾರೆ ಎಂದು ಪಕ್ಷದ ನಾಯಕರು ತಿಳಿಸಿದ್ದಾರೆ.

ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಬಿಜೆಪಿ ಪ್ರತಿಭಟನೆ ಹಮ್ಮಿಕೊಂಡಿದ್ದು, ಸರ್ಕಾರದ ಮೇಲೆ ಒತ್ತಡ ಹೇರುವ ತೀರ್ಮಾನ ಕೈಗೊಂಡಿದೆ.

# ಬಿಡದಿ ಟೌನ್‌ಶಿಪ್ ಯೋಜನೆಗೆ ಸಮಿತಿ ರಚನೆ, ಕಾಂಗ್ರೆಸ್‌ನ ಹೊಸ ನಾಟಕ: ಪ್ರತಿಪಕ್ಷ ನಾಯಕ ಅಶೋಕ್ ಕಿಡಿ

**ಬಿಜೆಪಿ, ಜೆಡಿಎಸ್ ಎಂದೂ ಸ್ವಾಧೀನದ ಆದೇಶ ಮಾಡಿಲ್ಲ, ಕಾಂಗ್ರೆಸ್ ಕೂಡ ಯೋಜನೆ ವಿರೋಧಿಸಿತ್ತು**

**ಯೋಜನೆ ವಿರೋಧಿಸಿ ಸದನದಲ್ಲೇಅಧಿವೇಶನದಲ್ಲಿ ಮಾತಾಡಿದ್ದ ಡಿ.ಕೆ.ಶಿವಕುಮಾರ್ ಹಾಗೂ ಸಿದ್ದರಾಮಯ್ಯ**



**ಬೆಂಗಳೂರು, ಜು.15:** ಬಿಡದಿ ಟೌನ್‌ಶಿಪ್ ಯೋಜನೆ ಕೈಬಿಡದ ಕಾಂಗ್ರೆಸ್ ಸರ್ಕಾರ ಸಮಿತಿ ರಚಿಸುವ ಹೊಸ ನಾಟಕ ಮಾಡಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜನರ ಸಿಂಪತಿ ಗಿಟ್ಟಿಸುವ ನಾಟಕ ಮಾಡುತ್ತಿದ್ದಾರೆ. ಬಿಜೆಪಿ ಮತ್ತು ಜೆಡಿಎಸ್ ಎಂದಿಗೂ ಸ್ವಾಧೀನಕ್ಕೆ ಆದೇಶ ಹೊರಡಿಸಿರಲಿಲ್ಲ, ಕಾಂಗ್ರೆಸ್ ಕೂಡ ಯೋಜನೆಯನ್ನು ವಿರೋಧ ಮಾಡಿತ್ತು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ವಿರುದ್ಧ ರೈತರು ಉಗ್ರ ಹೋರಾಟ ಮಾಡುತ್ತಿದ್ದರೂ ಸರ್ಕಾರ ಪೊಲೀಸರನ್ನು ಕಳಿಸಿ ಹಲ್ಲೆ ಮಾಡಿದೆ. ಕೊಲೆ, ಬೆದರಿಕೆ ಎಂಬುದಾಗಿ ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ಈಗ ಇದಕ್ಕಾಗಿ ಸದನ ಸಮಿತಿ ನೇಮಿಸಿರುವುದು ಹಾಸ್ಯಾಸ್ಪದವಾಗಿದೆ. ರೈತರು ಜಮೀನು ಕೊಡುವುದಿಲ್ಲ ಎಂದಮೇಲೂ ಸದನ ಸಮಿತಿ ಅಗತ್ಯವಿರಲಿಲ್ಲ. ಆದರೆ ಅಧಿವೇಶನ ನಡೆಯಲಿರುವುದರಿಂದ, ಬೀಸುವ ದೊಣ್ಣೆಯಿಂದ ತಪ್ಪಿಸಿಕೊಳ್ಳಲು ಈ ರೀತಿ ಮಾಡಲಾಗಿದೆ ಎಂದರು.

ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಈ ಹಿಂದೆ ಯೋಜನೆ ಬಗ್ಗೆ ಪ್ರಸ್ತಾಪಿಸಿದ್ದರೇ ಹೊರತು, ಆದೇಶ ಮಾಡಿರಲಿಲ್ಲ. ಇದು ಕುಮಾರಸ್ವಾಮಿಯವರ ಕನಸಿನ ಕೂಸು ಎಂದು ಅಪಪ್ರಚಾರ ಮಾಡುವವರು ಈ ಬಗ್ಗೆ ದಾಖಲೆ ನೀಡಬೇಕು. ಹಿಂದೆ ಕುಮಾರಸ್ವಾಮಿ ಸಿಎಂ ಆಗಿದ್ದಾಗ ವಿಧಾನಸಭೆಯಲ್ಲಿ ಚರ್ಚೆಯಾಗಿತ್ತು. ಆಗ ರೈತರ ಅಭಿಪ್ರಾಯಕ್ಕೆ ವಿರುದ್ಧವಾಗಿ ಯೋಜನೆಯನ್ನು ಜಾರಿ ಮಾಡುವುದಿಲ್ಲ ಎಂದು ಉತ್ತರ ಕೊಟ್ಟಿದ್ದಾರೆ. ನಂತರ ಯಡಿಯೂರಪ್ಪ, ಸದಾನಂದಗೌಡ, ಜಗದೀಶ್ ಶೆಟ್ಟರ್ ಮುಖ್ಯಮಂತ್ರಿ ಅವಧಿಯಲ್ಲೂ ಯೋಜನೆ ಜಾರಿ ಮಾಡಿರಲಿಲ್ಲ ಎಂದರು.

ಪ್ರದೇಶ ಕಾಂಗ್ರೆಸ್ ಸಮಿತಿಯಿಂದ ಎಚ್.ಕೆ.ಪಾಟೀಲ್ ನೇತೃತ್ವದಲ್ಲಿ ಸತ್ಯಶೋಧನಾ ಸಮಿತಿ ರಚನೆಯಾಯಿತು. ಕಾಂಗ್ರೆಸ್ ಈಗ ಆ ಸಮಿತಿಯ ವರದಿಯನ್ನು ಬಿಡುಗಡೆ ಮಾಡಲಿ ಎಂದು ಆಗ್ರಹಿಸಿದ್ದವರು, ಈಗ ಏಕೆ ಜಾರಿ ಮಾಡುತ್ತಿದೆ? ಅದರಲ್ಲಿ ಈ ಲೇಔಟ್ ಮಾಡಬಾರದು ಎಂದು ಅವರು ವರದಿ ಕೊಟ್ಟಿದ್ದಾರೆ.

ಸಿದ್ದರಾಮಯ್ಯ ಕೂಡ ರೈತರ ಶಾಪ ತಟ್ಟುತ್ತದೆ, ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಾರೆ ಎಂದು ಅಧಿವೇಶನದಲ್ಲಿ ಟೌನ್‌ಶಿಫ್ ವಿರೋಧಿಸಿ ಮಾತಾಡಿದ್ದರು. ಡಿ.ಕೆ.ಶಿವಕುಮಾರ್ ನನ್ನ ಜಿಲ್ಲೆ ಇದು, ಯೋಜನೆ ಬಂದರೆ ರೈತರಿಗೆ ಅಪಮಾನ ಎಂದು ಅಧಿವೇಶನದಲ್ಲಿ ಹೇಳಿದ್ದರು ಎಂದರು.

**ಸಿದ್ದರಾಮಯ್ಯ ಕಾಲದಲ್ಲಿ ಕ್ರಮಗಳು**

3/6/2016ರಲ್ಲಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ರಾಮನಗರ ಜಿಲ್ಲೆಯ ಟೌನ್‌ಶಿಪ್ ವ್ಯಾಪ್ತಿಯಲ್ಲಿ ಬರುವ 10 ಗ್ರಾಮಗಳು ಸೇರಿ ಒಟ್ಟು 38 ಗ್ರಾಮಗಳನ್ನು ಸೇರಿಸಿ ಗ್ರೇಟರ್ ಬೆಂಗಳೂರು ಬಿಡದಿ ಸ್ಮಾರ್ಟ್‌ಸಿಟಿ ಯೋಜನೆ ಘೋಷಣೆ ಮಾಡಿದ್ದರು. ಯಾರು ಮಾಡಿದವರು? ನಾಲ್ಕು ತಿಂಗಳ ನಂತರ ಬಿಡದಿ ಸ್ಮಾರ್ಟ್‌ಸಿಟಿ ಯೋಜನೆ ಪ್ರದೇಶ ಪ್ರಾಧಿಕಾರ ರಚನೆ ಮಾಡಿದರು. ಅಂದರೆ ಎಲ್ಲ ಆದೇಶಗಳನ್ನು ಸಿದ್ದರಾಮಯ್ಯಮವರ ಕಾಲದಲ್ಲೇ ಹೊರಡಿಸಿ ಕುಮಾರಸ್ವಾಮಿಯ ಕೂಸು ಎನ್ನಲಾಗುತ್ತಿದೆ. 2018ರಲ್ಲಿ ವಿಧಾನಸಭೆಯಲ್ಲಿ ಚುಕ್ಕೆ ಗುರುತಿನ ಪ್ರಶ್ನೆ ಕೇಳಿದಾಗ, ಉಪಮುಖ್ಯಮಂತ್ರಿ ಪರಮೇಶ್ವರ ಅವರು, ನಾವು ಭೂಸ್ವಾಧೀನ ಮಾಡಿಲ್ಲ ಎಂದು ಹೇಳಿದ್ದರು. ಹಿಂದಿನ ಬಿಜೆಪಿ, ಸಮ್ಮಿಶ್ರ ಸರ್ಕಾರಗಳು ಸ್ವಾಧೀನ ಮಾಡಿದ್ದರು ಈ ರೀತಿ ಉತ್ತರ ಕೊಡಲು ಆಗುತ್ತಿರಲಿಲ್ಲ. 15/7/2024 ರಂದು ಸಿದ್ದರಾಮಯ್ಯನವರು ಗೆಜೆಟ್ ಹೊರಡಿಸಿ ಖಾತೆ ಮಾಡಿದ್ದಾರೆ. 25 ವರ್ಷಗಳ ಕಾಲ ಪರಭಾರೆ ಮಾಡತಕ್ಕದ್ದಲ್ಲ ಅಂತ ಷರತ್ತು ಹಾಕಲಾಗಿದೆ. ಅಂದರೆ ಇದು ರಿಯಲ್ ಎಸ್ಟೇಟ್ ಎನ್ನಲು ಇದಕ್ಕಿಂತ ದೊಡ್ಡ ಸಾಕ್ಷಿ ಬೇರೆ ಇಲ್ಲ. ಸರ್ಕಾರ ಆದೇಶ ಮಾಡಿದ ಮೇಲೆ ಗ್ರಾಂಟ್ ಮಾಡಲು ಸಾಧ್ಯವೇ ಇರಲಿಲ್ಲ. ಆಂಧ್ರದಲ್ಲಿ ಯಾರೋ ಒಬ್ಬ ಕಂಟ್ರಾಕ್ಟರ್‌ಗೆ ಇದನ್ನು ನೀಡಲಾಗಿದೆ. ಜನರ ಕರುಣೆ ಗಿಟ್ಟಿಸಲು ಡಿ.ಕೆ.ಶಿವಕುಮಾರ್ ಮಾತಾಡಿದ್ದಾರೆ. ಇವರಿಗೆ ರೈತರ ಬಗ್ಗೆ ಕಾಳಜಿಯೇ ಇಲ್ಲ. ನಮ್ಮ ಅಕ್ಕ ಅಣ್ಣನ ಜಮೀನಿದೆ ಎಂದು ಕಾಂಗ್ರೆಸ್‌ನವರು ಹೇಳಿದ್ದಾರೆ. ಬಿಡದಿಯಲ್ಲಿ ಯಾರ ಜಮೀನಿದೆ ಎಂದು ಹೇಳಲಿ ಎಂದರು.

ಬಿಡದಿಯಲ್ಲಿ ಪ್ರತಿಭಟನೆ ಆರಂಭವಾಗಿ 435 ದಿನವಾದರೂ ಸರ್ಕಾರ ಸಮಿತಿ ರಚಿಸಲಿಲ್ಲ. ಅಧಿವೇಶನ ಮುಗಿದ ಮೇಲೆ ಸಮಿತಿ ವರದಿ ಕೊಡಲಿದಿದೆ. ಆಮೇಲೆ ಮತ್ತೆ ಸ್ವಾಧೀನ ನಡೆಯಲಿದೆ. ರಾತ್ರಿ ಸ್ವಾಧೀನಕ್ಕೆ ಆದೇಶ ಹೊರಟಿಸಿ ಬೆಳಗ್ಗೆ ಮುಖ್ಯಮಂತ್ರಿ ಮಾತಾಡುತ್ತಾರೆ. ಈ ಸಮಿತಿಗೆ ಅರ್ಥ ಏನಿದೆ, ಆರ್‌ಸಿಬಿ ಕಾಲ್ತುಳಿತ ಪ್ರಕರಣದಲ್ಲಿ ತಪ್ಪಿತಸ್ಥರನ್ನು ಶಿಕ್ಷಿಸುತ್ತೇವೆಂದು ನಂತರ ಎಲ್ಲರಿಗೂ ಕ್ಲೀನ್ ಚಿಟ್ ನೀಡಲಾಗಿದೆ. ಅದೇ ರೀತಿ ಇಲ್ಲೂ ಮಾಡುತ್ತಾರೆ. ಎರಡು ತಿಂಗಳಲ್ಲಿ ಈ ಸಮಿತಿ ವರದಿ ನೀಡಲಿದೆ. ಇದೊಂದು ನಾಟಕ ಎಂದರು.

**ಡಿನೋಟಿಫಿಕೇಶನ್ ಬೇಡ**

ಜನರ ಹೋರಾಟದ ಮುಂದೆ ಯಾರೂ ದೊಡ್ಡವರಲ್ಲ. ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಸರ್ಕಾರ ಜನಾಕ್ರೋಶಕ್ಕೆ ತುತ್ತಾಗಿ ಹೊರಟುಹೋಯಿತು. ಅದೇ ರೀತಿ ಕಾಂಗ್ರೆಸ್‌ಗೂ ಆಗಲಿದೆ. ಇದು ಕಾಂಗ್ರೆಸ್ ಸರ್ಕಾರದ ಶವಪೆಟ್ಟಿಗೆಗೆ ಹೊಡೆಯುವ ಕೊನೆಯ ಮೊಳೆ ಆಗಲಿದೆ.

ಡಿನೋಟಿಫಿಕೇಶನ್ ಮೂಲಕ ಜೈಲಿಗೆ ಕಳಿಸುವ ಪ್ರಯತ್ನ ನಡೆದಿದೆ ಎಂದು ಸಿಎಂ ಹೇಳಿದ್ದಾರೆ. ಡೀನೋಟಿಫಿಕೇಶನ್ ಮಾಡಿ ಎಂದು ನಾವ್ಯಾರೂ ಆಗ್ರಹಿಸುತ್ತಿಲ್ಲ. ರೈತರನ್ನು ಅವರ ಪಾಡಿಗೆ ಬಿಟ್ಟರೆ ಸಾಕು. ಮುಂದೆ ಬರುವ ಸರ್ಕಾರ ಅದನ್ನು ನಿಭಾಯಿಸಲಿದೆ ಎಂದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಅಪಾರ್ಟ್‌ಮೆಂಟ್ ನಿವಾಸಿಗಳ ಹಕ್ಕು ರಕ್ಷಣೆಗೆ ಸರ್ಕಾರ ಬದ್ಧ: ಡಿ.ಕೆ. ಶಿವಕುಮಾರ್

## ಅಪಾರ್ಟ್‌ಮೆಂಟ್ ಸಂಘಗಳ ಪ್ರತಿನಿಧಿಗಳೊಂದಿಗೆ ನೆಹರು ತಾರಾಲಯ ಸಭಾಂಗಣದಲ್ಲಿ ಸಂವಾದ ಕಾರ್ಯಕ್ರಮ




**ಬೆಂಗಳೂರು, ಜು.15:** ಅಪಾರ್ಟ್‌ಮೆಂಟ್ ನಿವಾಸಿಗಳ ಹಕ್ಕು ರಕ್ಷಣೆಗೆ ಸರ್ಕಾರ ಬದ್ಧವಾಗಿದೆ. ಸಮಸ್ಯೆಗಳ ಮುಕ್ತಿಗೆ ಸರ್ಕಾರ ಹೆಜ್ಜೆ ಇಟ್ಟಿದೆ. ಏಕಪಕ್ಷೀಯ ನಿರ್ಧಾರ ನಮ್ಮ ಧೋರಣೆಯಲ್ಲ. ಆಸ್ತಿ ಖರೀದಿಸಿದ ಮೇಲೆ ನೀವೇ ಮಾಲೀಕರು. ಈ ವಿಚಾರದಲ್ಲಿ ಅನುಮಾನವಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಕರ್ನಾಟಕ ಅಪಾರ್ಟ್‌ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) ಕುರಿತು ಅಪಾರ್ಟ್‌ಮೆಂಟ್ ಸಂಘಗಳ ಪ್ರತಿನಿಧಿಗಳೊಂದಿಗೆ ನೆಹರು ತಾರಾಲಯ ಸಭಾಂಗಣದಲ್ಲಿ ಬುಧವಾರ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಗಸ್ಟ್ 6ರವರೆಗೆ ಸಾರ್ವಜನಿಕರು ಅಭಿಪ್ರಾಯ, ಸಲಹೆಗಳನ್ನು ಬೆಂಗಳೂರು ನಗರಾಭಿವೃದ್ಧಿ ಸಚಿವರು ಹಾಗೂ ನನಗೆ ಬರೆಯಬಹುದು. ಇದನ್ನು ವಿಧಾನಸಭೆಯಲ್ಲಿ ಮಂಡಿಸಲಾಗುವುದು. ಆಸ್ತಿ ಕೊಂಡವರಿಗೆ ಅನುಕೂಲವಾಗುವಂತೆ ಈ ವಿಧೇಯಕವನ್ನು ಜಾರಿಗೆ ತರಲಾಗುತ್ತಿದೆ. ಎಲ್ಲಾ ಪಕ್ಷದ ನಾಯಕರಿಗೂ ಅಭಿಪ್ರಾಯಗಳನ್ನು ತಿಳಿಸಲು ಅವಕಾಶ ನೀಡಲಾಗಿದೆ. ಶಾಸಕರೂ ಅಭಿಪ್ರಾಯ ತಿಳಿಸಬಹುದು. ಏಕಪಕ್ಷೀಯವಾಗಿ ನಿರ್ಧಾರ ಮಾಡಲು ಸಾಧ್ಯವಿಲ್ಲ ಎಂದರು. ನಿಮ್ಮ ಯಾವುದೇ ಸಲಹೆ ಸೂಚನೆಗಳಿದ್ದರೂ ನನಗೆ ಹಾಗೂ ಕೃಷ್ಣಬೈರೇಗೌಡರಿಗೆ ನೀಡಿ. ನನ್ನ ಮೊಬೈಲ್ ಸಂಖ್ಯೆ ನೀಡಲು ತಿಳಿಸುತ್ತೇನೆ. ಅದಕ್ಕೆ ನಿಮ್ಮ ಸಲಹೆಗಳನ್ನು ಕಳುಹಿಸಬಹುದು. ಜೊತೆಗೆ ಡೆವಲಪರ್‌ಗಳನ್ನು ಕರೆಸಿ ಅವರ ಜೊತೆಯೂ ಮಾತನಾಡಿ, ಕಾನೂನು ಏನಿದೆ ಎಂದು ಮನವರಿಕೆ ಮಾಡಲಾಗುವುದು ಎಂದರು.

### ಹೂಡಿಕೆಗೆ ಬೆಂಗಳೂರು ಮೊದಲ ಆಯ್ಕೆ

**ದಾವೋಸ್‌ಗೆ ತೆರಳಿದಾಗ ಎಲ್ಲಾ ಉದ್ಯಮಿಗಳು ನನ್ನನ್ನೇ ಹುಡುಕಿಕೊಂಡು ಬಂದು ಮಾತನಾಡಿಸುತ್ತಿದ್ದರು. ಆಗ ಮಹಾರಾಷ್ಟ್ರದವರು ಏಕೆ ನಿಮ್ಮನ್ನೇ ಹುಡುಕಿಕೊಂಡು ಬರುತ್ತಿದ್ದಾರೆ ಎಂದು ಕೇಳಿದರು. ಆಗ ನಾನು ಬೇರೆ ದೇಶದವರನ್ನು ಏಕೆ ನಮ್ಮ ಬಗ್ಗೆ ನಿಮಗೆ ಆಸಕ್ತಿ ಎಂದು ಕೇಳಿದಾಗ, "ಬೆಂಗಳೂರಲ್ಲಿ 1 ಡಾಲರ್ ವೆಚ್ಚಕ್ಕೆ ಮುಂಬೈನಲ್ಲಿ ಮೂರುವರೆ ಡಾಲರ್‌ಗೆ ಸಮ. ಅಷ್ಟು ವೆಚ್ಚ ಹೆಚ್ಚಳವಾಗಿದೆ ಅಲ್ಲಿ. ಬೆಂಗಳೂರಿನಲ್ಲಿ 2 ಕೋಟಿಗೆ ಒಂದು ಮನೆ ದೊರೆಯಲಿದೆ. ಆದೇ ಮುಂಬೈನಲ್ಲಿ 20 ಕೋಟಿ ವೆಚ್ಚ ಮಾಡಬೇಕಿದೆ. ಅದಕ್ಕೆ ಎಲ್ಲರೂ ಬೆಂಗಳೂರನ್ನು ಮೊದಲ ಆಯ್ಕೆಯನ್ನಾಗಿ ನೋಡುತ್ತಿದ್ದಾರೆ. ಅಂತರರಾಷ್ಟ್ರೀಯ ನಾಯಕರೂ ಬೆಂಗಳೂರನ್ನು ಮೆಚ್ಚುತ್ತಿದ್ದಾರೆ. ಇಲ್ಲಿನ ಶಿಕ್ಷಣ ಗುಣಮಟ್ಟವೂ ಚೆನ್ನಾಗಿದೆ" ಎಂದರು.**

ಬೆಂಗಳೂರಿನಲ್ಲಿ 40 ಲಕ್ಷ ಆಸ್ತಿಗಳಿದ್ದು ಈಗಾಗಲೇ 26 ಲಕ್ಷ ಆಸ್ತಿಗಳಿಗೆ ಖಾತೆ ನೀಡಲಾಗಿದೆ. ಒಂದಷ್ಟು ಜನ ಕಾನೂನುಗಳನ್ನು ದುರುಪಯೋಗ ಮಾಡಿಕೊಂಡಿದ್ದಾರೆ. ಮೂರು ಮಹಡಿಗಳಿಗೆ ಅನುಮತಿ ಪಡೆದು ಐದು ಮಹಡಿಗಳನ್ನು ನಿರ್ಮಾಣ ಮಾಡಿದ್ದಾರೆ. ಹೆಚ್ಚಿನವರು ಪ್ರಾಮಾಣಿಕರಿದ್ದು ಅವರು ಕಾನೂನಿನ ಅಡಿ ಕೆಲಸ ಮಾಡಿದ್ದಾರೆ ಎಂದರು.

ದೊಡ್ಡ ಬಿಲ್ಡರ್‌ಗಳ ವಿಚಾರಕ್ಕಿಂತ ಸಣ್ಣಪುಟ್ಟ ಬಿಲ್ಡರ್‌ಗಳು 60/80 ಅಥವಾ ಕಂದಾಯ ಭೂಮಿಯಲ್ಲಿ ಕಟ್ಟಡ ನಿರ್ಮಾಣ ಮಾಡಿ ಕಾನೂನು ಮುರಿಯುತ್ತಾರೆ. ಅದರ ಗುಣಮಟ್ಟ ಕೂಡ ಸರಿಯಾಗಿರುವುದಿಲ್ಲ ಎಂದರು.

ಒಮ್ಮೆ ಅಪಾರ್ಟ್‌ಮೆಂಟ್ ನಿವಾಸಿಗಳಾದ ಮೇಲೆ ಒಪ್ಪಂದ ಮಾಡಿಕೊಳ್ಳುವಾಗಲೇ ಒಂದು ರೀತಿ, ನೋಂದಣಿ ಮಾಡಿಕೊಳ್ಳುವಾಗಲೇ ಇನ್ನೊಂದು ರೀತಿ, ಮನೆ ಸಿಕ್ಕ ಮೇಲೆಯೇ ಮತ್ತೊಂದು ರೀತಿಯಾಗಿ ಬದಲಾವಣೆ ಆಗುವುದು ನೋಡಿ ಬೇಸರವಾಗಿದೆ. ಅಪಾರ್ಟ್‌ಮೆಂಟ್ ಅಸೋಸಿಯೇಷನ್ ಅಲ್ಲಿ ಒಂದಿಬ್ಬರು ತಕರಾರು ಗಿರಾಕಿಗಳು ಸೇರಿಕೊಂಡು ತೊಂದರೆ-ತೊಡಕು ನೀಡುವುದೇ ಅವರ ಕೆಲಸವಾಗುತ್ತದೆ. ಉದಾಹರಣೆಗೆ ನನ್ನ ಅಪಾರ್ಟ್‌ಮೆಂಟ್ ಅಲ್ಲಿ ನನ್ನ ಹೆಸರಿಗೆ ನೋಂದಣಿ ಮಾಡಿಕೊಳ್ಳುವ ಮೊದಲೇ ನನ್ನ ಹೆಸರನ್ನೇ ನೋಟಿಸ್ ಬೋರ್ಡ್ ಅಲ್ಲಿ ಹಾಕಿದ್ದರು. ಬೆನ್ನಿಗಾನಹಳ್ಳಿಯಲ್ಲೂ ಇದೇ ರೀತಿ ಮಾಡಿದ್ದರು. ಒಳಗೆ ನನ್ನನ್ನ ಬಿಡುವುದಿಲ್ಲ ಎಂದು ಹೇಳಿದ್ದರು. ಇಂತಹ ಅಪಾರ್ಟ್‌ಮೆಂಟ್ ಅಸೋಸಿಯೇಷನ್‌ಗಳು ಇಲ್ಲಿವೆ ಎಂದರು.

ಜನರು ಕಷ್ಟಪಟ್ಟು ತಮ್ಮ ಉಳಿತಾಯ ಸೇರಿಸಿ ಸೂರು ಮಾಡಿಕೊಂಡಿರುತ್ತಾರೆ. ಜೀವನದಲ್ಲಿ ಎಷ್ಟೋ ಜನಕ್ಕೆ ಈ ಅವಕಾಶ ಸಿಗುವುದಿಲ್ಲ. ಬೇರೆ ನಗರಗಳಲ್ಲಿ ಇರುವ ಜನ ತಮ್ಮ ಆಸ್ತಿಗಳನ್ನು ಮಾರಿಕೊಂಡು ಬೆಂಗಳೂರಿಗೆ ಬರುತ್ತಿದ್ದಾರೆ. ಅಪಾರ್ಟ್‌ಮೆಂಟ್ ನಿವಾಸಿಗಳು ರಾಜಕೀಯವಾಗಿ ಒಂದಷ್ಟು ವಿರೋಧಾಭಾಸ ಉಂಟಾಗಿ ಆಗಾಗ್ಗೆ ಹೆಚ್ಚು ಕಡಿಮೆ ಮಾಡುತ್ತೀರಿ. ಆದರೂ ನಿಮ್ಮ ಬಗ್ಗೆ ನನಗೆ ನಂಬಿಕೆಯಿದೆ. ಜನರ ತೊಂದರೆಗಳನ್ನು ನಿವಾರಿಸಲು ನಾವು ಅಧಿಕಾರಕ್ಕೆ ಬಂದಿದ್ದೇವೆ ಹೊರತು ವೈಯಕ್ತಿಕ ಅಭಿಲಾಷೆಗಳಿಗಾಗಿ ಅಲ್ಲ ಎಂದು ಹೇಳಿದರು.

ಕಷ್ಟಪಟ್ಟು ನೀವು ಗಳಿಸಿದ ಆಸ್ತಿ ನಿಮಗೇ ಸೇರಬೇಕು ಎಂದು ಆರನೇ ಗ್ಯಾರಂಟಿಯಾಗಿ ಭೂಮಿ ಗ್ಯಾರಂಟಿ ನೀಡಿದ್ದೇವೆ. ಒಂದೇ ಒಂದು ರೂಪಾಯಿ ಲಂಚ ಪಡೆಯದೇ ನಿಮ್ಮ ಹಾಗೂ ಆಸ್ತಿಯ ಪೋಟೋ ಸಮೇತ ಇ ಖಾತೆ ನೀಡುವ ಅತ್ಯುತ್ತಮ ಯೋಜನೆಯನ್ನು ನಾವು ನೀಡಿದ್ದೇವೆ. ಇಡೀ ದೇಶದಲ್ಲಿಯೇ ಅತ್ಯುತ್ತಮ ಯೋಜನೆ ಇದಾಗಿದೆ. ದೇಶದ ಯಾವುದೇ ನಗರದಲ್ಲಿ ಇಂತಹ ಯೋಜನೆ ಇದೆಯೇ ಎಂದು ನಿಮ್ಮ ಸ್ನೇಹಿತರನ್ನು ಕೇಳಿನೋಡಿ ಎಂದರು.

### ಹೈರೈಸ್ ಕಟ್ಟಡಗಳ ನಿರ್ಮಾಣಕ್ಕೆ ಒತ್ತು



**ನಗರದಲ್ಲಿ ಹೈರೈಸ್ ಕಟ್ಟಡಗಳ ಬಗ್ಗೆ ಗಮನಹರಿಸಿ, ರಸ್ತೆಗಳನ್ನು ವಿಸ್ತರಿಸುವ ಬಗ್ಗೆ ಒತ್ತು ನೀಡಲಾಗುತ್ತಿದೆ . ನಗರದಲ್ಲಿ 132 ಕಿಮೀ ಪೆರಿಫೆರಲ್ ವರ್ತುಲ ರಸ್ತೆ,(ಬೆಂಗಳೂರು ಬ್ಯುಸಿನೆಸ್ ಕಾರಿಡಾರ್) ನಿರ್ಮಾಣವಾಗುತ್ತಿದೆ ಎಂದರು. ದೇಶದ ವಿವಿಧ ರಾಜ್ಯಗಳಿಗೆ ಹೋಲಿಸಿದರೆ ಭೂ ಸ್ವಾಧೀನಕ್ಕೆ ರಾಜ್ಯದಲ್ಲಿ ರೈತರಿಗೆ ಗರಿಷ್ಠ ಮೊತ್ತದ ಪರಿಹಾರವನ್ನು ನೀಡಲಾಗುತ್ತಿದೆ? ಎಂದು ಹೇಳಿದರು. ಕಾನೂನಾತ್ಮಕ ಸಲಹೆಗಳನ್ನು ನೀಡಿ ಅದರಂತೆ ನಾವು ಕ್ರಮ ತೆಗೆದುಕೊಳ್ಳುತ್ತೇವೆ. ಫ್ಲೋರ್ ವೈಜ್ ಪ್ರಿಮಿಯಂ ಎಫ್ ಎಆರ್ ನೀಡುವುದನ್ನು ಪ್ರಾರಂಭ ಮಾಡಿದೆ. ಟಿಡಿಆರ್ ಸಹ ನೀಡಲಾಯಿತು. ಯಾರೋ ಒಂದಿಬ್ಬರು ಬೋಗಸ್ ಪ್ರೀಮಿಯಂ ಎಫ್‌ಎಆರ್ ಇಟ್ಟುಕೊಂಡು ಇದರ ವಿರುದ್ಧ ನ್ಯಾಯಾಲಯಕ್ಕೆ ತೆರಳಿ ಒಂದು ವರ್ಷ ನಿಲ್ಲಿಸಿಬಿಟ್ಟರು. ಕೆಲವರೆಲ್ಲಾ ಕಟ್ಟಡ ಕಟ್ಟಲು ಅಡಚಣೆ ಉಂಟಾಯಿತು. ಆನಂತರ ನ್ಯಾಯಾಲಯ ಸರ್ಕಾರ ಉತ್ತಮ ಕೆಲಸ ಮಾಡಿದೆ ಎಂದು ನಮ್ಮ ಪರವಾಗಿ ತೀರ್ಪು ನೀಡಿತು. ಜೊತೆಗೆ ಅನುಮತಿ ನೀಡಿತು. ದೊಡ್ಡರಸ್ತೆ ಇರುವ ಕಡೆ ಎತ್ತರದ ಕಟ್ಟಡ ಕಟ್ಟಬಹುದು. ಸಣ್ಣ ರಸ್ತೆ ಇರುವ ಕಡೆ ಕಟ್ಟಲು ಆಗುವುದಿಲ್ಲ. ಭೂಮಿ ಬೆಲೆ ಕಡಿಮೆ ಆಗಬೇಕು ಎಂಬುದು ನನ್ನ ಆಸೆ" ಎಂದರು.**

ಎಲ್ಲ ಅಸೋಸಿಯೇಷನ್‌ಗಳು ಎಸ್ ಟಿಪಿ ಬಗ್ಗೆ ಗಮನ ಹರಿಸಬೇಕು. ಅಪಾರ್ಟ್‌ಮೆಂಟ್‌ಗಳಲ್ಲಿ ಎಸ್‌ಟಿಪಿ, ಕುಡಿಯುವ ನೀರು ವ್ಯವಸ್ಥೆ ಕಲ್ಪಿಸಲು ಸರ್ಕಾರ ಸುಧಾರಣೆಗಳನ್ನು ತಂದಿದೆ. ಅಂತರ್ಜಲ ವೃದ್ಧಿ, ಕಾವೇರಿ 5ನೇ ಹಂತಗಳ ಮೂಲಕ ಕುಡಿಯುವ ನೀರಿನ ವ್ಯವಸ್ಥೆಯನ್ನು ತರಲು ಸಾಕಷ್ಟು ಶ್ರಮವಹಿಸಿದೆ. ಅನೇಕರಿಗೆ ಕಂತುಗಳ ಮೂಲಕ ಹಣ ನೀಡಿ ನೀರಿನ ಸಂಪರ್ಕ ಪಡೆಯಲು ಅವಕಾಶ ನೀಡಲಾಗಿದೆ. ಕೆಲವು ಡೆವಲಪರ್ ಗಳು ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ. ಅವರೊಂದಿಗೂ ಮಾತನಾಡಿ ದಾಖಲಾತಿಗಳ ವರ್ಗಾವಣೆ ಸರಾಗವಾಗಿ ಆಗಬೇಕೆಂದು ಸೂಚಿಸಲಾಗುವುದು. ಸಮಸ್ಯೆಗಳನ್ನು ಆದಷ್ಟು ಶೀಘ್ರವಾಗಿ ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಕಾರ್ಯಪ್ರವೃತ್ತವಾಗಿದೆ ಎಂದರು.

ಒಂದಷ್ಟು ಡೆವಲಪರ್‌ಗಳು ದಾರಿ ತಪ್ಪಿಸುತ್ತಾರೆ, ಸರಿಯಾದ ದಾಖಲೆ ನೀಡುವುದಿಲ್ಲ. ಇಡೀ ಆಸ್ತಿಯನ್ನು ಅಡವಿಟ್ಟು ಸಾಲ ಮಾಡಿರುತ್ತಾರೆ. ಆಗ ಬ್ಯಾಂಕ್‌ನವರು ನಿಮ್ಮ ಸುಪರ್ದಿಗೆ ಮನೆ ಫ್ಲಾಟ್ ನೀಡುವುದಿಲ್ಲ ಎಂದರು.

ಈಸ್ ಆಫ್ ಬಿಸಿನೆಸ್‌ಗಾಗಿ ನಗರದಲ್ಲಿ ಐದು ಕಾರ್ಪೊರೇಷನ್‌ಗಳನ್ನು ರಚಿಸಲಾಗಿದ್ದು, ವಿಮಾನ ನಿಲ್ದಾಣ, ಎಲೆಕ್ಟ್ರಾನಿಕ್ ಸಿಟಿ ಬಳಿ, ಅಕ್ಕಪಕ್ಕದ ಅಪಾರ್ಟ್‌ಮೆಂಟ್‌ಗಳ ಸಮಸ್ಯೆಗಳನ್ನೂ ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಬದ್ಧವಾಗಿದೆ. ಅಧಿಕಾರ ವಿಕೇಂದ್ರೀಕರಣ ನಮ್ಮ ಸರ್ಕಾರದ ಉದ್ದೇಶ. ವ್ಯಾಜ್ಯಗಳಿಗೆ ಹೋಗದೆ ಬಗೆಹರಿಸಿಕೊಳ್ಳಲು ಒತ್ತು ನೀಡಲಾಗುತ್ತಿದೆ ಎಂದರು. ಜನರ ಧ್ವನಿಯೇ ಸರ್ಕಾರದ ಧ್ವನಿಯಾಗಬೇಕು. ಟೀಂ ಕರ್ನಾಟಕವಾಗಿ ನಾವೆಲ್ಲ ಕೆಲಸ ಮಾಡಬೇಕೆಂದು ಕರೆ ನೀಡಿದರು.

ಬಡವರೂ ಕೂಡ ಮನೆ ಕಟ್ಟಲು ಅಗತ್ಯ ನೆರವು ಒದಗಿಸಲು ಸರ್ಕಾರ ಬದ್ಧವಾಗಿದೆ. ಅಧಿಕಾರಿಗಳು ಮನೆ ಬಾಗಿಲಿಗೆ ಬಂದು ದಾಖಲಾತಿಗಳನ್ನು ನೀಡಲು ವ್ಯವಸ್ಥೆ ಮಾಡಲಾಗಿದೆ. ನಿಮ್ಮ ದನಿಯೇ ಸರ್ಕಾರದ ದನಿ" ಎಂದು ಹೇಳಿದರು.

---

# ಎನ್‌ಡಿಆರ್‌ಎಫ್‌ನಿಂದ ಹಣ ಕೇಳಿದ್ದೇವೆ, ನಂತರ ಬರ ಪರಿಸ್ಥಿತಿ ವರದಿ ಸಲ್ಲಿಸುತ್ತೇವೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್




**ಬೆಂಗಳೂರು, ಜು.15:** ರಾಜ್ಯದಲ್ಲಿ ಕುಡಿಯುವ ನೀರಿಗೆ ಮುಂದಿನ ದಿನಗಳಲ್ಲಿ ತೊಂದರೆಯಾಗಲಿದೆ. ಅದಕ್ಕೆ ಮುನ್ನೆಚ್ಚರಿಕೆ ಕ್ರಮ ತೆಗೆದುಕೊಳ್ಳಬೇಕಲ್ಲವೇ. ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಪ್ರಧಾನಮಂತ್ರಿಯವರಿಗೆ ಪತ್ರ ಬರೆದಿದ್ದಾರೆ ಎಂದು ಡಿಸಿಎಂ ಡಾ. ಜಿ.ಪರಮೇಶ್ವರ್ ಹೇಳಿದರು.

ನೃಪತುಂಗ ರಸ್ತೆಯ ಯುವನಿಕಾ ಸಭಾಂಗಣದ ಮುಂಭಾಗದಲ್ಲಿ ಸುಮಾರು 35 ಸೈಕ್ಲಿಂಗ್ ಕ್ರೀಡಾಪಟುಗಳಿಗೆ ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಸ್ಪರ್ಧಿಸಲು ಅವಶ್ಯವಾಗಿರುವ ಹೈ ಎಂಡ್ ಸೈಕಲ್‌ಗಳನ್ನು ವಿತರಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಬರಪರಿಸ್ಥಿತಿ ಎದುರಿಸಲು ಎನ್‌ಡಿಆರ್‌ಎಫ್ ಮುಂಚಿತವಾಗಿ ಹಣ ನೀಡಿದೆ. ನಮಗೆ ಬರಬೇಕಾದಂತ ಹಣದಲ್ಲಿ ಮುಂಗಡವಾಗಿ ನೀಡುವಂತೆ ಕೇಂದ್ರಕ್ಕೆ ಅನೇಕ ಸಂದರ್ಭಗಳಲ್ಲಿ ರಾಜ್ಯ ಸರ್ಕಾರದಿಂದ ಬೇಡಿಕೆ ಇಟ್ಟಿದ್ದೇವೆ.

ವಿಶೇಷ ಅನುದಾನ ಬಿಡುಗಡೆ ಮಾಡಬೇಕು. ಅದಕ್ಕೂ ಮೊದಲು ನಮಗೆ ಎನ್‌ಡಿಆರ್‌ಎಫ್‌ನಿಂದ ಹಣ ಕೇಳಿದ್ದೇವೆ. ಇದರಲ್ಲಿ ಯಾವುದೇ ತಪ್ಪಿಲ್ಲ. ತದನಂತರ ರಾಜ್ಯದಲ್ಲಿನ ಬರ ಪರಿಸ್ಥಿತಿಯ ವರದಿ ಸಲ್ಲಿಸುತ್ತೇವೆ. ರಾಜ್ಯದಲ್ಲಿ ಬರ ಪರಿಸ್ಥಿತಿಯ ಕುರಿತು ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಕುಡಿಯುವ ನೀರಿನ ಪರಿಸ್ಥಿತಿ, ಬರದ ಪರಿಸ್ಥಿತಿ, ಜಲಾಶಯಗಳ ನೀರಿನ ಸಂಗ್ರಹ, ಎಷ್ಟು ಪ್ರಮಾಣದಲ್ಲಿ ಒಳಹರಿವು ಬರುತ್ತಿದೆ ಎಂಬ ಕುರಿತು ವರದಿ ಸಲ್ಲಿಸಲು ತಿಳಿಸಲಾಗಿದೆ. ವರದಿ ಬಂದ ತಕ್ಷಣ ಕೇಂದ್ರದ ಮಾನದಂಡಗಳನ್ನು ಆಧರಿಸಿ ಘೋಷಣೆ ಮಾಡಲು ಮುಂದುವರಿ ಯುತ್ತೇವೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ಮಾನದಂಡಗಳನ್ನು ರೂಪಿಸಿದೆ. ಅದರ ಆಧಾರದ ಮೇಲೆ ಜಿಲ್ಲೆ ಅಥವಾ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಣೆ ಮಾಡುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್ ಸಿಂಗ್, ಆಯುಕ್ತರಾದ ಎಂ.ಎನ್.ಅನುಚೇತ್ ಅವರು ಸೇರಿದಂತೆ ಹಿರಿಯ ಅಧಿಕಾರಿಗಳು ಇದ್ದರು.

### 35 ಸೈಕ್ಲಿಂಗ್ ಕ್ರೀಡಾಪಟುಗಳಿಗೆ 2.52 ಕೋಟಿ ರೂ. ಮೌಲ್ಯದ ಸೈಕಲ್ ವಿತರಣೆ

**ಸೈಕ್ಲಿಂಗ್ ಕ್ರೀಡಾಪಟುಗಳಿಗೆ ದೈನಂದಿನ ತರಬೇತಿ ಹಾಗೂ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಸ್ಪರ್ಧಿಸಲು ಸಹಕಾರಿಯಾಗುವ ನಿಟ್ಟಿನಲ್ಲಿ ಸೈಕಲ್‌ಗಳನ್ನು ವಿತರಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕ್ರೀಡಾ ಸಚಿವ ಡಾ. ಜಿ.ಪರಮೇಶ್ವರ ತಿಳಿಸಿದ್ದಾರೆ.**

**ನೃಪತುಂಗ ರಸ್ತೆಯ ಯುವನಿಕಾ ಸಭಾಂಗಣದ ಮುಂಭಾಗದಲ್ಲಿ 35 ಸೈಕ್ಲಿಂಗ್ ಕ್ರೀಡಾಪಟುಗಳಿಗೆ ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಸ್ಪರ್ಧಿಸಲು ಅವಶ್ಯಕವಾಗಿರುವ ಹೈ ಎಂಡ್ ಸೈಕಲ್‌ಗಳನ್ನು ವಿತರಿಸಿ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸೈಕಲ್‌ಗಳನ್ನು 2.52 ಕೋಟಿ ರೂ. ಮೊತ್ತದಲ್ಲಿ ಖರೀದಿಸಲಾಗಿದ್ದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ 2025-26ನೇ ಸಾಲಿನ ಎಸ್‌ಸಿಎಸ್‌ಪಿ ಯೋಜನೆಯಡಿ ವಿಜಯಪುರ, ಗದಗ ಮತ್ತು ಬಾಗಲಕೋಟೆ ಜಿಲ್ಲೆಗಳ ಕ್ರೀಡಾ ವಸತಿ ನಿಲಯಗಳಲ್ಲಿ ಸೈಕ್ಲಿಂಗ್ ತರಬೇತಿ ಪಡೆಯುತ್ತಿರುವ 35 ಪರಿಶಿಷ್ಟ ಜಾತಿಗೆ ಸೇರಿದ ಕ್ರೀಡಾಪಟುಗಳಿಗೆ ವಿತರಿಸಿದ್ದೇವೆ. ಅಂತಾರಾಷ್ಟ್ರೀಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ, ವಿಜೇತರಾಗುವ ನಿಟ್ಟಿನಲ್ಲಿ ಉತ್ತೇಜಿಸಲಾಗಿದೆ ಎಂದು ತಿಳಿಸಿದರು.**

---

# ರಾಜ್ಯದ ಸ್ಥಾನಮಾನಕ್ಕಾಗಿ ವೈಟ್‌ಹೌಸ್‌ಗೆ ತೆರಳಿ ಟ್ರಂಪ್ ಭೇಟಿ ಮಾಡಬೇಕೆ?

## ಜಮ್ಮು-ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನ ವಿಳಂಬಕ್ಕೆ ಉಮರ್ ಅಣಕು ಪೋಸ್ಟ್

**ನವದೆಹಲಿ, ಜು. 15:** ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನವನ್ನು ಮರುಸ್ಥಾಪಿಸುವ ವಿಷಯದಲ್ಲಿ ಕೇಂದ್ರ ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಉಮರ್ ಅಬ್ದುಲ್ಲಾ, ಬಿಜೆಪಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ರಾಜ್ಯತ್ವದ ಬೇಡಿಕೆಯನ್ನು ಈಡೇರಿಸುವಂತೆ ಒತ್ತಾಯಿಸಿ ಅವರು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಉಲ್ಲೇಖಿಸಿ ವ್ಯಂಗ್ಯವಾಡಿದ್ದಾರೆ.

ಜಮ್ಮುವಿನಲ್ಲಿ ನಡೆದ ರ್‍ಯಾಲಿಯಲ್ಲಿ ಮಾತನಾಡಿದ ಉಮರ್ ಅಬ್ದುಲ್ಲಾ, ನಾವು ವಿಧಾನಸಭೆಯಲ್ಲಿ ವಿಷಯ ಪ್ರಸ್ತಾಪಿಸಿದರೆ ಆಗಲ್ಲ ಎನ್ನುತ್ತಾರೆ.


ಪ್ರತಿಭಟನೆ ಮಾಡಿದರೆ ಆಗಲ್ಲ ಎನ್ನುತ್ತಾರೆ, ಈಗ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ಮಾಡಿದರೂ ರಾಜ್ಯತ್ವ ಸಿಗುವುದಿಲ್ಲ ಎನ್ನುತ್ತಾರೆ. ಹಾಗಾದರೆ, ರಾಜ್ಯತ್ವಕ್ಕಾಗಿ ಶ್ವೇತಭವನಕ್ಕೆ ಹೋಗಿ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಬೇಕೇ ಎಂದು ಪ್ರಶ್ನಿಸಿದ್ದಾರೆ.

---

# ಫೈಬರ್ ಟು ಫ್ಯಾಷನ್: ಹೂಡಿಕೆಗೆ ಕರ್ನಾಟಕವೇ ಶ್ರೇಷ್ಠ ತಾಣ

## ಭಾರತ್ ಟೆಕ್ಸ್-2026ರಲ್ಲಿ 2821 ಕೋಟಿ ರೂ. ಒಪ್ಪಂದಗಳಿಗೆ ಸಹಿ

## ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ ಮಾಹಿತಿ




**ನವದೆಹಲಿ, ಜು.15:** ವಿಶ್ವದ ಪ್ರಮುಖ ಟೆಕ್ಸ್‌ಟೈಲ್ ಸಮಾವೇಶವಾದ 'ಭಾರತ್ ಟೆಕ್ಸ್-2026'ರಲ್ಲಿ ಕರ್ನಾಟಕ ರಾಜ್ಯವು ಉತ್ತಮ ಸಾಧನೆ ಮಾಡಿದ್ದು, ವಿವಿಧ ಸಂಸ್ಥೆಗಳೊಂದಿಗೆ 2,821 ಕೋಟಿ ರೂ. ಮೌಲ್ಯದ 12 ಹೂಡಿಕೆ ಒಪ್ಪಂದಗಳಿಗೆ ಸಹಿ ಹಾಕಿದೆ.

ಈ ಬೃಹತ್ ಹೂಡಿಕೆಯಿಂದ ರಾಜ್ಯದಲ್ಲಿ 11,020ಕ್ಕೂ ಹೆಚ್ಚು ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ ತಿಳಿಸಿದ್ದಾರೆ.

ನವದೆಹಲಿಯ ಭಾರತ್ ಮಂಡಪದಲ್ಲಿ ಆಯೋಜಿಸಲಾಗಿದ್ದ "Investment Opportunities in Karnataka & MoU Signing" ಕಾರ್ಯಕ್ರಮದಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ ಹಾಗೂ ಜವಳಿ ಅಭಿವೃದ್ಧಿ ಆಯುಕ್ತ ಮತ್ತು ಕೈಮಗ್ಗ ಹಾಗೂ ಜವಳಿ ನಿರ್ದೇಶಕ ಎ.ಬಿ. ಬಸವರಾಜು ಅವರ ಸಮ್ಮುಖದಲ್ಲಿ ಈ ಮಹತ್ವದ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

**ಫೈಬರ್ ಟು ಫ್ಯಾಷನ್ – ಹೂಡಿಕೆಗೆ ಕರ್ನಾಟಕವೇ ಶ್ರೇಷ್ಠ ತಾಣ:**

ಕಾರ್ಯಕ್ರಮದಲ್ಲಿ ಪ್ರಮುಖ ಜವಳಿ ಉದ್ಯಮಿಗಳು, ರಫ್ತುದಾರರು ಹಾಗೂ ಹೂಡಿಕೆದಾರರನ್ನು ಉದ್ದೇಶಿಸಿ ಮಾತನಾಡಿದ ರೋಹಿಣಿ ಸಿಂಧೂರಿ ಅವರು ಜವಳಿ ಕ್ಷೇತ್ರದಲ್ಲಿ ಹೂಡಿಕೆ ಮಾಡಲು ಕರ್ನಾಟಕವು ದೇಶದಲ್ಲೇ ಅತ್ಯುತ್ತಮ ತಾಣವಾಗಿದೆ.

ಕರ್ನಾಟಕ ಕೇವಲ ಗಾರ್ಮೆಂಟ್ ಉತ್ಪಾದನೆಯ ಮುಂಚೂಣಿಯ ರಾಜ್ಯವಲ್ಲ; ಕಚ್ಚಾ ನಾರಿನಿಂದ ಹಿಡಿದು ವಿಶ್ವಮಟ್ಟದ ಉಡುಪು ಉತ್ಪಾದನೆಯವರೆಗೆ ಸಂಪೂರ್ಣ 'ಫೈಬರ್ ಟು ಫ್ಯಾಷನ್' ಪರಿಸರ ವ್ಯವಸ್ಥೆಯನ್ನು ಹೊಂದಿದೆ. ಹೂಡಿಕೆ, ಉತ್ಪಾದನೆ ಮತ್ತು ಜಾಗತಿಕ ಮಾರುಕಟ್ಟೆ ವಿಸ್ತರಣೆಗೆ ರಾಜ್ಯವು ಉತ್ತಮ ತಾಣವಾಗಿದೆ ಎಂದು ಬಣ್ಣಿಸಿದರು.

**ಹೊಸ ಜವಳಿ ನೀತಿ 2026-31, 5 ಲಕ್ಷ ಉದ್ಯೋಗದ ಗುರಿ:**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ರೂಪಿಸಲಾಗುತ್ತಿರುವ 'ಕರ್ನಾಟಕ ಜವಳಿ ಮತ್ತು ಉಡುಪು ನೀತಿ – 2026-31' ರಾಜ್ಯದ ಜವಳಿ ಕ್ಷೇತ್ರಕ್ಕೆ ಹೊಸ ದಿಕ್ಸೂಚಿ ಯಾಗಲಿದೆ. "ಮುಂದಿನ ಐದು ವರ್ಷಗಳಲ್ಲಿ 20,000 ಕೋಟಿ ರೂ. ಹೂಡಿಕೆ ಆಕರ್ಷಿಸಿ, 5 ಲಕ್ಷ ಉದ್ಯೋಗ ಸೃಷ್ಟಿಸುವ ಬೃಹತ್ ಗುರಿಯನ್ನು ಸರ್ಕಾರ ಹೊಂದಿದೆ.



ವಿಶೇಷವಾಗಿ ಕಲ್ಯಾಣ ಕರ್ನಾಟಕ ಸೇರಿದಂತೆ ದ್ವಿತೀಯ ಮತ್ತು ತೃತೀಯ ಹಂತದ ನಗರಗಳಲ್ಲಿ ಜವಳಿ ಕೈಗಾರಿಕೆಗಳ ವಿಸ್ತರಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಅವರು ವಿವರಿಸಿದರು.

- **ಹೂಡಿಕೆ ಒಪ್ಪಂದಗಳು: 12**
- **ಹೂಡಿಕೆ ಮೊತ್ತ: 2,821 ಕೋಟಿ ರೂ.**
- **ನಿರೀಕ್ಷಿತ ಉದ್ಯೋಗ ಸೃಷ್ಟಿ: 11,020**
- **ಪ್ರಮುಖ ಹೂಡಿಕೆ ವಲಯಗಳು: ಸ್ಪಿನ್ನಿಂಗ್, ಗಾರ್ಮೆಂಟ್ಸ್, ಪ್ರೊಸೆಸಿಂಗ್, ಟೆಕ್ನಿಕಲ್ ಟೆಕ್ಸ್‌ಟೈಲ್ಸ್, ಮೆಡಿಕಲ್ ಟೆಕ್ಸ್‌ಟೈಲ್ಸ್, ಹೈಜೀನ್ ಉತ್ಪನ್ನಗಳು ಹಾಗೂ ಸಮಗ್ರ ಜವಳಿ ಪಾರ್ಕ್‌ಗಳು.**
- **ಹೂಡಿಕೆಯಾಗಲಿರುವ ಜಿಲ್ಲೆಗಳು: ಕಲಬುರಗಿ, ಚಿತ್ರದುರ್ಗ, ರಾಮನಗರ, ಮೈಸೂರು, ಚಾಮರಾಜನಗರ, ಉಡುಪಿ, ದಕ್ಷಿಣ ಕನ್ನಡ, ಚಿಕ್ಕಬಳ್ಳಾಪುರ ಮತ್ತು ಕೋಲಾರ**

ರಾಜ್ಯದಲ್ಲಿ ಉದ್ಯಮಿಗಳಿಗೆ ಏಕಗವಾಕ್ಷಿ ತ್ವರಿತ ಅನುಮೋದನೆ, ಪ್ಲಗ್-ಆಂಡ್-ಪ್ಲೇ ಕೈಗಾರಿಕಾ ಮೂಲಸೌಕರ್ಯ, ಕೌಶಲ್ಯಾಭಿವೃದ್ಧಿ, ವಲಯವಾರು ಪ್ರೋತ್ಸಾಹಧನ ಹಾಗೂ ಸುಸ್ಥಿರ ಉತ್ಪಾದನೆಗೆ ಸರ್ಕಾರವು ಸಂಪೂರ್ಣ ಉತ್ತೇಜನ ನೀಡುತ್ತಿದೆ ಎಂದು ರೋಹಿಣಿ ಸಿಂಧೂರಿ ಭರವಸೆ ನೀಡಿದರು.

**ಪ್ರಮುಖ ಜವಳಿ ಪಾರ್ಕ್‌ಗಳ ವಿಸ್ತರಣೆ:**

ಕಲಬುರಗಿಯಲ್ಲಿ ನಿರ್ಮಾಣವಾಗುತ್ತಿರುವ 1,000 ಎಕರೆ ವಿಸ್ತೀರ್ಣದ 'ಪಿಎಂ ಮಿತ್ರ ಮೆಗಾ ಜವಳಿ ಪಾರ್ಕ್', ಜೊತೆಗೆ ದೊಡ್ಡಬಳ್ಳಾಪುರ, ಶಿಗ್ಗಾವಿ ಮತ್ತು ದಾವಣಗೆರೆಯಲ್ಲಿರುವ ಜವಳಿ ಪಾರ್ಕ್‌ಗಳು ಕರ್ನಾಟಕವನ್ನು ದೇಶದ ಪ್ರಮುಖ ಜವಳಿ ಉತ್ಪಾದನಾ ಕೇಂದ್ರವನ್ನಾಗಿ ರೂಪಿಸಲಿವೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಜವಳಿ ಕ್ಷೇತ್ರದ ಪ್ರಮುಖ ಉದ್ಯಮಿಗಳಾದ ಶಾಹಿ ಎಕ್ಸ್‌ಪೋರ್ಟ್‌ನ ಆನಂದ ಪದ್ಮನಾಭನ್, ಟೆಕ್ಸ್‌ಸ್ಪೋರ್ಟ್ ಇಂಡಸ್ಟ್ರೀಸ್‌ನ ನರೇನ್ ಗೋಯೆಂಕಾ, ಗೋಕಲ್ದಾಸ್ ಎಕ್ಸ್‌ಪೋರ್ಟ್ಸ್‌ನ ಪ್ರಭಾತ್ ಕುಮಾರ್ ಸಿಂಗ್ ಹಾಗೂ ಮಂಜುಶ್ರೀ ಸ್ಪಿನ್‌ಟೆಕ್‌ನ ವಿಮಲ್ ಕೇಡಿಯಾ ಸೇರಿದಂತೆ ಹಲವರು ಭಾಗವಹಿಸಿ, ಕರ್ನಾಟಕದಲ್ಲಿನ ಹೂಡಿಕೆ ಅವಕಾಶಗಳು ಹಾಗೂ ಸರ್ಕಾರದ ಹೊಸ ಜವಳಿ ನೀತಿಯ ಕುರಿತು ತಮ್ಮ ಮೆಚ್ಚುಗೆ ಮತ್ತು ಅಭಿಪ್ರಾಯಗಳನ್ನು ಹಂಚಿಕೊಂಡರು.

---

# ಎಸ್‌ಐಆರ್ ಪೂರಕವಾಗಿ ಹೆಲ್ಪ್‌ಲೈನ್: ಕೆಪಿಸಿಸಿ ಉಪಾಧ್ಯಕ್ಷ ಮುರಳೀಧರ ಹಾಲಪ್ಪ ಚಾಲನೆ




**ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಸದೃಢಗೊಳಿಸಲು ಮತದಾನದ ಹಕ್ಕು ಅತ್ಯಗತ್ಯ. ದೇಶದ ಆಡಳಿತ ನಿರ್ಧರಿಸುವ ಈ ಹಕ್ಕು ಪ್ರತಿಯೊಬ್ಬ ಅರ್ಹ ಮತದಾರನಿಗೆ ಸಮಾನವಾಗಿ ದೊರೆಯಬೇಕು**

**–ಮುರಳಿಧರ ಹಾಲಪ್ಪ,**
ಕೆಪಿಸಿಸಿ ಉಪಾಧ್ಯಕ್ಷರು
ಹಾಲಪ್ಪ ಪ್ರತಿಷ್ಠಾನ ಅಧ್ಯಕ್ಷರು,

**ತುಮಕೂರು, ಜು. 15:** ರಾಜ್ಯದಲ್ಲಿ ಆಡಳಿತದಲ್ಲಿರುವ ಕಾಂಗ್ರೆಸ್ ಪಕ್ಷ ಎಲ್ಲಿಯೂ ಮತದಾರರ ಪಟ್ಟಿಗೆ ಅಕ್ರಮವಾಗಿ ಮತದಾರರನ್ನು ಸೇರಿಸುವ ಕೆಲಸ ಮಾಡಿಲ್ಲ. ಇದು ಬಿಜೆಪಿಯಾ ಊಹಾಪೋಹ ಅಷ್ಟೇ ಎಂದು ಕೆಪಿಸಿಸಿ ಉಪಾಧ್ಯಕ್ಷ ಮುರಳೀಧರ ಹಾಲಪ್ಪ ತಿಳಿಸಿದ್ದಾರೆ.

ನಗರದ ಜಯನಗರ ಪೂರ್ವದಲ್ಲಿರುವ ತಮ್ಮ ಗೃಹ ಕಚೇರಿ ಬಳಿ ಎಸ್.ಐ.ಆರ್.ಗೆ ಪೂರಕವಾಗಿ ಹೆಲ್ಪ್ ಲೈನ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ಒಂದು ಮತಪಟ್ಟಿಗೆ ಅಕ್ರಮವಾಗಿ ಮತದಾರರನ್ನು ಸೇರಿಸಬೇಕೆಂದರೆ, ರೇಷನ್ ಕಾರ್ಡು, ಪಾಸ್‌ಪೋರ್ಟ್, ಬ್ಯಾಂಕ್ ಪಾಸ್ ಪುಸ್ತಕ ಸೇರಿದಂತೆ ಕನಿಷ್ಠ ದಾಖಲಾತಿಗಳಾದರೂ ಬೇಕು. ಅಂತಹ ಯಾವ ಕಾರ್ಯವನ್ನು ರಾಜ್ಯ ಸರಕಾರ ಮಾಡುತ್ತಿಲ್ಲ. ಎಸ್.ಐ.ಆರ್. ಮೂಲಕ ಕಾಂಗ್ರೆಸ್ ಮತದಾರರನ್ನು ಕಿತ್ತು ಹಾಕಬಹುದು ಎಂಬ ಭ್ರಮೆಯಲ್ಲಿದ್ದ ಬಿಜೆಪಿಗೆ, ರಾಜ್ಯದಲ್ಲಿ ವ್ಯವಸ್ಥಿತವಾಗಿ ನಡೆಯುತ್ತಿರುವ ಎಸ್.ಐ.ಆರ್. ನಿರಾಸೆ ತಂದಿದೆ. ಹಾಗಾಗಿ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ. ಅವರ ಆರೋಪದಲ್ಲಿ ಯಾವುದೇ ಹುರುಳು ಇಲ್ಲ ಎಂದರು.

ಚುನಾವಣಾ ಆಯೋಗ, ಎಸ್.ಐ.ಆರ್. ಪ್ರಕ್ರಿಯೆ ಸರಿಯಾಗಿದೆಯೇ, ಇಲ್ಲವೇ ಎಂಬುದನ್ನು ತಿಳಿಯಲು ಎಲ್ಲಾ ಪಕ್ಷಗಳಿಗೂ ಬೂತ್ ಮಟ್ಟದ ಏಜೆಂಟ್‌ರಿಗೆ (ಬಿಎಲ್‌ಎ-02) ಅಧಿಕೃತವಾಗಿ ಅವಕಾಶ ನೀಡಿದೆ. ಅವರಿಂದ ಮಾಹಿತಿ ಪಡೆಯಲಿ, ಅದನ್ನು ಬಿಟ್ಟು ನಾವು ಅಂದುಕೊಂಡಿದ್ದು ಸಾಧ್ಯವಾಗುವುದಿಲ್ಲ ಎಂಬ ಕಾರಣ ಕ್ಕೆ,ಎಸ್.ಐ.ಆರ್.ಪ್ರಕ್ರಿಯೆಯನ್ನೇ ವಿರೋಧಿ ಸುವುದು ಸರಿಯಲ್ಲ. ಒಂದು ವೇಳೆ ಅಕ್ರಮ ಮತದಾರರು ಸೇರ್ಪಡೆಗೊಂಡಿದ್ದರೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶವಿದೆ.ಆ ಸಂದರ್ಭದಲ್ಲಿ ತಮ್ಮ ಬಳಿ ದಾಖಲೆಗಳಿದ್ದರೆ, ಅವುಗಳೊಂದಿಗೆ ಚುನಾವಣಾ ಆಯೋಗಕ್ಕೆ ದೂರು ಸಲ್ಲಿಸಲು ಮುಕ್ತ ಅವಕಾಶವಿದೆ. ಅದನ್ನು ಬಿಟ್ಟು ಗೊಂದಲ ಸೃಷ್ಟಿಸುವುದರಿಂದ ಯಾವುದೇ ಪ್ರಯೋಜನವಿಲ್ಲ ಎಂದು ಮುರಳೀಧರ ಹಾಲಪ್ಪ ತಿಳಿಸಿದರು.

ಇದುವರೆಗೂ ದೇಶದಲ್ಲಿ 16 ರಾಜ್ಯ ಮತ್ತು ನಾಲ್ಕು ಕೇಂದ್ರಾಡಳಿತ ಪ್ರದೇಶಗಳು ಸೇರಿ 20 ರಾಜ್ಯಗಳಲ್ಲಿ ಎಸ್.ಐ.ಆರ್. ಪ್ರಕ್ರಿಯೆ ಪೂರ್ಣಗೊಂಡಿದೆ. ಒಟ್ಟು 6 ಕೋಟಿಗೂ ಹೆಚ್ಚು ಮತದಾರರನ್ನು ಕೈಬಿಡಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಮಮತ ಬ್ಯಾನರ್ಜಿ ಸೋತಿದ್ದು ಕೇವಲ 6 ಸಾವಿರ ಮತಗಳಿಂದ, ಆದರೆ ಆ ಕ್ಷೇತ್ರದಲ್ಲಿ ಎಸ್.ಐ.ಆರ್ ಮೂಲಕ ಕೈಬಿಟ್ಟಿದ್ದು, 35 ಸಾವಿರಕ್ಕೂ ಹೆಚ್ಚು ಮತಗಳು, ಇದುವರೆಗೂ ಒಬ್ಬರೇ ಒಬ್ಬರು ಅಕ್ರಮ ವಲಸಿಗರನ್ನು ದೇಶದಿಂದ ಹೊರ ಹಾಕಿಲ್ಲ. ಕರ್ನಾಟಕದಲ್ಲಿಯೂ ಅದೇ ರೀತಿ ಆಗಬಹುದು ಎಂಬ ಎಚ್ಚರಿಕೆಯಿಂದ ಪಕ್ಷದಿಂದ ಮುನ್ನೆಚ್ಚರಿಕೆ ತೆಗೆದು ಕೊಂಡು ಅರ್ಹರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಎಚ್ಚರಿಕೆ ವಹಿಸಲಾಗುತ್ತಿದೆ. ಅದಕ್ಕಾಗಿಯೇ ನಾವು ಕೂಡ ಹೆಲ್ಪ್ ಲೈನ್ ತೆಗೆದು, ಮತದಾರರಿಗೆ ಎನ್ಯುಮರೇಷನ್ ಫಾರಂ ತುಂಬಲು ಅಗತ್ಯವಿರುವ ಮಾಹಿತಿ ಒದಗಿಸುವ ಕೆಲಸ ನಿರಂತರವಾಗಿ ಮಾಡಲಾಗುತ್ತಿದೆ ಎಂದು ಮುರಳೀಧರ ಹಾಲಪ್ಪ ನುಡಿದರು.

ಕರ್ನಾಟಕದಲ್ಲಿ ಎಸ್.ಐ.ಆರ್. ಪ್ರಕ್ರಿಯೇ ಪ್ರಾರಂಭವಾಗಿ 12 ದಿನ ಕಳೆದಿದೆ. ಸರಕಾರ ಈಗಾಗಲೇ ವ್ಯಾಪಕ ಪ್ರಚಾರ ಕೈಗೊಂಡು ಎಸ್.ಐ.ಆರ್. ಪ್ರಕ್ರಿಯೆಯಿಂದ ಹೊರಗುಳಿಯದಂತೆ ಎಚ್ಚರಿಕೆ ವಹಿಸಿದೆ.ಒಂದು ವೇಳೆ ಮತದಾರರ ಪಟ್ಟಿಯಲ್ಲಿ ಹೆಸರಿಲ್ಲ ವೆಂದರೆ ಸರಕಾರದ ಸೌಲಭ್ಯಗಳಿಂದ ವಂಚಿತರಾಗುವ ಸಾಧ್ಯತೆ ಹೆಚ್ಚು. ಹಾಗಾಗಿ ಪ್ರತಿಯೊಬ್ಬರು ಇದರಲ್ಲಿ ಪಾಲ್ಗೊಳ್ಳುವಂತೆ ಮಾಡಲು, ಕಾಂಗ್ರೆಸ್ ಪಕ್ಷ ಹೆಲ್ಪ್ ಡೆಸ್ಕ್ ನಡೆಸುತ್ತಿದೆ. ಇದರ ಪ್ರಯೋಜನವನ್ನು ಮತದಾರರು ಪಡೆದುಕೊಂಡು ತಮ್ಮ ಸಂವಿಧಾನಬದ್ಧ ಹಕ್ಕನ್ನು ಉಳಿಸಿಕೊಳ್ಳಬೇಕೆಂದು ಮುರುಳೀಧರ ಹಾಲಪ್ಪ ಕರೆ ನೀಡಿದರು. ಮಾಜಿ ಶಾಸಕ ಹಾಗೂ ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಡಾ.ಎಸ್.ಷಫಿ ಅಹಮದ್ ಮಾತನಾಡಿ, ಜೂನ್ 30 ರಿಂದ ಜುಲೈ 29 ರವರೆಗೆ ಒಂದು ತಿಂಗಳ ಕಾಲ ರಾಜ್ಯದಲ್ಲಿ ಎಸ್.ಐ.ಆರ್. ಪ್ರಕಿಯೆ ಚಾಲ್ತಿಯಲ್ಲಿದೆ. ದೇಶದ ಕೆಲ ರಾಜ್ಯಗಳಲ್ಲಿ ಆಗಿರುವ ತೊಂದರೆಯನ್ನು ಮನಗಂಡು, ಕಳೆದ ಒಂದು ವರ್ಷದಿಂದಲೇ ಕಾಂಗ್ರೆಸ್ ಪಕ್ಷದವತಿಯಿಂದ ಎಸ್.ಐ.ಆರ್.ಕುರಿತು ಜಾಗೃತಿ ಮೂಡಿಸುವ ಕೆಲಸ ಮಾಡಲಾಗಿತ್ತು. ಆದರ ಭಾಗವಾಗಿ ಜನರು ಎಚ್ಚೆತ್ತು ತಮ್ಮ ಹಕ್ಕಿನ ರಕ್ಷಣೆಗೆ ಮುಂದಾಗಿದ್ದಾರೆ.

ಕಾಂಗ್ರೆಸ್ ಪಕ್ಷದ ಸಾಂಪ್ರದಾಯಕ ಮತದಾರರನ್ನು ಪಟ್ಟಿಯಿಂದ ಹೊರಗಿಡಬಹುದು ಎಂದು ಕೊಂಡಿದ್ದ ಬಿಜೆಪಿ ಮತ್ತು ಅದರ ಮಿತ್ರ ಪಕ್ಷಗಳಿಗೆ ಇದರಿಂದ ನಿರಾಸೆಯಾಗಿದೆ. ಹಾಗಾಗಿ ಕೇಂದ್ರ ಚುನಾವಣಾ ಆಯೋಗಕ್ಕೆ ಆಧಾರವಿಲ್ಲದೆ ದೂರು ನೀಡಿದೆ. ಶೆಟ್ಟಿಹಳ್ಳಿಯ ಎಚ್.ಎಂ.ಎಸ್ ಕ್ಯಾಂಪಸ್‌ನಲ್ಲಿಯೂ ಇದೇ ರೀತಿಯ ಹೆಲ್ಪ್ ಲೈನ್ ತೆರೆದು, ಮತದಾರರಿಗೆ 2002 ಮತದಾರರ ಪಟ್ಟಿ ಮತ್ತು 2025ರ ಮತದಾರರ ಪಟ್ಟಿಯನ್ನು ಒದಗಿಸುವ ಮೂಲಕ ಫಾರಂ ತುಂಬಲು ಅನುಕೂಲ ಕಲ್ಪಿಸಲಾಗಿದೆ ಎಂದರು. ಈ ವೇಳೆ ಕಾಂಗ್ರೆಸ್ ಪಕ್ಷದ ಮುಖಂಡರು ಮತ್ತಿತರರು ಪಾಲ್ಗೊಂಡಿದ್ದರು.

# ಎಸ್‌ಐಆರ್‌ನಲ್ಲಿ ಮತದಾರರ ಸೇರ್ಪಡೆಗಿಂತ ಹೊರಗಿಡುವುದಕ್ಕೇ ಹೆಚ್ಚು ಕೇಂದ್ರಿತ: ಮಾಜಿ ಚುನಾವಣಾ ಆಯುಕ್ತ ಎಸ್.ವೈ. ಖುರೇಶಿ ಆರೋಪ

**ನವದೆಹಲಿ, ಜು.15:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯು ಮತದಾರರನ್ನು ಸೇರ್ಪಡೆಗೊಳಿಸುವುದಕ್ಕಿಂತ ಹೊರಗಿಡುವಿಕೆಯತ್ತಲೇ ಹೆಚ್ಚು ಕೇಂದ್ರೀಕೃತವಾಗಿದ್ದು, ಇದರಿಂದ ಪ್ರಜಾಪ್ರಭುತ್ವ ಹಾಗೂ ಮುಕ್ತ, ನ್ಯಾಯಸಮ್ಮತ ಚುನಾವಣೆಗಳಿಗೆ ಧಕ್ಕೆಯಾಗಿದೆ ಎಂದು ಮಾಜಿ ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಎಸ್.ವೈ.ಖುರೈಶಿ ಆರೋಪಿಸಿದ್ದಾರೆ.



ತಮ್ಮ ಹೊಸ ಪುಸ್ತಕ 'India and I: A Hundred Memories, Not a Memoir' ಬಿಡುಗಡೆಯ ಮುನ್ನ ಪಿಟಿಐಗೆ ನೀಡಿದ ವಿಶೇಷ ಸಂದರ್ಶನದಲ್ಲಿ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಎಷ್ಟು ಜನರನ್ನು ಮತದಾರರ ಪಟ್ಟಿಯಿಂದ ಹೊರಗಿಡಬಹುದು ಎಂಬುದರ ಮೇಲೆಯೇ ಒತ್ತು ನೀಡಲಾಗುತ್ತಿದೆ ಎಂದು ಟೀಕಿಸಿದರು.

ಸಾಧ್ಯವಾದಷ್ಟು ಹೆಚ್ಚು ಜನರನ್ನು ಮತದಾರರ ಪಟ್ಟಿಯಿಂದ ಹೊರಹಾಕಿದರೆ ಉತ್ತಮ ಸಾಧನೆ ಮಾಡಿದಂತಾಗುತ್ತದೆ ಎಂಬ ಮನೋಭಾವ ಕಾಣಿಸುತ್ತಿದೆ ಎಂದು ಹೇಳಿದರು.

ಮತದಾರರಾಗಿ ನೋಂದಾಯಿಸಿಕೊಳ್ಳುವುದು ಪ್ರತಿಯೊಬ್ಬ ನಾಗರಿಕನ ಸಾಂವಿಧಾನಿಕ ಹಕ್ಕು. ಆದರೆ, ಅದನ್ನು ಚುನಾವಣಾ ಆಯೋಗ ನೀಡುವ ಔದಾರ್ಯ ಎಂಬ ರೀತಿಯ ವಾತಾವರಣ ನಿರ್ಮಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಮ್ಮ ಅವಧಿಯಲ್ಲಿ ಮತದಾರರ ಹೆಸರು, ವಯಸ್ಸು, ವಿಳಾಸ ಅಥವಾ ಕಾಗುಣಿತದಲ್ಲಿ ಸಣ್ಣಪುಟ್ಟ ದೋಷಗಳಿದ್ದರೂ, ಆತನೇ ಸರಿಯಾದ ವ್ಯಕ್ತಿ ಎಂಬುದು ಖಚಿತವಾದರೆ, ಯಾವುದೇ ಮತದಾರನೂ ಪಟ್ಟಿಯಿಂದ ಹೊರಗುಳಿಯದಂತೆ ಆ ದೋಷಗಳನ್ನು ಕಡೆಗಣಿಸುವಂತೆ ಚುನಾವಣಾ ಸಿಬ್ಬಂದಿಗೆ ಸೂಚಿಸಲಾಗುತ್ತಿತ್ತು. ಯಾವುದೇ ಅರ್ಹ ಮತದಾರನನ್ನು ಹೊರಗಿಡಬಾರದು ಎಂಬುದೇ ನಮ್ಮ ನೀತಿಯಾಗಿತ್ತು. ಆದರೆ, ಈಗ ಸಾಧ್ಯವಾದಷ್ಟು ಹೆಚ್ಚು ಜನರನ್ನು ಪಟ್ಟಿಯಿಂದ ಹೊರಹಾಕುವತ್ತವೇ ಗಮನ ಹರಿಸಲಾಗಿದೆ ಎಂದು ಆರೋಪಿಸಿದರು. ಇದು ಪ್ರಜಾಪ್ರಭುತ್ವಕ್ಕೆ ನಿಜವಾಗಿಯೂ ಹಾನಿ ಮಾಡಿದೆ. ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆಗಳು ತೊಂದರೆಗೊಳಗಾಗಿವೆ. ದೇಶ ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಇದೇ ಕಾರಣಕ್ಕೆ ಈ ವಿವಾದ ಉದ್ಭವಿಸಿದೆ ಎಂದು 2010ರ ಜುಲೈ 30ರಿಂದ 2012ರ ಜೂನ್ 10ರವರೆಗೆ ಮುಖ್ಯ ಚುನಾವಣಾ ಆಯುಕ್ತರಾಗಿದ್ದ ಖುರೈಶಿ ಹೇಳಿದರು.

ಬಿಹಾರದಲ್ಲಿ ಅಕ್ರಮ ವಲಸಿಗರನ್ನು ಪತ್ತೆಹಚ್ಚುವ ಹೆಸರಿನಲ್ಲಿ ಎಸ್‌ಐಆರ್ ನಡೆಸಿ ಸುಮಾರು ಎಂಟು ಕೋಟಿ ಜನರನ್ನು ದಾಖಲೆಗಳಿಗಾಗಿ ಅಲೆದಾಡುವಂತೆ ಮಾಡಲಾಗಿದೆ. ಆದರೆ, ಎಷ್ಟು ವಿದೇಶಿಯರನ್ನು ಪತ್ತೆಹಚ್ಚಲಾಗಿದೆ ಎಂಬ ಅಂಕಿ-ಅಂಶಗಳನ್ನು ಚುನಾವಣಾ ಆಯೋಗ ಇದುವರೆಗೆ ಬಹಿರಂಗಪಡಿಸಿಲ್ಲ ಏಕೆ ಎಂದು ಖುರೇಶಿ ಪ್ರಶ್ನಿಸಿದರು.


ಮಾಧ್ಯಮ ವರದಿಗಳ ಪ್ರಕಾರ 500 ವಿದೇಶಿಯರನ್ನು ಪತ್ತೆಹಚ್ಚಲಾಗಿದ್ದು, ಅವರಲ್ಲಿ 150 ಮಂದಿ ಬಾಂಗ್ಲಾದೇಶದವರು ಹಾಗೂ 350 ಮಂದಿ ಬಿಹಾರದಲ್ಲಿ ವಿವಾಹವಾಗಿ ನೆಲೆಸಿರುವ ನೇಪಾಳಿ ಹಿಂದೂ ಮಹಿಳೆಯರು ಎಂದು ತಿಳಿದುಬಂದಿದೆ. 150 ಬಾಂಗ್ಲಾದೇಶಿಗಳನ್ನು ಪತ್ತೆಹಚ್ಚಲು ಎಂಟು ಕೋಟಿ ಜನರನ್ನು ಸಂಕಷ್ಟಕ್ಕೆ ಸಿಲುಕಿಸಿದ್ದೀರಿ. ಈ ಪ್ರಕ್ರಿಯೆಯಲ್ಲಿ ಲಕ್ಷಾಂತರ ಮತದಾರರ ಹೆಸರನ್ನು ಅಳಿಸಲಾಗಿದೆ. ಇದರಿಂದ ಯಾವ ಉದ್ದೇಶ ಸಾಧನೆಯಾಯಿತು ಇದು ನ್ಯಾಯಯುತವೇ ಖಂಡಿತವಾಗಿಯೂ ಅಲ್ಲ' ಎಂದು ಖುರೈಶಿ ಹೇಳಿದರು.




ನವದೆಹಲಿಯಲ್ಲಿ ನಡೆದ ಐಸಿಎಆರ್ ಟೆಕ್ನಾಲಜಿ ಪೋರ್ಟ್‌ಫೋಲಿಯೊ ಫಾರ್ ಕಾರ್ಪೊರೇಟ್ ಸೋಶಿಯಲ್ ರೆಸ್ಪಾನ್ಸಿಬಿಲಿಟಿ ಕಾನ್‌ಕ್ಲೇವ್‌ಗೆ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಚಾಲನೆ ನೀಡಿದರು. ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವ ಭಾಗೀರಥ ಚೌಧರಿ ಮತ್ತು ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವ ರಾಮ್ ನಾಥ್ ಠಾಕೂರ್ ಹಾಜರಿದ್ದರು.

# ಕ್ರೈಸ್ತ ಮಿಷನರಿ ಗ್ರಹಾಂಸ್ಟೇನ್ಸ್- ಮತ್ತು ಮಕ್ಕಳ ಹತ್ಯೆ ಪ್ರಕರಣ ದಾರಾಸಿಂಗ್ ಕ್ಷಮಾದಾನ ಅರ್ಜಿ ಇತ್ಯರ್ಥಕ್ಕೆ ಸುಪ್ರೀಂ ಸೂಚನೆ

**ನವದೆಹಲಿ, ಜು.15:** 1999ರಲ್ಲಿ ಒಡಿಶಾದ ಕೇವಂಜರ್ ಜಿಲ್ಲೆಯಲ್ಲಿ ಆಸ್ಟ್ರೇಲಿಯಾದ ಕ್ರೈಸ್ತ ಮಿಷನರಿ ಗ್ರಹಾಂ ಸ್ಟುವರ್ಟ್ ಸ್ಟೇನ್ಸ್ ಮತ್ತು ಅವರ ಇಬ್ಬರು ಪುತ್ರರನ್ನು ಹತ್ಯೆಗೈದು ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಅಪರಾಧಿ ರವೀಂದ್ರ ಪಾಲ್ ಅಲಿಯಾಸ್ ದಾರಾಸಿಂಗ್‌ನ ಕ್ಷಮಾದಾನ ಅರ್ಜಿಯನ್ನು ಪರಿಶೀಲಿಸುತ್ತಿರುವ ಸಮಿತಿಯು ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳಲಿದೆ ಎಂದು ಸುಪ್ರೀಂ ಕೋರ್ಟ್ ಮಂಗಳವಾರ ವಿಶ್ವಾಸ ವ್ಯಕ್ತಪಡಿಸಿದೆ.



ನ್ಯಾಯಮೂರ್ತಿ ಮನೋಜ್ ಮಿಶ್ರಾ ಮತ್ತು ನ್ಯಾಯಮೂರ್ತಿ ವಿಜಯ್ ಬಿಷ್ಣೋಯ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠವು ಪ್ರಕರಣದ ವಿಚಾರಣೆಯನ್ನು ಆಗಸ್ಟ್ 19ಕ್ಕೆ ಮುಂದೂಡಿದೆ. ವಿಚಾರಣೆಯನ್ನು ಮುಂದೂಡುವ ಮುನ್ನ ಒಡಿಶಾ ಸರ್ಕಾರವು ನ್ಯಾಯಾಲಯದಲ್ಲಿ ಕಾಲಾವಕಾಶ ಕೋರಿತು. ಕ್ಷಮಾದಾನ ಅರ್ಜಿಯನ್ನು ಪರಿಶೀಲಿಸುತ್ತಿರುವ ಸಮಿತಿಯು ಕೆಲವು ದಾಖಲೆಗಳನ್ನು ಕೇಳಿದ್ದು, ಅವುಗಳು ಇನ್ನೂ ಲಭ್ಯವಾಗಿಲ್ಲ ಎಂದು ಸರ್ಕಾರವು ನ್ಯಾಯಾಲಯದ ಗಮನಕ್ಕೆ ತಂದಿತು.

ಸರ್ಕಾರದ ಮನವಿಯನ್ನು ಪುರಸ್ಕರಿಸಿದ ನ್ಯಾಯಾಲಯವು ಹೆಚ್ಚಿನ ವಿಚಾರಣೆಯನ್ನು ಆಗಸ್ಟ್ 19ಕ್ಕೆ ಮುಂದೂಡಿತು. ಈ ಸನ್ನಿವೇಶಗಳಲ್ಲಿ, ಪ್ರಕರಣವನ್ನು ಆಗಸ್ಟ್ 19ಕ್ಕೆ ಮುಂದೂಡುವುದು ಸೂಕ್ತವೆಂದು ನಾವು ಭಾವಿಸುತ್ತೇವೆ. ಈ ಮಧ್ಯೆ, ಸಮಿತಿಯು ತನ್ನ ನಿರ್ಧಾರವನ್ನು ತೆಗೆದುಕೊಳ್ಳುತ್ತದೆ ಎಂದು ನಾವು ನಿರೀಕ್ಷಿಸುತ್ತೇವೆ ಎಂದು ಸುಪ್ರೀಂ ಕೋರ್ಟ್ ತನ್ನ ಒಂದು ಪುಟದ ಆದೇಶದಲ್ಲಿ ತಿಳಿಸಿದೆ.

ಕಳೆದ ವರ್ಷ ಮಾರ್ಚ್ 19 ರಂದು, ದಾರಾಸಿಂಗ್‌ನ ಕ್ಷಮಾದಾನ ಅರ್ಜಿಯನ್ನು ಆರು ವಾರಗಳೊಳಗೆ ಪರಿಗಣಿಸಿ ನಿರ್ಧರಿಸುವಂತೆ ಸುಪ್ರೀಂ ಕೋರ್ಟ್ ಒಡಿಶಾ ಸರ್ಕಾರಕ್ಕೆ ನಿರ್ದೇಶನ ನೀಡಿತ್ತು. 25 ವರ್ಷಗಳಿಗೂ ಹೆಚ್ಚು ಕಾಲ ಜೈಲುಶಿಕ್ಷೆ ಅನುಭವಿಸಿರುವ ತನಗೆ, ಅವಧಿಗೂ ಮುನ್ನ ಬಿಡುಗಡೆ ಹೊಂದಲು ನೆರವಾಗುವ ನಿಟ್ಟಿನಲ್ಲಿ ಉದಾರವಾದ ಕ್ಷಮಾದಾನ ನೀತಿಯ ಪ್ರಯೋಜನವನ್ನು ನೀಡಬೇಕೆಂದು ಸಿಂಗ್ ತನ್ನ ಅರ್ಜಿಯಲ್ಲಿ ಸುಪ್ರೀಂ ಕೋರ್ಟ್ ಅನ್ನು ಕೋರಿದ್ದನು. ಜನವರಿ 21, 1999ರ ರಾತ್ರಿ ದಾರಾ ಸಿಂಗ್ ನೇತೃತ್ವದ ಗುಂಪು ಗ್ರಹಾಂ ಸ್ಟೇನ್ಸ್ ಮತ್ತು ಅವರ ಪುತ್ರರಾದ ಫಿಲಿಪ್ (10 ವರ್ಷ) ಹಾಗೂ ತಿಮೋತಿ (6 ವರ್ಷ) ಅವರನ್ನು ಜೀವಂತವಾಗಿ ದಹಿಸಿತ್ತು. ಈ ಕ್ರೂರಹತ್ಯೆಗಳಿಗಾಗಿ ದಾರಾಸಿಂಗ್‌ನನ್ನು ಅಪರಾಧಿ ಎಂದು ಘೋಷಿಸಲಾಗಿತ್ತು.

ಸ್ಟೇನ್ಸ್ ಮತ್ತು ಅವರ ಮಕ್ಕಳು ತಮ್ಮ ಸ್ಟೇಷನ್ ವ್ಯಾಗನ್‌ನಲ್ಲಿ ಮಲಗಿದ್ದಾಗ ಸಿಂಗ್ ನೇತೃತ್ವದ ಗುಂಪು ಅವರ ಮೇಲೆ ದಾಳಿ ಮಾಡಿ ವಾಹನಕ್ಕೆ ಬೆಂಕಿ ಹಚ್ಚಿತ್ತು. ಅವರು ತಪ್ಪಿಸಿಕೊಳ್ಳಲು ಯತ್ನಿಸಿದಾಗ, ಲಾಠಿಗಳನ್ನು ಹಿಡಿದಿದ್ದ ಗುಂಪು ಅವರನ್ನು ಹೊರಬರದಂತೆ ತಡೆದು ಹತ್ಯೆ ಮಾಡಿತ್ತು. ಅವರ ಸುಟ್ಟು ಕರಕಲಾದ ಅಸ್ಥಿಪಂಜರಗಳು ನಂತರ ಪತ್ತೆಯಾಗಿದ್ದವು.

# ವಾಂಗ್ಚುಕ್ ಆರೋಗ್ಯ ಏರುಪೇರು: ಬಲವಂತದ ಆಹಾರ ನೀಡಲು ದೆಹಲಿ ಹೈಕೋರ್ಟ್‌ಗೆ ಅರ್ಜಿ



**ನವದೆಹಲಿ, ಜು.15:** ಪರಿಸರ ಹೋರಾಟಗಾರ ಹಾಗೂ ಶಿಕ್ಷಣತಜ್ಞ ಸೋನಂ ವಾಂಗ್ಚುಕ್ ಅವರ ಆರೋಗ್ಯ ಸ್ಥಿತಿ ತೀವ್ರವಾಗಿ ಹದಗೆಟ್ಟಿರುವ ಹಿನ್ನೆಲೆಯಲ್ಲಿ ಅವರನ್ನು ತಕ್ಷಣ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಅಗತ್ಯವಿದ್ದರೆ ಬಲವಂತವಾಗಿ ಆಹಾರ ನೀಡುವಂತೆ ನಿರ್ದೇಶನ ಕೋರಿ ದೆಹಲಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ.

ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹಿಸಿ ಕಳೆದ 18 ದಿನಗಳಿಂದ ಜಂತರ್ ಮಂತರ್‌ನಲ್ಲಿ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ವಾಂಗ್ಚುಕ್ ಅವರ ಆರೋಗ್ಯ ವೇಗವಾಗಿ ಕುಸಿಯುತ್ತಿದೆ ಎಂದು ಅರ್ಜಿಯಲ್ಲಿ ಆತಂಕ ವ್ಯಕ್ತಪಡಿಸಲಾಗಿದೆ. ಅವರು ಇದುವರೆಗೆ ಸುಮಾರು 8.5 ಕೆ.ಜಿ. ತೂಕ ಕಳೆದುಕೊಂಡಿದ್ದು, ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡದಿದ್ದರೆ ಜೀವಕ್ಕೆ ಅಪಾಯ ಉಂಟಾಗುವ ಸಾಧ್ಯತೆಯಿದೆ ಎಂದು ಅರ್ಜಿದಾರರು ನ್ಯಾಯಾಲಯದ ಗಮನಕ್ಕೆ ತಂದಿದ್ದಾರೆ.

ಅರ್ಜಿಯಲ್ಲಿ ಕೇಂದ್ರ ಸರ್ಕಾರ, ದೆಹಲಿ ಸರ್ಕಾರ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ತುರ್ತು ನಿರ್ದೇಶನ ನೀಡುವಂತೆ ಕೋರಲಾಗಿದ್ದು, ವಾಂಗ್ಚುಕ್ ಅವರನ್ನು ಕೂಡಲೇ ಸರ್ಕಾರಿ ಆಸ್ಪತ್ರೆಗೆ ಸ್ಥಳಾಂತರಿಸಿ ವೈದ್ಯಕೀಯ ಮೇಲ್ವಿಚಾರಣೆಯಲ್ಲಿ ಚಿಕಿತ್ಸೆ ನೀಡಬೇಕು ಎಂದು ಮನವಿ ಮಾಡಲಾಗಿದೆ. ಅಗತ್ಯ ಪರಿಸ್ಥಿತಿ ನಿರ್ಮಾಣವಾದರೆ ವೈದ್ಯರ ಸಲಹೆಯಂತೆ ಬಲವಂತವಾಗಿ ಆಹಾರ ನೀಡಲು ಅವಕಾಶ ಕಲ್ಪಿಸಬೇಕೆಂದೂ ಅರ್ಜಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಅರ್ಜಿಯನ್ನು ಬುಧವಾರ ತುರ್ತು ವಿಚಾರಣೆಗೆ ಕೈಗೆತ್ತಿಕೊಳ್ಳುವಂತೆ ಮನವಿ ಮಾಡಲಾಗಿದ್ದರೂ, ದೆಹಲಿ ಹೈಕೋರ್ಟ್ ಗುರುವಾರ ವಿಚಾರಣೆ ನಡೆಸುವುದಾಗಿ ಸೂಚಿಸಿದೆ. ಇದೇ ಸಮಯದಲ್ಲಿ ಹೈಕೋರ್ಟ್ ಕೇಂದ್ರ ಸರ್ಕಾರ ಮತ್ತು ದೆಹಲಿ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ. ನಾಳೆಯೊಳಗೆ ಉತ್ತರ ನೀಡುವಂತೆ ಹೈಕೋರ್ಟ್ ಸೂಚಿಸಿದೆ.

# ಸುಪ್ರೀಂಕೋರ್ಟ್‌ನಲ್ಲಿ ಹಲ್ಲೆ ನಡೆಸಿ, ಕಲಾಪಕ್ಕೆ ಅಡ್ಡಿ ಆರೋಪ: ಇಬ್ಬರು ಕಾನೂನು ವಿದ್ಯಾರ್ಥಿಗಳ ಬಂಧನ

**ನವದೆಹಲಿ, ಜು.15:** ಸುಪ್ರೀಂಕೋರ್ಟ್‌ನಲ್ಲಿ ಅರ್ಜಿಯೊಂದರ ವಿಚಾರಣೆಯ ಸಂದರ್ಭದಲ್ಲಿ ಭದ್ರತಾ ಸಿಬ್ಬಂದಿಯ ಮೇಲೆ ಹಲ್ಲೆ ಮಾಡಿ, ದೌರ್ಜನ್ಯ ಎಸಗಿದ ಹಾಗೂ ವಿಚಾರಣೆಗೆ ಅಡ್ಡಿಪಡಿಸಿದ ಆರೋಪದ ಮೇಲೆ ಇಬ್ಬರು ಕಾನೂನು ವಿದ್ಯಾರ್ಥಿಗಳನ್ನು ಬಂಧಿಸಲಾಗಿದೆ.

ಈ ಘಟನೆಗೆ ಸಂಬಂಧಿಸಿದಂತೆ ಅರ್ಜಿದಾರರಾಗಿ ಖುದ್ದಾಗಿ ಹಾಜರಾಗಿದ್ದ ಉತ್ತರ ಪ್ರದೇಶದ ಇಟಾವಾದ ಲಕ್ನೋ ವಿಶ್ವವಿದ್ಯಾಲಯದ ಮೂರನೇ ವರ್ಷದ ಕಾನೂನು ವಿದ್ಯಾರ್ಥಿ ಪ್ರಬಲ್ ಪ್ರತಾಪ್ ಸಿಂಗ್ (24) ಮತ್ತು ರಾಯ್‌ಬರೇಲಿ ಜಿಲ್ಲೆಯ ಎರಡನೇ ವರ್ಷದ ಕಾನೂನು ವಿದ್ಯಾರ್ಥಿ ಚಂದರ್ ಭನ್ (23) ಎಂಬವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಜುಲೈ 10ರಂದು ಸುಪ್ರೀಂಕೋರ್ಟ್‌ನ ಸಂಖ್ಯೆ 13ರ ಒಳಗೆ ವಿಶೇಷ ರಜಾ ಅರ್ಜಿ ವಿಚಾರಣೆ ನಡೆಯುತ್ತಿತ್ತು. ಪ್ರಬಲ್ ಪ್ರತಾಪ್, ಮತ್ತೋರ್ವ ಹಾಗೂ ಉತ್ತರ ಪ್ರದೇಶ ರಾಜ್ಯದ ನಡುವಿನ ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಈ ಘಟನೆ ಸಂಭವಿಸಿದೆ.

ಅರ್ಜಿದಾರರಾಗಿ ವೈಯಕ್ತಿಕವಾಗಿ ಹಾಜರಾದ ಪ್ರಬಲ್ ಪ್ರತಾಪ್, ನ್ಯಾಯಾಲಯದ ಕೋಣೆಯೊಳಗೆ ಕಾಗದಗಳನ್ನು ಎಸೆದು ಗದ್ದಲ ಸೃಷ್ಟಿಸುವ ಮೂಲಕ ನಿಂದನೀಯ ಮತ್ತು ಅಸಂಸದೀಯ ಭಾಷೆಯನ್ನು ಬಳಸುವ ಮೂಲಕ ನ್ಯಾಯಾಲಯದ ಕಲಾಪಗಳಿಗೆ ಅಡ್ಡಿಪಡಿಸಿದರು ಎಂದು ಪೊಲೀಸರು ತಿಳಿಸಿದ್ದಾರೆ.

ಸಭ್ಯತೆಯನ್ನು ಕಾಪಾಡಿಕೊಳ್ಳಲು ಮತ್ತು ಅವರನ್ನು ತಡೆಯಲು ಭದ್ರತಾ ಸಿಬ್ಬಂದಿ ಮಧ್ಯಪ್ರವೇಶಿಸಿದಾಗ, ಅವರು ದೂರುದಾರರ ವಿರುದ್ಧ ಕ್ರಿಮಿನಲ್ ಬಲಪ್ರಯೋಗ ಮಾಡಿದ್ದಾರೆ. ಅಲ್ಲದೇ, ಅಧಿಕೃತ ಕರ್ತವ್ಯಗಳಿಗೆ ಅಡ್ಡಿಪಡಿಸಿದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ.

ತನಿಖೆಯ ವೇಳೆ, ಪೊಲೀಸರು ಆರೋಪಿಯ ಬಳಿಯಿಂದ ಆಕ್ಷೇಪಾರ್ಹ ಪದಗಳನ್ನು ಹೊಂದಿರುವ ಕರಪತ್ರಗಳನ್ನು ವಶಪಡಿಸಿಕೊಂಡಿದ್ದಾರೆ. ಸುಪ್ರೀಂಕೋರ್ಟ್ ಭದ್ರತಾ ಸಿಬ್ಬಂದಿಯೊಬ್ಬರ ದೂರಿನ ಮೇರೆಗೆ ದೆಹಲಿಯ ತಿಲಕ್ ಮಾರ್ಗ ಪೊಲೀಸ್ ಠಾಣೆಯಲ್ಲಿ ಸೆಕ್ಷನ್ 132, 221, 224 ಮತ್ತು 3(5) ಅಡಿಯಲ್ಲಿ ಎಫ್‌ಐಆರ್ ದಾಖಲಾಗಿದೆ. ಇಬ್ಬರನ್ನೂ ಬಂಧಿಸಿ, ಹೆಚ್ಚಿನ ವಿಚಾರಣೆಗಾಗಿ ಎರಡು ದಿನಗಳ ಪೊಲೀಸ್ ಕಸ್ಟಡಿಗೆ ನೀಡಲಾಗಿದೆ. ಪ್ರಕರಣದ ತನಿಖೆ ಪ್ರಗತಿಯಲ್ಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಕೇಂದ್ರ ವಸತಿ ಇಲಾಖೆಯ ಕಾರ್ಯದರ್ಶಿ ಗೋಪಾಲ್ ಅವರು ನವದೆಹಲಿಯುಲ್ಲಿ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ ಅವರನ್ನು ಬುಧವಾರ ನವದೆಹಲಿಯ ಕರ್ನಾಟಕ ಭವನದಲ್ಲಿ ಭೇಟಿ ಮಾಡಿದ್ದರು.

# ಕಮೆಡಿಯನ್ ಸಮಯ್ ರೈನಾಗೆ ಸುಪ್ರೀಂ ದಂಡ



**ನವದೆಹಲಿ, ಜು.15:** ಸುಪ್ರೀಂ ಕೋರ್ಟ್ ಆದೇಶಗಳನ್ನು ಉಲ್ಲಂಘಿಸಿ, ನ್ಯಾಯಾಲಯದ ದಿಕ್ಕು ತಪ್ಪಿಸಲು ಯತ್ನಿಸಿದ ಸ್ಟ್ಯಾಂಡ್-ಅಪ್ ಕಮೆಡಿಯನ್ ಸಮಯ್ ರೈನಾ ಅವರ ವರ್ತನೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಸುಪ್ರೀಂ ಕೋರ್ಟ್, ಈ ನಡೆಗೆ ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದೆ.

ಸಮಾಜದ ಸದಸ್ಯರ ಭಾವನೆಗಳನ್ನು ಗೌರವಿಸುವುದು ಮತ್ತು ನಿಮ್ಮ ತಪ್ಪುಗಳನ್ನು ತಿದ್ದಿಕೊಳ್ಳುವುದು ಹೇಗೆಂದು ನಿಮಗೆ ತಿಳಿದಿಲ್ಲದಿದ್ದರೆ, ನೀವು ಪರಿಣಾಮಗಳನ್ನು ಎದುರಿಸಲೇಬೇಕು ಎಂದು ಸುಪ್ರೀಂ ಕೋರ್ಟ್ ಕಟುವಾಗಿ ಹೇಳಿದೆ.

ವಿಚಾರಣೆಯ ಆರಂಭದಲ್ಲಿ ರೈನಾಗೆ 10 ಲಕ್ಷ ದಂಡ ವಿಧಿಸಿದ ನ್ಯಾಯಾಲಯವು, ಅವರ ವಕೀಲರು ಕ್ಷಮಾದಾನ ಕೋರಿ ಮನವಿ ಮಾಡಿದ ನಂತರ ದಂಡದ ಮೊತ್ತವನ್ನು 3 ಲಕ್ಷಕ್ಕೆ ಇಳಿಸಿತು. ಆದರೆ, ಮುಂದಿನ ವಿಚಾರಣೆಯ ವೇಳೆಗೆ ನ್ಯಾಯಾಲಯಕ್ಕೆ ತೃಪ್ತಿಯಾಗುವ ರೀತಿಯಲ್ಲಿ ನಡೆದುಕೊಳ್ಳದಿದ್ದರೆ 30 ಲಕ್ಷ ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದೆ.

ಸ್ಪೈನಲ್ ಮಸ್ಕ್ಯುಲರ್ ಅಟ್ರೋಪಿ ಎಂಬ ಗಂಭೀರ ಕಾಯಿಲೆಯ ಚಿಕಿತ್ಸೆಯ ದುಬಾರಿ ವೆಚ್ಚದ ಕುರಿತು ಅಸೂಕ್ಷ್ಮ ಹೇಳಿಕೆಗಳನ್ನು ನೀಡಿದ್ದಲ್ಲದೆ, ಅಂತಹ ಅಂಗವೈಕಲ್ಯ ಹೊಂದಿರುವ ವ್ಯಕ್ತಿಯನ್ನು ಅಪಹಾಸ್ಯ ಮಾಡಿದ್ದಾರೆ ಎಂದು ಆರೋಪಿಸಿ ಕ್ಯೂರ್ ಎಸ್‌ಎಂಎ ಇಂಡಿಯಾ ಫೌಂಡೇಶನ್ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು.

ಅರ್ಜಿಯಲ್ಲಿ, ಇಂಡಿಯಾಸ್ ಗಾಟ್ ಲೇಟೆಂಟ್ ಶೋ ನಿರೂಪಕ ಸಮಯ್ ರೈನಾ ಮತ್ತು ಇತರ ಸಾಮಾಜಿಕ ಜಾಲತಾಣದ ಪ್ರಭಾವಿಗಳಾದ ವಿಪುನ್ ಗೋಯಲ್, ಬಲರಾಜ್ ಪರಂಜೀತ್ ಸಿಂಗ್ ಘಾಯ್, ಸೋನಾಲಿ ಠಕ್ಕರ್ ಹಾಗೂ ನಿಶಾಂತ್ ಜಗದೀಶ್ ತನ್ವಾರ್ ಅವರು ಮಾಡಿದ್ದ ಹಾಸ್ಯಗಳನ್ನು ಉಲ್ಲೇಖಿಸಲಾಗಿತ್ತು.

ಕ್ಯೂರ್ ಎಸ್‌ಎಂಎ ಫೌಂಡೇಶನ್ ಪರ ವಾದ ಮಂಡಿಸಿದ ವಕೀಲೆ ಅಪರಾಜಿತಾ ಸಿಂಗ11್ ಅವರು, ?ಅವರು ಎಂತಹ ಯೂತ್ ಐಕಾನ್ ಎಂದು ನನಗೇ ಆಶ್ಚರ್ಯವಾಗುತ್ತದೆ. ಅವರಲ್ಲಿ ಕ್ಷಮೆಯಾಚಿಸುವ ಯಾವುದೇ ಪ್ರಾಮಾಣಿಕತೆಯಿಲ್ಲ,? ಎಂದು ಅಪರಾಜಿತಾ ಸಿಂಗ್ ನ್ಯಾಯಾಲಯಕ್ಕೆ ತಿಳಿಸಿದರು. ಅಲ್ಲದೆ, ಇಂತಹ ಅಹಂಕಾರಿ ವ್ಯಕ್ತಿಯೊಂದಿಗೆ ತಮ್ಮ ಸಂಸ್ಥೆ ಗುರುತಿಸಿಕೊಳ್ಳಲು ಬಯಸುವುದಿಲ್ಲ ಎಂದೂ ಅವರು ಸ್ಪಷ್ಟಪಡಿಸಿದರು.

# ಅಸ್ಸಾಂನಲ್ಲಿ ಪ್ರವಾಹ: 37 ಸಾವಿರಕ್ಕೂ ಅಧಿಕ ಜನ ಸಂಕಷ್ಟಕ್ಕೆ



**ಗುವಾಹಟಿ, ಜು.15:** ಅಸ್ಸಾಂನಲ್ಲಿ ನಿರಂತರ ಮಳೆಯಿಂದ ಪ್ರವಾಹ ಪರಿಸ್ಥಿತಿ ಸೃಷ್ಟಿಯಾಗಿದ್ದು, ರಾಜ್ಯದ ಆರು ಜಿಲ್ಲೆಗಳಲ್ಲಿ 37,032ಕ್ಕೂ ಹೆಚ್ಚು ಜನರು ಪ್ರವಾಹದಿಂದ ತೀವ್ರವಾಗಿ ತೊಂದರೆ ಗೊಳಗಾಗಿದ್ದಾರೆ. ಬ್ರಹ್ಮಪುತ್ರ ಹಾಗೂ ಅದರ ಉಪನದಿಗಳ ನೀರಿನ ಮಟ್ಟ ಏರಿಕೆಯಿಂದ ಹಲವು ಗ್ರಾಮಗಳು ಜಲಾವೃತವಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ.

ಅಸ್ಸಾಂ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾಹಿತಿ ಪ್ರಕಾರ, ಸೋನಿತ್ಪುರ್, ಲಖಿಂಪುರ್, ಧೇಮಾಜಿ, ದಿಬ್ರುಗಢ್, ಜೋರ್ಹಾಟ್ ಹಾಗೂ ಶಿವಸಾಗರ್ ಜಿಲ್ಲೆಗಳು ಪ್ರವಾಹದಿಂದ ಹೆಚ್ಚು ಬಾಧಿತವಾಗಿವೆ. ಒಟ್ಟು 99ಕ್ಕೂ ಹೆಚ್ಚು ಗ್ರಾಮಗಳು ನೀರಿನಿಂದ ಸುತ್ತುವರಿದಿದ್ದು, ಸಾವಿರಾರು ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತಾಗಿದೆ. ಒಂದು ಲಕ್ಷಕ್ಕೂ ಅಧಿಕ ಹೆಕ್ಟೇರ್ ಕೃಷಿಭೂಮಿ ಮುಳುಗಡೆಯಾಗಿದೆ.

ಲಖಿಂಪುರವು ಅತ್ಯಂತ ಹೆಚ್ಚು ಹಾನಿಗೊಳಗಾದ ಜಿಲ್ಲೆಯಾಗಿದ್ದು, 35,696 ಜನಸಂಖ್ಯೆ ಸಮಸ್ಯೆಗೀಡಾಗಿದೆ. ನಂತರ ಸೋನಿತ್‌ಪುರ, ಧೇಮಾಜಿಯಲ್ಲೂ ಜನರು ಸಂಕಷ್ಟಕ್ಕೆ ಈಡಾಗಿದ್ದಾರೆ. ಪ್ರವಾಹ ಪೀಡಿತ ಜಿಲ್ಲೆಗಳಲ್ಲಿ 20 ಪರಿಹಾರ ವಿತರಣಾ ಕೇಂದ್ರಗಳನ್ನು ತೆರೆಯಲಾಗಿದೆ. ಆದರೆ, ಯಾವುದೇ ಪರಿಹಾರ ಶಿಬಿರಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿಲ್ಲ ಎಂದು ವರದಿ ಹೇಳಿಕೊಂಡಿದೆ. ಪರಿಹಾರ ವಿತರಣಾ ಕೇಂದ್ರಗಳ ಮೂಲಕ ಸುಮಾರು 6,984 ಜನರು ಸಹಾಯ ಪಡೆಯುತ್ತಿದ್ದಾರೆ. ಸೋನಿತ್‌ಪುರ ಜಿಲ್ಲೆಯಿಂದ ಪ್ರವಾಹ ಸಂಬಂಧಿತ ಒಂದು ಸಾವು ವರದಿಯಾಗಿದ್ದು, ಯಾವುದೇ ವ್ಯಕ್ತಿ ಕಾಣೆಯಾದ ಬಗ್ಗೆ ವರದಿಯಾಗಿಲ್ಲ. ಸುಮಾರು 16,139 ಪ್ರಾಣಿಗಳ ಮೇಲೆ ಪ್ರವಾಹವು ಪರಿಣಾಮ ಬೀರಿದೆ. ಎರಡು ಪ್ರಾಣಿಗಳು ಕೊಚ್ಚಿ ಹೋಗಿವೆ. ವಸತಿ ಮೂಲಸೌಕರ್ಯಕ್ಕೆ ಧಕ್ಕೆಯಾಗಿದೆ.

ರಾಜ್ಯ ಸರ್ಕಾರ ಹಾಗೂ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ, ರಾಜ್ಯ ವಿಪತ್ತು ಪ್ರತಿಕ್ರಿಯಾ ಪಡೆ ಮತ್ತು ಸ್ಥಳೀಯ ಆಡಳಿತ ತಂಡಗಳು ರಕ್ಷಣಾ ಹಾಗೂ ಪರಿಹಾರ ಕಾರ್ಯಾಚರಣೆಯನ್ನು ತೀವ್ರಗೊಳಿಸಿವೆ. ಪ್ರವಾಹ ಪೀಡಿತರಿಗೆ ಪರಿಹಾರ ಶಿಬಿರಗಳಲ್ಲಿ ಆಶ್ರಯ, ಆಹಾರ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

# 131ನೇ ಸಂವಿಧಾನ ತಿದ್ದುಪಡಿಗಾಗಿ ಡಿಎಂಕೆ, ಎನ್‌ಸಿಪಿ ಓಲೈಸುತ್ತಿರುವ ಬಿಜೆಪಿ: ಚಿದಂಬರಂ

**ನವದೆಹಲಿ, ಜು.15:** ಮುಂಬರುವ ಸಂಸತ್ ಅಧಿವೇಶನದಲ್ಲಿ ಪ್ರಸ್ತಾವಿತ 131ನೇ ಸಂವಿಧಾನ ತಿದ್ದುಪಡಿ ಮಸೂದೆಗೆ ಬೆಂಬಲ ಪಡೆಯಲು ಬಿಜೆಪಿಯು ಡಿಎಂಕೆ ಮತ್ತು ಎನ್‌ಸಿಪಿ (ಶರದ್ ಪವಾರ್ ಬಣ)ಯನ್ನು ಓಲೈಸುತ್ತಿದೆ ಎಂದು ಆರೋಪಿಸಿರುವ ಕಾಂಗ್ರೆಸ್ ನಾಯಕ ಪಿ.ಚಿದಂಬರಂ, ಎರಡೂ ಪಕ್ಷಗಳು ಈ ಶಾಸನವನ್ನು ಬೆಂಬಲಿಸದಂತೆ ಒತ್ತಾಯಿಸಿದ್ದಾರೆ.



ಈ ಕುರಿತು ಮಾಹಿತಿ ಹಂಚಿಕೊಂಡಿರುವ ಅವರು, 2026ರ ಏಪ್ರಿಲ್‌ನಲ್ಲಿ ಸಂಸತ್ತಿನ ಕೊನೆಯ ಅಧಿವೇಶನದಲ್ಲಿ ವಿಫಲವಾದ 131 ನೇ ಸಂವಿಧಾನ ತಿದ್ದುಪಡಿ ಮಸೂದೆಯನ್ನು ಮರಳಿ ತರಲು ಬಿಜೆಪಿ ಯೋಜಿಸುತ್ತಿದೆ. ವಿಫಲವಾದ ಮಸೂದೆಯು ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಶೇ.33ರಷ್ಟು ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡುವ ಉದ್ದೇಶವನ್ನು ಹೊಂದಿದ್ದರೂ, ಅದರ ನಿಜವಾದ ಉದ್ದೇಶವು ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆ ನಡೆಸುವುದಾಗಿತ್ತು.

ಈಗಾಗಲೇ ಸಂವಿಧಾನ (106ನೇ ತಿದ್ದುಪಡಿ) ಕಾಯ್ದೆಯು ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಕಲ್ಪಿಸಿದೆ. ಆದ್ದರಿಂದ ಮಹಿಳೆಯರಿಗೆ ಮೀಸಲಾತಿ ಒದಗಿಸಲು ಹೊಸ ಮಸೂದೆಯ ಅಗತ್ಯವಿಲ್ಲ ಎಂದಿರುವ ಅವರು, ಬಿಜೆಪಿ ಈ ಶಾಸನಕ್ಕೆ ವ್ಯಾಪಕ ರಾಜಕೀಯ ಬೆಂಬಲವನ್ನು ಬಯಸುತ್ತಿದೆ ಎಂದು ಹೇಳಿದ್ದಾರೆ.

ಟಿಎಂಸಿಯನ್ನು ವಿಭಜಿಸಿದ ನಂತರ, ವಿಫಲವಾದ ಮಸೂದೆಯ ಹೊಸ ಆವೃತ್ತಿಯನ್ನು ಬೆಂಬಲಿಸಲು ನಿರ್ಣಾಯಕ ಮತಗಳನ್ನು ಸಂಗ್ರಹಿಸಲು ಬಿಜೆಪಿ ಈಗ ಎನ್‌ಸಿಪಿ (ಎಸ್‌ಪಿ) ಮತ್ತು ಡಿಎಂಕೆಯನ್ನು ಓಲೈಸುತ್ತಿದೆ. ಆದರೆ ಈ ಮಸೂದೆಯ ನಿಜವಾದ ಉದ್ದೇಶದ ಬಗ್ಗೆ ಎನ್‌ಸಿಪಿ (ಎಸ್‌ಪಿ) ಮತ್ತು ಡಿಎಂಕೆಗೆ ಸ್ಪಷ್ಟ ಮಾಹಿತಿಯಿದ್ದು, ಭವಿಷ್ಯದಲ್ಲಿಯೂ ಅವು ದೃಢವಾಗಿ ನಿಲ್ಲುವ ನಿರೀಕ್ಷೆಯಿದೆ ಎಂದಿದ್ದಾರೆ.

ಅಸ್ತಿತ್ವದಲ್ಲಿರುವ ಸೂತ್ರದ ಅಡಿಯಲ್ಲಿ ಗಡಿ ನಿರ್ಣಯವು, ರಾಷ್ಟ್ರೀಯ ಜನಸಂಖ್ಯಾ ನೀತಿಯನ್ನು ಪರಿಣಾಮಕಾರಿಯಾಗಿ ಜಾರಿಗೆ ತಂದ ಮತ್ತು ಜನಸಂಖ್ಯಾ ಬೆಳವಣಿಗೆಯನ್ನು ನಿಯಂತ್ರಿಸಿದ ರಾಜ್ಯಗಳಿಗೆ ಅನ್ಯಾಯವಾಗಿ ಅನಾನುಕೂಲವನ್ನುಂಟು ಮಾಡುತ್ತದೆ. ಒಂದು ವೇಳೆ ಈ ಪ್ರಾದೇಶಿಕ ಪಕ್ಷಗಳು ವಿಫಲವಾದ ಮಸೂದೆಯ ಹೊಸ ಆವೃತ್ತಿಗೆ ಬೆಂಬಲ ನೀಡಿದರೆ, ಅವರು ಸ್ವಂತ ಆತ್ಮಸಾಕ್ಷಿಗೆ ಮಾಡುವ ದ್ರೋಹವಾಗುತ್ತದೆ ಎಂದು ತಿಳಿಸಿದ್ದಾರೆ.

ಜುಲೈ 20ರಿಂದ ಪ್ರಾರಂಭವಾಗುವ ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ಸರ್ಕಾರವು ಸಂವಿಧಾನ (131 ನೇ ತಿದ್ದುಪಡಿ) ಮಸೂದೆಯನ್ನು ಮಂಡಿಸುವ ನಿರೀಕ್ಷೆಯಿದೆ. ಪ್ರಸ್ತಾವಿತ ಶಾಸನವು ಲೋಕಸಭೆಯ ಬಲವನ್ನು 850 ಸ್ಥಾನಗಳಿಗೆ ಹೆಚ್ಚಿಸಲು ಮತ್ತು ಕ್ಷೇತ್ರ ಪುನರ್ವಿಂಗಡಣೆ ಪ್ರಕ್ರಿಯೆಯನ್ನು ಪ್ರಾರಂಭಿಸಲು ಪ್ರಯತ್ನಿಸುತ್ತದೆ ಎಂದಿದ್ದಾರೆ.

# ಮುಸ್ಲಿಮರ ಧರ್ಮಾಚರಣೆ ಮೇಲೆ ಗುಜರಾತ್ ಪೊಲೀಸರ ಹದ್ದಿನ ಕಣ್ಣು

**ಅಹಮದಾಬಾದ್, ಜು.15:** ಗಡ್ಡ ಬಿಡುವುದು, ರಂಜಾನ್ ತಿಂಗಳಲ್ಲಿ ಇತಿಕಾಫ್ (ಮಸೀದಿಯಲ್ಲಿ ಪ್ರಾರ್ಥನೆಗಾಗಿ ಕಾಲ ಕಳೆಯುವುದು) ಆಚರಿಸುವುದು ಹಾಗೂ ಅರೇಬಿಕ್ ಭಾಷೆಯಲ್ಲಿ ಶುಭಾಶಯ ಕೋರುವುದನ್ನು ತೀವ್ರವಾದದ ಲಕ್ಷಣಗಳು ಎಂದು ಗುಜರಾತ್ ಪೊಲೀಸರ ರಹಸ್ಯ ದಾಖಲೆಯೊಂದು ಉಲ್ಲೇಖಿಸಿದೆ ಎನ್ನಲಾಗಿದ್ದು, ಇದು ಮಾನವ ಹಕ್ಕುಗಳ ಕಾರ್ಯಕರ್ತರು ಹಾಗೂ ಮುಸ್ಲಿಂ ಸಮುದಾಯದ ತೀವ್ರ ಕಳವಳಕ್ಕೆ ಕಾರಣವಾಗಿದೆ. ಈ ಬಗ್ಗೆ ಪತ್ರಿಕೆಯೊಂದು ವರದಿ ಮಾಡಿದೆ.

ಗುಜರಾತ್ ರಾಜ್ಯ ಗುಪ್ತಚರ ಇಲಾಖೆ ಹೊರಡಿಸಿದೆ ಎನ್ನಲಾದ ಮತ್ತು ರಹಸ್ಯ ಎಂದು ನಮೂದಿಸಲಾಗಿರುವ ಈ ದಾಖಲೆಯು ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದೆ. ಆದರೆ ಈ ದಾಖಲೆಯ ನೈಜತೆಯನ್ನು ಸರ್ಕಾರವಾಗಲಿ ಅಥವಾ ಪೊಲೀಸ್ ಇಲಾಖೆಯಾಗಲಿ ಅಧಿಕೃತವಾಗಿ ಖಚಿತಪಡಿಸಿಲ್ಲ ಅಥವಾ ನಿರಾಕರಿಸಿಲ್ಲ.

ಗುಜರಾತ್ ಗೃಹ ಇಲಾಖೆಯು ಪ್ರತಿ ಜಿಲ್ಲೆ ಮತ್ತು ಪೊಲೀಸ್ ಕಮಿಷನರೇಟ್ ವ್ಯಾಪ್ತಿಯಲ್ಲಿ ತೀವ್ರವಾದ ನಿಗ್ರಹ ಘಟಕಗಳನ್ನು ಸ್ಥಾಪಿಸಲು ಅನುಮೋದನೆ ನೀಡಿದೆ. ಮೇ 18ರ ಈ ಸುತ್ತೋಲೆಯ ಪ್ರಕಾರ, ಪೊಲೀಸ್ ಘಟಕಗಳು ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಮತ್ತು ಪ್ರತಿ ತಿಂಗಳು ವರದಿ ಸಲ್ಲಿಸಬೇಕು ಎಂದು ಸೂಚಿಸಲಾಗಿದೆ.

ತೀವ್ರವಾದವನ್ನು ವ್ಯಕ್ತಿಗಳು ಉಗ್ರ ವಿಚಾರಗಳನ್ನು ಅಳವಡಿಸಿಕೊಳ್ಳುವ ಮತ್ತು ಇತರರ ಮೇಲೆ ಪ್ರಭಾವ ಬೀರಲು ಪ್ರಯತ್ನಿಸುವ ಪ್ರಕ್ರಿಯೆ ಎಂದು ಈ ಎಸ್‌ಒಪಿ ವ್ಯಾಖ್ಯಾನಿಸಿದೆ. ಇದಕ್ಕಾಗಿ ಜನರ ವರ್ತನೆ, ಡಿಜಿಟಲ್ ಚಟುವಟಿಕೆಗಳು ಹಾಗೂ ಸಮುದಾಯದೊಂದಿಗಿನ ಒಡನಾಟದ ಮೇಲೆ ನಿಗಾ ಇಡುವಂತೆ ಪೊಲೀಸರಿಗೆ ಸೂಚಿಸಲಾಗಿದೆ.

ಪದೇಪದೇ ಮಸೀದಿಗೆ ಭೇಟಿ ನೀಡುವುದು, ಧಾರ್ಮಿಕ ಗುಂಪುಗಳೊಂದಿಗೆ ನಿಕಟ ಸಂಪರ್ಕ ಹೊಂದುವುದು, ಗಡ್ಡ ಬಿಡುವುದು, ಬುರ್ಖಾ ಧರಿಸುವುದು, ಅರೇಬಿಕ್ ಶುಭಾಶಯಗಳನ್ನು ಬಳಸುವುದು, ಧಾರ್ಮಿಕ ಚಟುವಟಿಕೆಗಳಿಗಾಗಿ ಶಿಕ್ಷಣ ಅಥವಾ ಉದ್ಯೋಗವನ್ನು ತೊರೆಯುವುದು, ಜಾಗತಿಕವಾಗಿ ಮುಸ್ಲಿಮರ ಮೇಲಾಗುವ ಘಟನೆಗಳ ಬಗ್ಗೆ ಕಳವಳ ವ್ಯಕ್ತಪಡಿಸುವುದು ಮತ್ತು ಅಫ್ಘಾನಿಸ್ತಾನ ಅಥವಾ ಮಧ್ಯಪ್ರಾಚ್ಯದ ಸಂಘರ್ಷಗಳ ಬಗ್ಗೆ ಚರ್ಚಿಸುವುದನ್ನು ಅನುಮಾನಾಸ್ಪದ ಲಕ್ಷಣಗಳು ಎಂದು ಪಟ್ಟಿಯಲ್ಲಿ ಸೇರಿಸಲಾಗಿದೆ. ಇದರ ಜೊತೆಗೆ ಸಿಗ್ನಲ್ ಅಥವಾ ವಿಪಿಎನ್ ನಂತಹ ಆಪ್‌ಗಳ ಬಳಕೆ, ಅಫ್ಘಾನಿಸ್ತಾನದ ವ್ಯಕ್ತಿಗಳೊಂದಿಗೆ ಆನ್‌ಲೈನ್ ಸಂಪರ್ಕ, ಐಸಿಸ್ ಉಗ್ರ ಸಂಘಟನೆಯ ಪ್ರಚಾರ ಸಾಮಗ್ರಿಗಳಾದ ದಾಬಿಕ್ ಮತ್ತು ರುಮಿಯಾ ಇಟ್ಟುಕೊಳ್ಳುವುದು ಅಥವಾ ಹಂಚಿಕೊಳ್ಳುವುದನ್ನೂ ಉಲ್ಲೇಖಿಸಲಾಗಿದೆ.

ಈ ಎಸ್‌ಒಪಿಯನ್ನು ರಾಜ್ಯ ಪ್ರಾಯೋಜಿತ ಕೋಮು ಆಧಾರಿತ ಪ್ರೊಫೈಲಿಂಗ್ ಎಂದು ಮಾನವ ಹಕ್ಕುಗಳ ಕಾರ್ಯಕರ್ತೆ ಶಬನಮ್ ಹಶ್ಮಿ ತೀವ್ರವಾಗಿ ಖಂಡಿಸಿದ್ದಾರೆ. ರಾಷ್ಟ್ರೀಯ ಭದ್ರತೆಯೆಂಬ ಸುಳ್ಳು ನೆಪದಲ್ಲಿ ಗುಜರಾತ್ ಸರ್ಕಾರವು ಸಾಮಾನ್ಯ ಧಾರ್ಮಿಕ ಮತ್ತು ಸಾಂಸ್ಕೃತಿಕ ಗುರುತುಗಳನ್ನು ಅಪರಾಧೀಕರಿಸಲು ಸರ್ಕಾರಿ ಯಂತ್ರವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ. ಇದು ಸಂವಿಧಾನದ ಮೇಲಿನ ನೇರ ದಾಳಿ ಎಂದು ಕಿಡಿಕಾರಿದ್ದಾರೆ. ಯುಎಪಿಎ ಮತ್ತು ಭಾರತೀಯ ನ್ಯಾಯ ಸಂಹಿತೆಯ ಕಠಿಣ ನಿಬಂಧನೆಗಳಡಿ ಪ್ರಕರಣಗಳನ್ನು ದಾಖಲಿಸಲು ಪೊಲೀಸರು, ಕಾರಾಗೃಹ ಅಧಿಕಾರಿಗಳು ಮತ್ತು ವಿಶೇಷ ಕಾರ್ಯಾಚರಣೆ ಪಡೆ ಜಂಟಿಯಾಗಿ ಕೆಲಸ ಮಾಡಲಿವೆ ಎಂಬ ಅಂಶವನ್ನು ಅವರು ವಿರೋಧಿಸಿದ್ದಾರೆ.

ಕಛ್ ಪ್ರದೇಶದಲ್ಲಿ ಮಸೀದಿ ಮತ್ತು ಮದರಸಾಗಳ ತೆರವು ಕಾರ್ಯಾಚರಣೆ ವೇಳೆ ಪೊಲೀಸರು ಲಿಖಿತ ಆದೇಶವಿಲ್ಲದೆ ಭೇಟಿ ನೀಡುತ್ತಿದ್ದ ವರದಿಗಳ ಹಿನ್ನೆಲೆಯಲ್ಲಿ ಈ ದಾಖಲೆಗಳನ್ನು ಸಾರ್ವಜನಿಕ ಡೊಮೈನ್‌ಗೆ ತಂದಿರುವುದಾಗಿ ಅಲ್ಪಸಂಖ್ಯಾತ ಸಮನ್ವಯ ಸಮಿತಿಯ ಸಂಚಾಲಕ ಮುಜಾಹಿದ್ ನಫೀಸ್ ತಿಳಿಸಿದ್ದಾರೆ.

# ಅಕ್ಟೋಬರ್‌ವರೆಗೆ ನನ್ನ ಇ-ಖಾತೆ, ನನ್ನ ಹಕ್ಕು ಅಭಿಯಾನ ವಿಸ್ತರಣೆಗೆ ಚಿಂತನೆ: ಸಿಎಂ ಡಿ.ಕೆ.ಶಿವಕುಮಾರ್ ಮಾಹಿತಿ

**ಬೆಂಗಳೂರು, ಜು.15:** ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಮಹತ್ವಾಕಾಂಕ್ಷೆಯ ನನ್ನ ಇ-ಖಾತೆ, ನನ್ನ ಹಕ್ಕು ಅಭಿಯಾನಕ್ಕೆ ಸಾರ್ವಜನಿಕರ ಸ್ಪಂದನೆ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಅಭಿಯಾನದ ಅವಧಿಯನ್ನು ಅಕ್ಟೋಬರ್‌ವರೆಗೆ ವಿಸ್ತರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆ ಎನ್ನಲಾಗಿದೆ.

ನಗರದಲ್ಲಿ ಜೂನ್ 29ರಿಂದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಆರಂಭವಾಗಿದ್ದು, ಕಂದಾಯ ಮತ್ತು ನಗರಪಾಲಿಕೆ ಸಿಬ್ಬಂದಿಯನ್ನು ಆ ಕೆಲಸಕ್ಕೆ ನಿಯೋಜಿಸಿರುವುದರಿಂದ ಇ-ಖಾತೆ ಅಭಿಯಾನಕ್ಕೆ ಸಿಬ್ಬಂದಿ ಕೊರತೆ ಉಂಟಾಗಿದೆ. ಇದೇ ಕಾರಣದಿಂದ ಪ್ರತಿ ಶನಿವಾರ ಮತ್ತು ಭಾನುವಾರ ನಡೆಯುತ್ತಿದ್ದ ವಿಶೇಷ ಶಿಬಿರಗಳು ಕಳೆದ ಮೂರು ವಾರಗಳಿಂದ ನಡೆಯುತ್ತಿಲ್ಲ ಎಂಬ ಆರೋಪಗಳು ಕೇಳಿಬಂದಿವೆ.

ಈ ಅಭಿಯಾನದ ಮೂಲಕ ಸಾರ್ವಜನಿಕರು ಯಾವುದೇ ಲಂಚ ನೀಡದೆ ತಮ್ಮ ಆಸ್ತಿಗಳನ್ನು ಬಿ ಖಾತೆಯಿಂದ ಎ ಖಾತೆಗೆ ಪರಿವರ್ತಿಸಿಕೊಳ್ಳುವ ಹಾಗೂ ಮನೆ ಬಾಗಿಲಿಗೇ ಇ-ಖಾತೆ ಪಡೆಯುವ ಅವಕಾಶ ಕಲ್ಪಿಸಲಾಗಿತ್ತು. ಸುಮಾರು 7 ಲಕ್ಷ ಬಿ ಖಾತೆ ಆಸ್ತಿ ಮಾಲೀಕರಿಗೆ ಈ ಯೋಜನೆ ಪ್ರಯೋಜನವಾಗಲಿದೆ ಎಂದು ಸರ್ಕಾರ ಘೋಷಿಸಿತ್ತು.



ಡಿ.ಕೆ. ಶಿವಕುಮಾರ್ ಅವರು ಯೋಜನೆ ಆರಂಭಿಸಿದ ವೇಳೆ, ಕೆಳಮಟ್ಟದ ಅಧಿಕಾರಿಗಳ ಬಳಿ ಲಂಚ ನೀಡಿ ಖಾತೆ ಮಾಡಿಸಿಕೊಳ್ಳುವ ಪದ್ಧತಿಗೆ ಅಂತ್ಯ ಹಾಡುವ ಉದ್ದೇಶದಿಂದ ಈ ಅಭಿಯಾನ ಜಾರಿಗೆ ತರಲಾಗಿತ್ತು. ಪ್ರತಿ ಶನಿವಾರ ವಿಶೇಷ ಶಿಬಿರಗಳ ಮೂಲಕ ಅರ್ಜಿಗಳನ್ನು ಸ್ವೀಕರಿಸಿ ತ್ವರಿತವಾಗಿ ಇ-ಖಾತೆ ನೀಡಲಾಗುವುದು ಎಂದು ತಿಳಿಸಿದ್ದರು.

ಅಲ್ಲದೆ, ಖಾತೆ ದಾಖಲೆಯಲ್ಲಿ ಮಾಲೀಕರ ಹಾಗೂ ಮನೆಯ ಫೋಟೋ ಸೇರಿಸಲಾಗುವುದು, ಸಬ್‌ರಿಜಿಸ್ಟ್ರಾರ್ ದಾಖಲೆಗಳೊಂದಿಗೆ ಲಿಂಕ್ ಮಾಡಲಾಗುವುದು, ನಕಲಿ ದಾಖಲೆಗಳ ಮೂಲಕ ಖಾತೆ ಪಡೆದರೆ ರದ್ದುಪಡಿಸುವ ವ್ಯವಸ್ಥೆಯೂ ಇರಲಿದೆ ಎಂದು ಭರವಸೆ ನೀಡಿದ್ದರು.ಇದೇ ವೇಳೆ, ಬಿ ಖಾತೆಯಿಂದ ಎ ಖಾತೆಗೆ ಪರಿವರ್ತನೆಗೆ ವಿಧಿಸಲಾಗುತ್ತಿದ್ದ ಶುಲ್ಕದಲ್ಲಿ 100 ದಿನಗಳ ವಿಶೇಷ ರಿಯಾಯಿತಿ ನೀಡಿ, ಆಸ್ತಿ ಮೌಲ್ಯದ ಶೇ.5ರ ಬದಲು ಶೇ.2ರಷ್ಟೇ ಶುಲ್ಕ ಪಾವತಿಸುವ ಅವಕಾಶ ಕಲ್ಪಿಸಲಾಗಿತ್ತು.

ಆದರೆ ಅಭಿಯಾನ ಸ್ಥಗಿತಗೊಂಡಿರುವುದರಿಂದ ಅರ್ಜಿಗಳ ಸ್ವೀಕೃತಿ ಕುಂಠಿತವಾಗಿದ್ದು, ಸರ್ಕಾರದ ಆದಾಯಕ್ಕೂ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಜಿಬಿಎ ಕಂದಾಯ ವಿಭಾಗದ ಅಧಿಕಾರಿಗಳ ಪ್ರಕಾರ, ಎಸ್‌ಐಆರ್ ಕಾರ್ಯ ಪೂರ್ಣಗೊಳ್ಳುವವರೆಗೆ ಅಭಿಯಾನವನ್ನು ವಿಸ್ತರಿಸುವ ಬಗ್ಗೆ ಚರ್ಚೆ ನಡೆಯುತ್ತಿದ್ದು, ಅಕ್ಟೋಬರ್‌ವರೆಗೆ ಅವಧಿ ವಿಸ್ತರಣೆಯಾಗುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಪ್ರಸ್ತುತ ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಐದು ನಗರಪಾಲಿಕೆಗಳಲ್ಲಿ ಸುಮಾರು 7 ಲಕ್ಷ ಬಿ ಖಾತೆ ಆಸ್ತಿಗಳಿದ್ದು, ಇದುವರೆಗೆ ಕೇವಲ 13 ಸಾವಿರ ಅರ್ಜಿಗಳು ಮಾತ್ರ ಸಲ್ಲಿಕೆಯಾಗಿವೆ ಎಂದು ಮೂಲಗಳು ತಿಳಿಸಿವೆ. ಹೀಗಾಗಿ ಅಭಿಯಾನಕ್ಕೆ ಮತ್ತಷ್ಟು ಕಾಲಾವಕಾಶ ನೀಡುವ ಅಗತ್ಯವಿದೆ ಎಂಬ ಅಭಿಪ್ರಾಯ ಅಧಿಕಾರಿಗಳ ವಲಯದಲ್ಲಿ ವ್ಯಕ್ತವಾಗಿದೆ.



ಮೈಸೂರು ಜಿಲ್ಲಾಡಳಿತವು ವಾರ್ಷಿಕ ಆಷಾಢ ಶುಕ್ರವಾರ ಆಚರಣೆ ಮತ್ತು ಚಾಮುಂಡಿ ಬೆಟ್ಟದಲ್ಲಿ ಚಾಮುಂಡೇಶ್ವರಿ ವರ್ಧಂತಿ ಉತ್ಸವಕ್ಕೆ ಸಿದ್ಧತೆ ಪೂರ್ಣಗೊಳಿಸಿದ್ದು, ನಿರೀಕ್ಷಿತ ಭಕ್ತರ ಹೆಚ್ಚಳವನ್ನು ನಿರ್ವಹಿಸಲು ವಿಶೇಷ ವ್ಯವಸ್ಥೆ ಮಾಡಲಾಗಿದೆ.

### ಕೂಲಿ ಕಾರ್ಮಿಕರ ಹೆಸರಲ್ಲಿ ನಕಲಿ ಬ್ಯಾಂಕ್ ಖಾತೆ ತೆರೆದು ಕೋಟ್ಯಂತರ ವಂಚನೆ

# ಸಿಬಿಐ ತನಿಖೆಗೆ ವಹಿಸುವಂತೆ ಒತ್ತಾಯಿಸಿ ರಾಜ್ಯಪಾಲರಿಗೆ ಎಂಎಲ್‌ಸಿ ಸಿ.ಟಿ. ರವಿ ಪತ್ರ

**ಬೆಂಗಳೂರು, ಜು.15:** ಚಿಕ್ಕಮಗಳೂರು ನಗರದ ಬಡ ಕೂಲಿ ಕಾರ್ಮಿಕರ ಹೆಸರಿನಲ್ಲಿ ನಕಲಿ ಬ್ಯಾಂಕ್ ಖಾತೆಗಳನ್ನು ತೆರೆದು ಕೋಟ್ಯಂತರ ರೂಪಾಯಿ ಅಕ್ರಮ ಹಣ ವರ್ಗಾವಣೆ ಮಾಡಿರುವ ಬೃಹತ್ ವಂಚನೆ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ. ರವಿ ಅವರು ರಾಜ್ಯಪಾಲರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.



ಚಿಕ್ಕಮಗಳೂರು ನಗರದ ಶಂಕರಪುರ ಬಡಾವಣೆಯ ನಿವಾಸಿಗಳಾದ ಬಡ ಕೂಲಿ ಕಾರ್ಮಿಕರಿಗೆ ಸರ್ಕಾರದ ವಿವಿಧ ಉಚಿತ ಸೌಲಭ್ಯಗಳನ್ನು ಕೊಡಿಸುವುದಾಗಿ ನಂಬಿಸಿ ಕೆಲವು ವಂಚಕರು ಅವರಿಂದ ಪ್ರಮುಖ ದಾಖಲೆಗಳನ್ನು ಪಡೆದುಕೊಂಡಿದ್ದರು. ಆ ದಾಖಲೆಗಳನ್ನು ದುರ್ಬಳಕೆ ಮಾಡಿಕೊಂಡು ವಿವಿಧ ಬ್ಯಾಂಕ್‌ಗಳಲ್ಲಿ ಕಾರ್ಮಿಕರ ಹೆಸರಿನಲ್ಲೇ ನಕಲಿ ಖಾತೆಗಳನ್ನು ತೆರೆಯಲಾಗಿದೆ ಎಂದು ಸಿ.ಟಿ.ರವಿ ಪತ್ರದಲ್ಲಿ ವಿವರಿಸಿದ್ದಾರೆ. ಫಲಾನುಭವಿಗಳ ಮೊಬೈಲ್ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡದೆ, ವಂಚಕರೇ ತಮ್ಮ ಬಳಿಯಿದ್ದ ಬೇರೆ ಸಿಮ್ ಕಾರ್ಡ್‌ಗಳ ನಂಬರ್‌ಗಳನ್ನು ಲಿಂಕ್ ಮಾಡಿದ್ದಾರೆ. ಅಲ್ಲದೆ, ಖಾತೆಗೆ ಸಂಬಂಧಿಸಿದ ಪಾಸ್ ಪುಸ್ತಕ, ಚೆಕ್ ಬುಕ್ ಹಾಗೂ ಎಟಿಎಂ ಕಾರ್ಡ್‌ಗಳನ್ನು ತಾವೇ ಇಟ್ಟುಕೊಂಡು, ಆ ಖಾತೆಗಳ ಮೂಲಕ ಕೋಟ್ಯಂತರ ರೂಪಾಯಿ ಅಕ್ರಮ ವಹಿವಾಟು ನಡೆಸಿ ಹಣ ಬಿಡಿಸಿಕೊಂಡಿದ್ದಾರೆ ಎಂದು ಶಾಸಕ ಸಿ.ಟಿ. ರವಿ ಆರೋಪಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಈಗಾಗಲೇ ದೂರು ದಾಖಲಾಗಿದೆ. ಆದಾಗ್ಯೂ, ಇದು ಅತ್ಯಂತ ವ್ಯವಸ್ಥಿತವಾಗಿ ನಡೆದಿರುವ ಸೈಬರ್ ವಂಚನೆಯಾಗಿದ್ದು, ಇದರ ಹಿಂದೆ ಅಂತರರಾಜ್ಯ ಮಟ್ಟದ ದೊಡ್ಡ ಜಾಲ ಸಕ್ರಿಯವಾಗಿರುವ ಶಂಕೆ ವ್ಯಕ್ತವಾಗಿದೆ.

ಸ್ಥಳೀಯ ಮಟ್ಟದ ತನಿಖೆಯಿಂದ ಈ ಬೃಹತ್ ಹಗರಣದ ಸಂಪೂರ್ಣ ಸತ್ಯಾಸತ್ಯತೆ ಹೊರಬರುವುದು ಕಷ್ಟಸಾಧ್ಯ. ಬಡ ಕಾರ್ಮಿಕರಿಗೆ ನ್ಯಾಯ ಸಿಗಬೇಕಾದರೆ ಹಾಗೂ ಈ ಕಪ್ಪು ಹಣದ ದಂಧೆಯ ಮೂಲ ಜಾಲವನ್ನು ಪತ್ತೆಹಚ್ಚಲು ಪ್ರಕರಣವನ್ನು ತಕ್ಷಣವೇ ಸಿಬಿಐ ತನಿಖೆಗೆ ಒಪ್ಪಿಸುವಂತೆ ರಾಜ್ಯಪಾಲರಿಗೆ ಬರೆದ ಪತ್ರದಲ್ಲಿ ಅವರು ಬಲವಾಗಿ ಒತ್ತಾಯಿಸಿದ್ದಾರೆ.

# ಕಾಂಗ್ರೆಸ್ ಸರ್ಕಾರದ ಏಕಪಕ್ಷೀಯ ಆದ್ಯತೆಗಳ ವಿರುದ್ಧ ನಾಳೆ ಬಿಜೆಪಿ ಪ್ರತಿಭಟನೆ: ಬಿ.ವೈ.ವಿಜಯೇಂದ್ರ ಹೇಳಿಕೆ

**ಬೆಂಗಳೂರು, ಜು.15:** ಸಿಎಂ ಡಿ.ಕೆ. ಶಿವಕುಮಾರ್ ಅವರು 'ವಂಚನೆ ಮತ್ತು ದ್ವಂದ್ವ ರಾಜಕೀಯ' ಮಾಡುತ್ತಿದ್ದಾರೆ ಎಂದು ಆರೋಪಿಸಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಕಾಂಗ್ರೆಸ್ ಸರ್ಕಾರದ ಏಕಪಕ್ಷೀಯ ಆದ್ಯತೆಗಳ ವಿರುದ್ಧ ಪಕ್ಷದ ವತಿಯಿಂದ ಜು.17ರಂದು ನಗರದ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಬಿಡದಿ ಟೌನ್‌ಶಿಪ್ ವಿಚಾರವಾಗಿ ಒಂದು ಕಡೆ ಮೂವರು ಸದಸ್ಯರ ಸಮಿತಿಯನ್ನು ಘೋಷಿಸುವ ಮೂಲಕ ಮತ್ತು ಮತ್ತೊಂದೆಡೆ ಭೂಸ್ವಾಧೀನಕ್ಕಾಗಿ ಅಂತಿಮ ಅಧಿಸೂಚನೆಯನ್ನು ಹೊರಡಿಸುವ ಮೂಲಕ ಮುಖ್ಯಮಂತ್ರಿಗಳು ರೈತರನ್ನು ದಾರಿತಪ್ಪಿಸುವ ಪ್ರಯತ್ನವನ್ನು ಮಾಡಿದ್ದಾರೆ ಎಂದು ಟೀಕಿಸಿದ್ದಾರೆ.

ಇದು ವಿಶ್ವಾಸಘಾತುಕ ರಾಜಕೀಯವಲ್ಲದೆ ಬೇರೇನೂ ಅಲ್ಲ; ರೈತರ ಮೇಲೆ ನಡೆಸಲಾಗುತ್ತಿರುವ ಗಂಭೀರ ಅನ್ಯಾಯ ಮತ್ತು ದ್ವಂದ್ವ ರಾಜಕೀಯ. "ಈ ಕ್ರಮವನ್ನು ಬಿಜೆಪಿ ಸಂಪೂರ್ಣವಾಗಿ ವಿರೋಧಿಸುತ್ತದೆ" ಎಂದು ವಿಜಯೇಂದ್ರ ಹೇಳಿದರು.



ರೈತರ ತೀವ್ರ ಪ್ರತಿಭಟನೆಯ ಹಿನ್ನೆಲೆಯಲ್ಲಿ ಬಿಡದಿ ಟೌನ್‌ಶಿಪ್ ಯೋಜನೆಯನ್ನು ಸಂಪೂರ್ಣ ಮಾತ್ರವಲ್ಲದೇ ಅಂತಿಮವಾಗಿ ಹಿಂತೆಗೆದುಕೊಳ್ಳಬೇಕೆಂದು ಪಕ್ಷದ ಒತ್ತಾಯವಾಗಿದೆ ಎಂದಿರು.

ಬಿಜೆಪಿ ಅಭಿವೃದ್ಧಿಗೆ ವಿರೋಧಿಯಲ್ಲ. ಆದರೆ ರೈತರು ಭೂಮಿಯನ್ನು ಬಿಟ್ಟುಕೊಡಲು ನಿರಾಕರಿಸುತ್ತಿರುವಾಗ, ಬಲವಂತವಾಗಿ ಹೊರಹಾಕಲು ಮತ್ತು ಅವರ ಭೂಮಿಯನ್ನು ಕಸಿದುಕೊಳ್ಳಲು ಸರ್ಕಾರ ಮಾಡುವ ಯಾವುದೇ ಪ್ರಯತ್ನವನ್ನು ಪಕ್ಷ ವಿರೋಧಿಸುತ್ತದೆ. ರೈತರ ಜೀವನೋಪಾಯವಾಗಿರುವ ಫಲವತ್ತಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಏಕೆ ಒತ್ತಾಯಿಸುತ್ತಿದೆ.

ಪ್ರಸ್ತಾವಿತ ತ್ರಿಸದಸ್ಯ ಸಮಿತಿಗೆ ಮತ್ತು ಬದಲಿಗೆ ಇಡೀ ಟೌನ್‌ಶಿಪ್ ಯೋಜನೆಯನ್ನು "ಲಾಕ್, ಸ್ಟಾಕ್ ಮತ್ತು ಬ್ಯಾರೆಲ್" ಅನ್ನು ಶಾಶ್ವತವಾಗಿ ರದ್ದುಗೊಳಿಸಬೇಕೆಂದು ಪಕ್ಷ ಬಯಸುತ್ತದೆ ಎಂದು ವಿಜಯೇಂದ್ರ ಹೇಳಿದರು.

ಮುಖ್ಯಮಂತ್ರಿ ರಿಯಲ್ ಎಸ್ಟೇಟ್ ಹಿತಾಸಕ್ತಿ ಹೊಂದಿದ್ದಾರೆ ಮತ್ತು ಆದ್ದರಿಂದ ಕೃಷಿ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗುತ್ತಿದೆ. ರಾಜ್ಯ ಕಾಂಗ್ರೆಸ್ ಸರ್ಕಾರ ಬಿಡದಿ ರೈತರ ಹೊಟ್ಟೆಯ ಮೇಲೆ ಹೊಡೆಯುವ ಮೂಲಕ ಪಕ್ಷದ ಹೈಕಮಾಂಡ್‌ನ ಹೊಟ್ಟೆ ತುಂಬಿಸಲು ಬಯಸುತ್ತಿದೆ.

ಈ ಗಂಭೀರ ವಿಷಯದ ಬಗ್ಗೆ "ಅನುಕೂಲಕರ ಮೌನವನ್ನು ಕಾಯ್ದುಕೊಂಡಿದ್ದಕ್ಕಾಗಿ" ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ಹರಿಹಾಯ್ದ ವಿಜಯೇಂದ್ರ, ಪ್ರಧಾನಿ ನರೇಂದ್ರ ಮೋದಿ ಅವರು "ರೈತರ ಆದಾಯವನ್ನು ದ್ವಿಗುಣಗೊಳಿಸಲು" ಹಿಂದೆ ತಂದ ಹಲವಾರು ಪ್ರಗತಿಪರ ಯೋಜನೆಗಳನ್ನು ರಾಹುಲ್ ಗಾಂಧಿ ವಿರೋಧಿಸಿದ್ದರು. ಈಗ, ರಾಹುಲ್ ಗಾಂಧಿ ಬಿಡದಿ ವಿಷಯದಲ್ಲಿ ಯಾವಾಗ ಮಧ್ಯಪ್ರವೇಶಿಸಿ ರೈತರ ಹಿತದೃಷ್ಟಿಯಿಂದ ಟೌನ್‌ಶಿಪ್ ಯೋಜನೆಯನ್ನು ಹಿಂತೆಗೆದು ಕೊಳ್ಳುವಂತೆ ತಮ್ಮದೇ ಪಕ್ಷದ ಕರ್ನಾಟಕ ಸಿಎಂಗೆ ಸೂಚಿಸುತ್ತಾರೆಯೇ ಎಂದು ಪ್ರಶ್ನಿಸಿದರು.

ರೈತರನ್ನು ಭಯಭೀತಗೊಳಿಸಲು ಮತ್ತು ಅವರ ಭೂಮಿಯನ್ನು ಕಬಳಿಸಲು ಗೂಂಡಾಗಳು ಮತ್ತು ರಿಯಲ್ ಎಸ್ಟೇಟ್ ಮಾಫಿಯಾವನ್ನು ಬಿಡದಿಗೆ ಕಳುಹಿಸುವ ಪಿತೂರಿ ನಡೆದಿರುವುದು ಅತಿರೇಕದ ಸಂಗತಿ. ಇದು ಸಂಭವಿಸಲು ಬಿಜೆಪಿ ಬಿಡುವುದಿಲ್ಲ ಎಂದು ವಿಜಯೇಂದ್ರ ಹೇಳಿದರು.

# ಭ್ರಷ್ಟಾಚಾರದ ವಿರುದ್ಧ ಸಮರ ಸೇನಾನಿಯಾಗಿರಬಹುದು, ಕಾನೂನು ಪಾಲಿಸಬೇಕು: ಇ.ಡಿ.ಗೆ ಹೈಕೋರ್ಟ್ ಎಚ್ಚರಿಕೆ

**ಬೆಂಗಳೂರು, ಜು.15:** ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸಹೋದರಿ ಮಹಾದೇವಿ ಮತ್ತು ಭಾವಮೈದುನ ಅಬಕಾರಿ ಇಲಾಖೆಯ ಹೆಚ್ಚುವರಿ ಆಯುಕ್ತ ಡಾ. ವೈ ಮಂಜುನಾಥ್ ಸೇರಿ ಇತರರ ವಿರುದ್ಧ ಅಕ್ರಮ ಹಣ ವರ್ಗಾವಣೆ ಕಾಯಿದೆ (ಪಿಎಂಎಲ್‌ಎ) ಅಡಿ ಶೋಧ ಮತ್ತು ಜಪ್ತಿ ಸಂಬಂಧಿತ ಪ್ರಕ್ರಿಯೆಯಲ್ಲಿ ಆತುರದ ಕ್ರಮಕ್ಕೆ ಮುಂದಾಗದಂತೆ ಜಾರಿ ನಿರ್ದೇಶನಾಲಯಕ್ಕೆ ನಿರ್ದೇಶಿಸಿರುವ ಕರ್ನಾಟಕ ಹೈಕೋರ್ಟ್, ನೀವು (ಇ.ಡಿ.) ಭ್ರಷ್ಟಾಚಾರದ ವಿರುದ್ಧ ಸಮರ ಸೇನಾನಿಯಾಗಿರಬಹುದು. ಆದರೆ, ಕಾನೂನಿನ ಪ್ರಕಾರ ನಡೆದುಕೊಳ್ಳಬೇಕು ಎಂದು ಕಟುವಾಗಿ ನುಡಿದಿದೆ.

ಜೂನ್ 23ರಂದು ಬೆಂಗಳೂರು ಮತ್ತು ಗೋವಾದ ಇ ಡಿ ಅಧಿಕಾರಿಗಳು ಬೆಳಗಾವಿ ಸೇರಿದಂತೆ ಅರ್ಜಿದಾರರಿಗೆ ಸೇರಿದ ವಿವಿಧ ಸ್ಥಳಗಳಲ್ಲಿ ನಡೆಸಿರುವ ಶೋಧ ಮತ್ತು ಜಪ್ತಿ ಪ್ರಶ್ನಿಸಿ ಡಾ. ಮಂಜುನಾಥ್ ಮತ್ತು ಅವರ ಸಂಬಂಧಿಗಳು ಪ್ರತ್ಯೇಕವಾಗಿ ಸಲ್ಲಿಸಿರುವ ಮೂರು ಅರ್ಜಿಗಳನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ನೀವು (ಇ.ಡಿ.) ಭ್ರಷ್ಟಾಚಾರದ ವಿರುದ್ಧ ಸಮರ ಸೇನಾನಿಯಾಗಿರಬಹುದು. ಆದರೆ, ಕಾನೂನಿನ ಅನ್ವಯ ನಡೆಯಬೇಕು. ಯಾವುದೇ ಇಲಾಖೆಯಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡುವ ಉತ್ಸಾಹ ಇದ್ದರೆ ಕಾನೂನಿನ ಪ್ರಕಾರ ನಡೆಯಬೇಕು. ಆಗ ಯಾವುದೇ ನ್ಯಾಯಾಲಯ ಮಧ್ಯಪ್ರವೇಶ ಮಾಡುವುದಿಲ್ಲ. ಆದರೆ, ನೀವು ಇಲ್ಲಿಗೆ ಬಂದು ಮೇಲ್ನೋಟಕ್ಕೆ ಸಮರ್ಥನೀಯವಲ್ಲದ ಕ್ರಿಯೆಯನ್ನು ಸಮರ್ಥಿಸಿಕೊಳ್ಳುವ ಅಗತ್ಯವಿಲ್ಲ ಎಂದು ನ್ಯಾಯಾಲಯವು ಮೌಖಿಕವಾಗಿ ಹೇಳಿದೆ.




ಜಾರಿ ನಿರ್ದೇಶನಾಲಯವು ಹಾಲಿ ಪ್ರಕರಣದಲ್ಲಿ ಮುಂದಿನ ವಿಚಾರಣೆಯವರೆಗೆ ಮುಂದುವರಿಯಬಾರದು ಎಂದು ನಿರ್ದೇಶಿಸಿದ್ದು, ವಿಚಾರಣೆಯನ್ನು ಜುಲೈ 22ಕ್ಕೆ ಮುಂದೂಡಿದೆ.

ವಿಚಾರಣೆಯ ವೇಳೆ ಪೀಠವು ಹಣ ವರ್ಗಾವಣೆಯಾಗಿರಬೇಕು, ಸಂಪರ್ಕ ಕಾಣಬೇಕು. ಇಲ್ಲಿ ಸಂಬಂಧವೇ ಇಲ್ಲದ ವ್ಯಕ್ತಿಗಳಿದ್ದಾರೆ. ಅಷ್ಟು ಸರಳವಾಗಿ ನೀವು ಅವರನ್ನು ಎಳೆದು ತರಲಾಗದು. ಯಾರ ಮನೆಯನ್ನಾದರೂ ಇ ಡಿ ಶೋಧಿಸಬಹುದು. ಆದರೆ, ಪ್ರೆಡಿಕೇಟ್ ಅಪರಾಧ ಇರಬೇಕು. ಆ ಪ್ರಕರಣದಲ್ಲಿ ವ್ಯಕ್ತಿ ಆರೋಪಿಯಾಗಿರಬೇಕು, ಇಲ್ಲವೇ ಆ ವ್ಯಕ್ತಿಯನ್ನು ಸಂಪರ್ಕಿಸುವ ಹಣ ವರ್ಗಾವಣೆಯಾಗಿರಬೇಕು. ಇಲ್ಲಿನ ವ್ಯಕ್ತಿಗಳು ಯಾರು ಮತ್ತು ಜಗದೀಶ್ ನಾಯಕ್ ಯಾರು ಎಂದು ಪ್ರಶ್ನಿಸಿತು.

25 ಲಕ್ಷ ಲಂಚ ಪಡೆಯುವಾಗ ಸಿಕ್ಕಿಬಿದ್ದಿರುವುದು ಅಪರಾಧ ಪ್ರಕ್ರಿಯೆಯಾಗುತ್ತದೆಯೇ ಲಂಚ ಪಡೆದ ವ್ಯಕ್ತಿಯ ವಿರುದ್ಧ ಇ.ಡಿ. ಮುಂದುವರಿಯಬಹುದು. ಇದಕ್ಕೆ ಸಂಬಂಧವೇ ಇಲ್ಲದ ವ್ಯಕ್ತಿಗಳ ವಿರುದ್ಧ ಹೇಗೆ ಇ.ಡಿ. ಹೋಗುತ್ತದೆ ಲೋಕಾಯುಕ್ತ ರೂಪದಲ್ಲಿ ಒಳ್ಳೆಯ ಸಂಸ್ಥೆ ಇದೆ. ಲೋಕಾಯುಕ್ತ ಕೆಲಸವನ್ನು ಇ.ಡಿ. ಮಾಡುತ್ತದೆಯೇ ಎಂದು ಪ್ರಶ್ನಿಸಿತು.

ಮಹಾದೇವಿ ಮತ್ತು ಮಂಜುನಾಥ್ ಅವರನ್ನು ಪ್ರತಿನಿಧಿಸಿದ್ದ ಹಿರಿಯ ವಕೀಲ ಪ್ರಭುಲಿಂಗ ನಾವದಗಿ ಅವರು ಇಲ್ಲಿ ಪ್ರೆಡಿಕೇಟ್ ಅಪರಾಧವೇ ಇಲ್ಲ. ಪತ್ರಿಕಾ ಪ್ರಕಟಣೆಯು ಪಿಎಂಎಲ್‌ಎ ಅಡಿ ವ್ಯಾಪ್ತಿಗೆ ಒಳಪಡುವುದಿಲ್ಲ ಎಂದರು.

ಹಿರಿಯ ವಕೀಲ ಕೆ ಎನ್ ಫಣೀಂದ್ರ ಅವರು ಅರ್ಜಿದಾರರ ಕಚೇರಿ ಮತ್ತು ಮನೆಗಳಲ್ಲಿ ಶೋಧ ಮತ್ತು ಜಪ್ತಿ ನಡೆದಿದೆ. ಅವರ ವಿರುದ್ಧ ಬಲವಂತದ ಕ್ರಮಕೈಗೊಳ್ಳದಂತೆ ನಿರ್ಬಂಧಿಸಬೇಕು ಎಂದು ಕೋರಿದರು.

ಜಾರಿ ನಿರ್ದೇಶನಾಲಯವನ್ನು ಪ್ರತಿನಿಧಿಸಿದ್ದ ವಿಶೇಷ ಸರ್ಕಾರಿ ಅಭಿಯೋಜಕ ಮಧು ರಾವ್ ಅವರು ?ತನಿಖೆಯ ಸಂದರ್ಭದಲ್ಲಿ ಪತ್ತೆಯಾದ ಅಂಶಗಳ ಆಧಾರದಲ್ಲಿ ಇ ಡಿ ಕ್ರಮಕೈಗೊಂಡಿದೆ.

ಈ ಸಂಬಂಧ ಮಾಹಿತಿ ಪಡೆಯಲು ಕಾಲಾವಕಾಶ ನೀಡಬೇಕು ಎಂದು ಮನವಿ ಮಾಡಿದರು.

ಷೆಡ್ಯೂಲ್ ಅಪರಾಧವಿಲ್ಲದೇ ಇರುವುದರಿಂದ ಅರ್ಜಿದಾರರ ವಿರುದ್ಧ ಜಾರಿ ನಿರ್ದೇಶನಾಲಯವು ಪಿಎಂಎಲ್‌ಎ ಸೆಕ್ಷನ್ 17ರ ಅಡಿ ಆರಂಭಿಸಿರುವ ಪ್ರಕ್ರಿಯೆಯನ್ನು ವಜಾಗೊಳಿಸಬೇಕು ಎಂದು ಕೋರಲಾಗಿದೆ. ಲೋಕಾಯುಕ್ತ ಪೊಲೀಸರು ಜಗದೀಶ್ ನಾಯಕ್ ಎಂಬ ವ್ಯಕ್ತಿಯು 25 ಲಕ್ಷ ಲಂಚ ಪಡೆಯುವಾಗ ಸಿಕ್ಕಿಬಿದ್ದಿದ್ದು, ಇದರ ಭಾಗವಾಗಿ ಭ್ರಷ್ಟಾಚಾರ ಪ್ರತಿಬಂಧಕ ಕಾಯಿದೆ ಸೆಕ್ಷನ್ 7A ಅಡಿ ಪ್ರಕರಣ ದಾಖಲಿಸಿದ್ದರು. ಈ ಪ್ರಕರಣದಲ್ಲಿ ತಾವು ಆರೋಪಿಗಳೂ ಅಲ್ಲ, ಅದಕ್ಕೆ ಸಂಬಂಧವನ್ನೂ ಹೊಂದಿಲ್ಲ. ಅದಾಗ್ಯೂ, ಇದನ್ನು ಜಾರಿ ನಿರ್ದೇಶನಾಲಯವು ಅಪರಾಧ ಪ್ರಕ್ರಿಯೆಯಾಗಿ ಮುಂದು ಮಾಡುತ್ತಿರುವುದು ಸರಿಯಲ್ಲ ಎಂದು ಅರ್ಜಿದಾರರು ವಾದಿಸಿದ್ದಾರೆ.

# ಸಾರಿಗೆ ಸಿಬ್ಬಂದಿಗೆ ವೇತನ ಪಾವತಿಯೇ ದೊಡ್ಡ ಸವಾಲು: ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ

**ಬೆಂಗಳೂರು, ಜು.15:** ರಾಜ್ಯದ ನಾಲ್ಕೂ ಸಾರಿಗೆ ನಿಗಮಗಳ ಸಿಬ್ಬಂದಿಗೆ ವೇತನ ವೇತನ ಪಾವತಿಸುವುದೇ ಬಹುದೊಡ್ಡ ಸವಾಲಾಗಿದೆ ಎಂದು ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಕೆ.ಬಿ.ಶಿವಕುಮಾರ್ ಹೇಳಿದ್ದಾರೆ.

ನಗರದ ಕಾರ್ಮಿಕ ಭವನದಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿ, ನಾಲ್ಕೂ ನಿಗಮಗಳಿಗೆ ಸರ್ಕಾರ ಹೆಚ್ಚುವರಿ ಬಸ್ ಸೇವೆ ಒದಗಿಸುತ್ತಿದ್ದು, ಇದಕ್ಕೆ ಚಾಲಕರು, ನಿರ್ವಾಹಕರ ನೇಮಕದ ಜೊತೆಗೆ ಸಾರಿಗೆ ಬಸ್‌ಗಳಿಗೆ ಪರಿಕರಗಳನ್ನು ಒದಗಿಸಬೇಕಾಗಿದೆ.

ಹೀಗಾಗಿ ನಿಗಮಕ್ಕೆ ಹೆಚ್ಚುವರಿ ಹೊರೆ ಬೀಳುತ್ತಿದೆ. ಜೊತೆಗೆ ಮಧ್ಯಪ್ರಾಚ್ಯದ ಯುದ್ಧ ಭೀತಿಯಿಂದ ತೈಲ ದರಗಳು ಹೆಚ್ಚಾಗಿವೆ. ಹೀಗಿರುವಾಗ ಸಾರಿಗೆ ನಿಗಮಗಳ ಸಿಬ್ಬಂದಿಗೆ ವೇತನ ಪಾವತಿಸುವುದು ಸಹ ಕಷ್ಟವಾಗುತ್ತಿದೆ. ವೇತನ ಪಾವತಿಗೆ ಸರ್ಕಾರ ಪರ್ಯಾಯ ಮಾರ್ಗಗಳನ್ನು ಹುಡುಕುತ್ತಿದೆ. ಸರ್ಕಾರ ಇದೀಗ ಶೇ 12.5ರಷ್ಟು ವೇತನ ಹೆಚ್ಚಳ ಮಾಡಿದ್ದು, ಈ ಹಣ ಒದಗಿಸುವುದು ಕಷ್ಟವಾಗಿದೆ ಎಂದು ಹೇಳಿದರು.

ಸಭೆಯ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಸಾಮಾಜಿಕ ಕಾರ್ಯಕರ್ತ ಗಂಡಸಿ ಸದಾನಂದ ಸ್ವಾಮಿ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಬಸ್ ಸೇವೆಯನ್ನು ಸಾರಿಗೆ ನಿಗಮಗಳು ಯಶಸ್ವಿಯಾಗಿ ಒದಗಿಸುತ್ತಿವೆ. ಆದರೆ, ಈ ಯೋಜನೆಯಡಿ ಸಾರಿಗೆ ನಿಗಮಗಳಿಗೆ ಸರ್ಕಾರದಿಂದ ಪಾವತಿಯಾಗಬೇಕಿರುವ ಸುಮಾರು 5,000 ಕೋಟಿ ರೂ. ಪರಿಹಾರ ಮೊತ್ತ ಬಾಕಿ ಉಳಿದಿದೆ. ಇದರಿಂದ ನಿಗಮಗಳ ಆರ್ಥಿಕ ಸ್ಥಿತಿ ಗಂಭೀರ ಸಂಕಷ್ಟಕ್ಕೆ ಸಿಲುಕಿದೆ ಎಂದರು.

ಸರ್ಕಾರದಿಂದ ಬಾಕಿ ಉಳಿದಿರುವ ಅನುದಾನ ಹಾಗೂ ಪರಿಹಾರ ಮೊತ್ತವನ್ನು ತಕ್ಷಣ ಬಿಡುಗಡೆ ಮಾಡುವ ಮೂಲಕ ಸುಮಾರು 1,15,000 ಸಾರಿಗೆ ನೌಕರರ ವೇತನ, ಭತ್ಯೆ ಹಾಗೂ ಇತರ ಸೌಲಭ್ಯಗಳ ಪಾವತಿಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು ಈ ಸಂದರ್ಭದಲ್ಲಿ ಒತ್ತಾಯಿಸಿದರು. ರಾಜ್ಯದ ಸಾರ್ವಜನಿಕ ಸಾರಿಗೆ



ವ್ಯವಸ್ಥೆಯನ್ನು ನಿರಂತರವಾಗಿ ಮುನ್ನಡೆಸುತ್ತಿರುವ ಸಾರಿಗೆ ನೌಕರರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಶೀಘ್ರವೇ 5,000 ಕೋಟಿ ಬಾಕಿ ಮೊತ್ತವನ್ನು ಕೆಎಸ್‌ಆರ್‌ಟಿಸಿ ಹಾಗೂ ಬಿಎಂಟಿಸಿ ನಿಗಮಗಳ ಖಾತೆಗಳಿಗೆ ಬಿಡುಗಡೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ಸಭೆಯಲ್ಲಿ ಕಾರ್ಮಿಕ ಇಲಾಖೆ ಆಯುಕ್ತ ಡಾ. ರಾಗಪ್ರಿಯಾ ಆರ್. ಅಧ್ಯಕ್ಷತೆಯಲ್ಲಿ ರಾಜಿ ಸಂಧಾನ ಸಭೆ ನಡೆಯಿತು. ವಿವಿಧ ಸಾರಿಗೆ ನಿಗಮಗಳ ಅಧಿಕಾರಿಗಳು ಹಾಗೂ ಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಧರ್ಮಸ್ಥಳ ಪ್ರಕರಣ: ಎಸ್‌ಐಟಿಯಿಂದ 7 ಸಾವಿರ ಪುಟಗಳ ಅಂತಿಮ ವರದಿ ಸಲ್ಲಿಕೆ

**ಬೆಂಗಳೂರು, ಜು.15:** ಧರ್ಮಸ್ಥಳ ಪ್ರಕರಣದಲ್ಲಿ ಎಸ್‌ಐಟಿ ಅಧಿಕಾರಿಗಳು ಬೆಳ್ತಂಗಡಿ ನ್ಯಾಯಾಲಯಕ್ಕೆ 7 ಸಾವಿರ ಪುಟಗಳ ಅಂತಿಮ ವರದಿ ಸಲ್ಲಿಸಿದ್ದಾರೆ.

ಬೆಳ್ತಂಗಡಿ ಎಸ್‌ಐಟಿ ಅಧಿಕಾರಿ ಗಳು ಧರ್ಮಸ್ಥಳ ಪ್ರಕರಣದಲ್ಲಿ 2025ರ ನವೆಂಬರ್ 20 ರಂದು ಬಿ.ಎನ್.ಎಸ್ (215) ಅಡಿಯಲ್ಲಿ ಸಿ.ಎನ್.ಚಿನ್ನಯ್ಯ, ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಜಯಂತ್ ಟಿ., ವಿಠಲ್ ಗೌಡ ಹಾಗೂ ಸುಜಾತಾ ಭಟ್ ವಿರುದ್ಧ 3,923 ಪುಟಗಳ ಸುಳ್ಳು ಸಾಕ್ಷ್ಯ ವರದಿಯನ್ನು ಸಲ್ಲಿಕೆ ಮಾಡಿದ್ದರು.

ಈ ವರದಿಯನ್ನು ಒಪ್ಪಲು ನ್ಯಾಯಾಲಯ ನಿರಾಕರಿಸಿ ಅಂತಿಮ ವರದಿ ನೀಡುವಂತೆ ಸೂಚಿಸಿತ್ತು.

ಎಸ್‌ಐಟಿ ಅಧಿಕಾರಿಗಳು ಬೆಳ್ತಂಗಡಿ ನ್ಯಾಯಾಲಯದ ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ಶಶಾಂಕ್ ನಾಗೇಂದ್ರ ಭಟ್ ಮುಂದೆ ಜು.15 ರಂದು ಎಸ್‌ಐಟಿ ಮೊದಲಿನ



3,923 ಮತ್ತು ಈಗಿನ 3,082 ಸೇರಿ ಈವರೆಗೆ ತನಿಖೆಯ ಸಂಪೂರ್ಣ ಒಟ್ಟು 7,005 ಪುಟಗಳ ಅಂತಿಮ ವರದಿಯನ್ನು 12 ಕಡತಗಳಲ್ಲಿ ಸಲ್ಲಿಸಿದ್ದಾರೆ.

ಎಸ್‌ಐಟಿ ಎಸ್‌ಪಿ ಸಿ.ಎ.ಸೈಮನ್, ಇನ್ ಸ್ಪೆಕ್ಟರ್ ಕುಸುಮಾಧರ್, ಇನ್ ಸ್ಪೆಕ್ಟರ್ ಮಂಜುನಾಥ್ ಹಾಗೂ ಸಿಬ್ಬಂದಿ ನ್ಯಾಯಾಲಯದಲ್ಲಿ ಹಾಜರಿದ್ದರು. ಪ್ರಕರಣದ ಆರೋಪಿ ಚಿನ್ನಯ್ಯನನ್ನು ಕೂಡ ನ್ಯಾಯಾಲಯದಲ್ಲಿ ಹಾಜರುಪಡಿಸಲಾಗಿತ್ತು.

# ಸರ್ಕಾರಿ ನೌಕರರ ವರ್ಗಾವಣೆ ಅವಧಿ ಜು.31ರವರೆಗೆ ವಿಸ್ತರಣೆ

**ಬೆಂಗಳೂರು, ಜು.15:** ರಾಜ್ಯ ಸರ್ಕಾರಿ ನೌಕರರ ವರ್ಗಾವಣೆಯನ್ನು ಜುಲೈ 31ರವರೆಗೆ ವಿಸ್ತರಿಸಲಾಗಿದೆ. ಈ ಕುರಿತು ಸರ್ಕಾರಿ ಆದೇಶ ಜಾರಿಯಾಗಿದೆ. ಏಪ್ರಿಲ್ 15ರಿಂದ ಮೇ 31ರವರೆಗೆ ನಿಗದಿಪಡಿಸಲಾಗಿದ್ದ ವರ್ಗಾವಣೆ ಅವಧಿಯನ್ನು ಆಡಳಿತಾತ್ಮಕ ಅಗತ್ಯತೆಗಳನ್ನು ಪರಿಗಣಿಸಿ, ಹಂತ ಹಂತವಾಗಿ ವಿಸ್ತರಿಸಲಾಗಿತ್ತು. ಜೂನ್ 1 ಮತ್ತು ಜೂನ್ 30ರಂದು ಹೊರಡಿಸಿದ ಆದೇಶಗಳ ಮೂಲಕ ಅವಧಿಯನ್ನು ಜುಲೈ 15ರವರೆಗೆ ಮುಂದೂಡಲಾಗಿತ್ತು. ಇದೀಗ, ಸರ್ಕಾರ ಜುಲೈ 31ರವರೆಗೆ ಅವಧಿ ವಿಸ್ತರಣೆ ಮಾಡಿದೆ.

# ಪಂಚಪಾಲಿಕೆಗಳ ಚುನಾವಣಾ ಭವಿಷ್ಯ ನಾಳೆ ನಿರ್ಧಾರ ಸಾಧ್ಯತೆ

**ಬೆಂಗಳೂರು, ಜು.15:** ಜಿಬಿಎ ಚುನಾವಣೆ ಭವಿಷ್ಯ ಜು.17ರಂದು ನಿರ್ಧಾರವಾಗಲಿದೆ. ಎಸ್‌ಐಆರ್ ಕಾರ್ಯದೊತ್ತಡದ ಹಿನ್ನೆಲೆಯಲ್ಲಿ ಆ.31ರ ಬದಲಿಗೆ ಡಿ.31ರವರೆಗೆ ಕಾಲಾವಕಾಶ ನೀಡುವಂತೆ ಕರ್ನಾಟಕ ಸರ್ಕಾರ ಸಲ್ಲಿಸಿರುವ ಅರ್ಜಿ ವಿಚಾರಣೆಯನ್ನು ಸುಪ್ರೀಂಕೋರ್ಟ್ ಜು. 17ರಂದು ವಿಚಾರಣೆಗೆ ಕೈಗೆತ್ತಿಕೊಳ್ಳಲಿರುವುದರಿಂದ ಪಂಚ ಪಾಲಿಕೆಗಳ ಚುನಾವಣಾ ಭವಿಷ್ಯ ಅಂದೇ ನಿರ್ಧಾರವಾಗುವ ಸಾಧ್ಯತೆಗಳಿವೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠದ ಮುಂದೆ ಜಿಬಿಎ ಪರ ಹಿರಿಯ ವಕೀಲ ಕಪಿಲ್ ಸಿಬಲ್ ಅವರು ಜು. 17ರಂದು ನಿಗದಿಯಾಗಿರುವ ವಿಚಾರಣೆಯನ್ನು ಪಟ್ಟಿಯಿಂದ ಕೈಬಿಡದಂತೆ ಮನವಿ ಮಾಡಿರುವುದಕ್ಕೆ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಹಾಗೂ ವಿ.ಮೋಹನ ಅವರನ್ನೊಳಗೊಂಡ ಪೀಠ ಸಮ್ಮತಿಸಿರುವುದರಿಂದ ಅಂದೇ ವಿಚಾರಣೆ ನಡೆಯುವುದು ಬಹುತೇಕ ಖಚಿತ ಗೊಂಡಿದೆ.

ಯಾವುದೇ ಕಾರಣಕ್ಕೂ ಚುನಾವಣೆ ಮುಂದೂಡಿಕೆಗೆ ಮತ್ತೆ ಅವಕಾಶ ನೀಡುವುದಿಲ್ಲ ಹೀಗಾಗಿ ಆ.31 ರೊಳಗೆ ಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸುವಂತೆ ನ್ಯಾಯಲಯ ಕಟ್ಟುನಿಟ್ಟಿನ ಆದೇಶ ನೀಡಿದ್ದರೂ ಕರ್ನಾಟಕ ಸರ್ಕಾರ




ಮತ್ತೆ ಅರ್ಜಿ ಸಲ್ಲಿಸಿರುವುದು ಸುಪ್ರೀಂ ಕೆಂಗಣ್ಣಿಗೆ ಗುರಿಯಾಗಿದೆ.

ಈ ಮಧ್ಯೆ ಸಂಘ ಪರಿವಾರದವರು ಜಿಬಿಎ ಚುನಾವಣೆ ಮುಂದೂಡಲು ಕರ್ನಾಟಕ ಸರ್ಕಾರ ಇಲ್ಲಸಲ್ಲದ ಸಬೂಬು ಹೇಳುತ್ತಿದೆ ಅವರ ಮಾತಿಗೆ ಮನ್ನಣೆ ನೀಡದೆ ಆ.31 ರೊಳಗೆ ಚುನಾವಣೆ ನಡೆಸಲು ಆದೇಶಿಸಬೇಕು ಎಂದು ಇಂಪ್ಲೀಡ್ ಅರ್ಜಿ ಸಲ್ಲಿಸಿರುವುದರಿಂದ ಶುಕ್ರವಾರದ ವಿಚಾರಣೆ ತೀವ್ರ ಕುತೂಹಲ ಕೆರಳಿಸಿದೆ. ಕರ್ನಾಟಕ ಸರ್ಕಾರ ಸಲ್ಲಿಸಿರುವ ಅರ್ಜಿಯಲ್ಲಿ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿರುವುದರಿಂದ ಆಡಳಿತಾತ್ಮಕ ಸವಾಲುಗಳು ಎದುರಾಗಿವೆ. ಮನೆಮನೆಗೆ ತೆರಳಿ ಮತದಾರರ ವಿವರ ಪರಿಶೀಲಿಸುವ ಕಾರ್ಯದಲ್ಲಿ ಸಿಬ್ಬಂದಿ ನಿರತರಾಗಿರುವ ಕಾರಣ, ಅದೇ ಸಮಯದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಅಗತ್ಯವಿರುವ ಭಾರಿ ಪ್ರಮಾಣದ ಸಿಬ್ಬಂದಿಯನ್ನು ನಿಯೋಜಿಸುವುದು ಸಾಧ್ಯವಾಗುತ್ತಿಲ್ಲ ಎಂದು ವಾದಿಸಿದೆ.

ಬೆಂಗಳೂರು ನಗರದಲ್ಲೇ ಸುಮಾರು 1.03 ಕೋಟಿ ಮತದಾರರು ಹಾಗೂ 40 ಲಕ್ಷ ಮನೆಗಳಿದ್ದು, ಐದು ನಗರ ಪಾಲಿಕೆಗಳ ಚುನಾವಣೆಗೆ ಮತದಾನದ ದಿನ ಮಾತ್ರವೇ ಭದ್ರತಾ ಸಿಬ್ಬಂದಿಯನ್ನು ಹೊರತು ಪಡಿಸಿ ಸುಮಾರು 60 ಸಾವಿರ ಸಿಬ್ಬಂದಿ ಅಗತ್ಯವಿದೆ. ಹೀಗಾಗಿ ಎರಡೂ ಪ್ರಕ್ರಿಯೆಗಳನ್ನು ಏಕಕಾಲದಲ್ಲಿ ನಿರ್ವಹಿಸುವುದು ಅತ್ಯಂತ ಕಷ್ಟಕರವಾಗಿದೆ ಎನ್ನುವುದು ಸರ್ಕಾರದ ವಾದವಾಗಿದೆ.

ಕರ್ನಾಟಕ ಸರ್ಕಾರ ಹಾಗೂ ಸಂಘ ಪರಿವಾರದವರು ಸಲ್ಲಿಸಿರುವ ಅರ್ಜಿ ವಿಚಾರಣೆ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಯಾವ ತೀರ್ಮಾನ ಕೈಗೊಳ್ಳಲಿದೆ ಎನ್ನುವುದರ ಮೇಲೆ ಜಿಬಿಎ ಚುನಾವಣಾ ಭವಿಷ್ಯ ನಿರ್ಧಾರವಾಗಲಿದೆ.

**ಮರು ವಿಭಜನೆ ಸಾಧ್ಯತೆ:** ಒಂದು ವೇಳೆ ಸುಪ್ರೀಂಕೋರ್ಟ್ ಡಿ.31 ರವರೆಗೆ ಅವಕಾಶ ನೀಡಿದರೆ ಕರ್ನಾಟಕ ಸರ್ಕಾರದವರು ಬರುವ ಅಧಿವೇಶನದಲ್ಲಿ ಪಂಚ ಪಾಲಿಕೆಗಳಲ್ಲಿ ಆರ್ಥಿಕ ಅಸಮತೋಲನ ಇರುವುದರಿಂದ ಐದು ಪಾಲಿಕೆಗಳ ಬದಲಿಗೆ ಎರಡು ಇಲ್ಲವೇ ಮೂರು ಪಾಲಿಕೆ ರಚಿಸಿ ಚುನಾವಣೆ ನಡೆಸುವ ಬಗ್ಗೆ ಅನುಮತಿ ಪಡೆದುಕೊಂಡು ಮತ್ತೆ ಎರಡು ವರ್ಷಗಳ ವರೆಗೆ ಜಿಬಿಎಗೆ ಚುನಾವಣೆ ನಡೆಸು ಸಾಧ್ಯತೆ ಇಲ್ಲ ಹೀಗಾಗಿ ಹೇಗಾದರೂ ಮಾಡಿ ಆ.31ರೊಳಗೆ ಚುನಾವಣೆ ಆಗುವಂತೆ ನೋಡಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.



ಮೈಸೂರಿನಲ್ಲಿ ಬುಧವಾರ ವ್ಯಾಪಾರಿಗಳು ಪಾದಚಾರಿ ಮಾರ್ಗಗಳ ಅತಿಕ್ರಮಣವನ್ನು ತೆರವುಗೊಳಿಸುತ್ತಿರುವ ಮೈಸೂರು ಮಹಾನಗರ ಪಾಲಿಕೆ ಸಿಬ್ಬಂದಿ.

# ಆಷಾಢ ಶುಕ್ರವಾರ: ಚಾಮುಂಡೇಶ್ವರಿ ದರ್ಶನಕ್ಕೆ ಸಕಲ ವ್ಯವಸ್ಥೆ

**ಮೈಸೂರು, ಜು.15:** ಆಷಾಢ ಶುಕ್ರವಾರದಂದು ಚಾಮುಂಡಿಬೆಟ್ಟದ ಚಾಮುಂಡೇಶ್ವರಿ ದೇವಸ್ಥಾನಕ್ಕೆ ಭಕ್ತರು ಅಪಾರ ಸಂಖ್ಯೆಯಲ್ಲಿ ಬರುವುದರಿಂದ, ಅವರು ದರ್ಶನಕ್ಕೆ ಯಾವುದೇ ತೊಂದರೆ ಆಗದಂತೆ ಸೂಕ್ತ ವ್ಯವಸ್ಥೆ ಕೈಗೊಳ್ಳಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ಇಲ್ಲಿನ ಲಲಿತಮಹಲ್ ಬಳಿಯ ಮೈದಾನದಲ್ಲಿ ವಾಹನ ನಿಲುಗಡೆಗೆ ಮಾಡಿರುವ ವ್ಯವಸ್ಥೆ ಹಾಗೂ ಬೆಟ್ಟದಲ್ಲಿ ಕೈಗೊಂಡಿರುವ ಸಿದ್ಧತೆಯನ್ನು ಬುಧವಾರ ಪರಿಶೀಲಿಸಿದ ಬಳಿಕ ಪತ್ರಕರ್ತರೊಂದಿಗೆ,

ಸಾಮಾನ್ಯ ಭಕ್ತರೇ ನಮ್ಮ ಆದ್ಯತೆ. ಅವರಿಗೆ ಸುಲಭ ದರ್ಶನ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ. ವಿಐಪಿಗಳು ಹಾಗೂ ಶಿಫಾರಸು ಪತ್ರ ತಂದವರಿಗೆ ಬೆಳಿಗ್ಗೆ 5.30ರಿಂದ 9.30ರವರೆಗೆ ಮಾತ್ರ ಪ್ರತ್ಯೇಕ ಸರದಿ ಸಾಲಿನಲ್ಲಿ ದರ್ಶನಕ್ಕೆ ಅವಕಾಶ ನೀಡಲಾಗುತ್ತದೆ. ಅಗತ್ಯ ಬಿದ್ದರೆ ಸಂಜೆ ವೇಳೆಗೆ ಮತ್ತೊಂದು ಕೋಟಾ ನಿಗದಿಪಡಿಸಲಾಗುವುದು' ಎಂದು ತಿಳಿಸಿದರು.

300 ಟಿಕೆಟ್‌ನಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲ ಆಗುತ್ತಿರಲಿಲ್ಲ. ಆ ಸಾಲು ಹಾಗೂ ಸಾಮಾನ್ಯ ದರ್ಶನದ ಸರತಿ ಸಾಲಿನಲ್ಲಿ ದರ್ಶನಕ್ಕೆ ಬೇಕಾಗುವ ಸಮಯದಲ್ಲಿ ಹೆಚ್ಚಿನ ವ್ಯತ್ಯಾಸ ಆಗುತ್ತಿರಲಿಲ್ಲ. ಹೀಗಾಗಿ, ಸದ್ಯಕ್ಕೆ ಆ ಟಿಕೆಟ್ ವ್ಯವಸ್ಥೆ ರದ್ದುಗೊಳಿಸಲಾಗಿದೆ. 2 ಸಾವಿರ ರೂ. ಟಿಕೆಟ್ ಪರಿಚಯಿಸಲಾಗಿದೆ. ಮೊದಲ ಶುಕ್ರವಾರ ಪರಿಸ್ಥಿತಿ ನೋಡಿಕೊಂಡು ಮುಂದಿನ ವಾರಗಳಲ್ಲಿ ಸುಧಾರಣೆ ಅಗತ್ಯವಿದ್ದರೆ ಮಾಡಿಕೊಳ್ಳಲಾಗುವುದು'. ಮೆಟ್ಟಿಲು ಹತ್ತಿ ಬರುವವರಿಗೆ ಮೂರು ಕಡೆ ತಾತ್ಕಾಲಿಕ ತಂಗುದಾಣ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ. ಜೊತೆಗೆ, 'ನಂದಿನಿ' ಬಾದಾಮಿ ಹಾಲು ಹಾಗೂ ಬಿಸ್ಕೆಟ್ ವಿತರಿಸಲಾಗುತ್ತದೆ. ಎಲ್ಲ ಮೂಲಸೌಲಭ್ಯ ಒದಗಿಸಲಾಗುವುದು. ಶಾಶ್ವತ ಶೌಚಾಲಯ ನಿರ್ಮಾಣಕ್ಕೆ ಶೀಘ್ರದಲ್ಲೇ ಕ್ರಮ ಕೈಗೊಳ್ಳಲಾಗುವುದು' ಎಂದರು.'

ಸಚಿವರು, ಶಾಸಕರು, ಸಂಸದರು, ನ್ಯಾಯಾಧೀಶರು ಸೇರಿದಂತೆ ಶಿಷ್ಟಾಚಾರದಂತೆ ಅವಕಾಶ ಇರುವವರ ವಾಹನಗಳಿಗೆ ಮಾತ್ರ ಬೆಟ್ಟದ ಮೇಲೆ ಹೋಗಲು ಅನುಮತಿ ಇರಲಿದೆ. ಶಿಫಾರಸು ಪತ್ರ ತಂದವರ ವಾಹನಗಳಿಗೆ ಅವಕಾಶ ಇರುವುದಿಲ್ಲ. ಲಲಿತಮಹಲ್ ಮೈದಾನದ ಬಳಿ ವಾಹನ ನಿಲುಗಡೆ ಮಾಡಿ ಅಲ್ಲಿಂದ ಕೆಎಸ್‌ಆರ್‌ಟಿಸಿ ಬಸ್‌ಗಳ ಮೂಲಕವೇ ಆಗಮಿಸಬೇಕು. ನಿಗದಿತ ಸರದಿ ಸಾಲಿನಲ್ಲಿ ಬಂದು ದರ್ಶನ ಪಡೆಯಬೇಕು ಎಂದು ತಿಳಿಸಿದರು.

**ಹಲವು ವ್ಯವಸ್ಥೆ:**–ವಾಹನ ನಿಲುಗಡೆ ವ್ಯವಸ್ಥೆ, ಭಕ್ತರಿಗಾಗಿ ವಿಶೇಷ ಬಸ್ ಸೇವೆ, ಕುಡಿಯುವ ನೀರಿನ ವ್ಯವಸ್ಥೆ, ಸರತಿ ಸಾಲು ನಿರ್ವಹಣೆಗೆ ಕೈಗೊಂಡಿರುವ ಕ್ರಮಗಳು ಹಾಗೂ ಶೌಚಾಲಯಗಳ ಸೌಲಭ್ಯಗಳನ್ನು ಸಚಿವರು ಪರಿಶೀಲಿಸಿದರು.

**ಲಾಡು ಪ್ರಸಾದ ತಯಾರಿಕೆ:**–ಆಷಾಢದ ಮೊದಲ ಶುಕ್ರವಾರ ಚಾಮುಂಡಿಬೆಟ್ಟಕ್ಕೆ ಹೆಚ್ಚಿನ ಭಕ್ತರು ಬರುವುದರಿಂದ ಲಾಡುಪ್ರಸಾದ ತಯಾರಿಯನ್ನು ಜಾಸ್ತಿ ಪ್ರಮಾಣದಲ್ಲಿ ಮಾಡಲಾಗುತ್ತಿದೆ. ನಿತ್ಯ 30ಸಾವಿರ ಲಾಡುಗಳನ್ನು ಸಿದ್ಧಪಡಿಸಿ, ಪ್ಯಾಕ್ ಮಾಡುವ, ಕುಂಕುಮ ಮೊದಲಾದ ಪ್ರಸಾದ ಪಾಕೆಟ್ ತಯಾರಿಕೆಯಲ್ಲಿ ಸಿಬ್ಬಂದಿ ತೊಡಗಿದ್ದರು. ಬೆಟ್ಟದಲ್ಲಿ ಸರದಿ ಸಾಲಿಗಾಗಿ, ಭಕ್ತರಿಗೆ ಬಿಸಿಲು ಹಾಗೂ ಮಳೆಯಿಂದ ರಕ್ಷಣೆಗಾಗಿ ಪೆಂಡಾಲ್ ವ್ಯವಸ್ಥೆ ಮಾಡಲಾಗಿದೆ. ಮಹಿಷಾಸುರ ಪ್ರತಿಮೆ ಬಳಿಯಿಂದ ಚಾಮುಂಡೇಶ್ವರಿ ದೇಗುಲದವರೆಗೂ ಪೆಂಡಾಲ್ ಹಾಕಲಾಗಿದೆ. ಭಕ್ತರು ಪ್ರತ್ಯೇಕವಾದ ಸಾಲುಗಳಲ್ಲಿ ಸರಾಗವಾಗಿ ಸಾಗಲು, 2ಸಾವಿರದ ಟಿಕೆಟ್ ಪಡೆದವರಿಗೆ ಪ್ರತ್ಯೇಕ ಸಾಲಿನ ವ್ಯವಸ್ಥೆ ಮಾಡಲಾಗಿದೆ.

# ದಸರಾಗೆ ಮೊದಲೇ ರಸ್ತೆ ದುರಸ್ತಿ ಕಾಮಗಾರಿ ಪೂರ್ಣಗೊಳಿಸಿ: ಅಧಿಕಾರಿಗಳಿಗೆ ಸಚಿವ ಯತೀಂದ್ರ ಸೂಚನೆ

**ಮೈಸೂರು, ಜು.15:** ನಗರದಲ್ಲಿ ರಸ್ತೆ ದುರಸ್ತಿ ಕಾಮಗಾರಿಗಳನ್ನು ದಸರಾ ಆರಂಭಕ್ಕೆ ಮುನ್ನವೇ ಪೂರ್ಣಗೊಳಿಸಬೇಕು. ಸುಗಮ ಸಂಚಾರಕ್ಕೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ತಾಕೀತು ಮಾಡಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣ ದಲ್ಲಿ ಬುಧವಾರ ಅಧಿಕಾರಿಗಳ ಸಭೆ ನಡೆಸಿದ ಅವರು, ದಸರಾ ವೇಳೆ ಜನಸಂದಣಿ ಹೆಚ್ಚಾಗುವ ಕಾರಣದಿಂದ ಆ.15ರ ನಂತರ ವೈಟ್ಟ್ಯಾಪಿಂಗ್ ಕಾಮಗಾರಿ ಸ್ಥಗಿತಗೊಳಿಸಬೇಕು' ಎಂದೂ ಸೂಚಿಸಿದರು. 'ದಸರೆಗೆ ಹೊರಗಿನಿಂದ ಹೆಚ್ಚು ಜನರು ಬರುತ್ತಾರೆ, ಆಗ ಕಾಮಗಾರಿ ನಡೆಯುತ್ತಿದ್ದರೆ ವಾಹನಗಳ ಸಂಚಾರಕ್ಕೆ ತೊಂದರೆ ಆಗುತ್ತದೆ. ಸಾರ್ವಜನಿಕರಿಂದಲೂ ಈ ದೂರು ಕೇಳಿಬಂದಿದೆ. ಹೀಗಾಗಿ, ಈವರೆಗೂ ಆರಂಭಿಸದ ಕಾಮಗಾರಿಗಳನ್ನು ದಸರಾ ಮುಗಿದ ಬಳಿಕ ಕೈಗೆತ್ತಿಕೊಳ್ಳಬೇಕು. ಉತ್ಸವದ ಸಂದರ್ಭದಲ್ಲಿ ಆರಂಭಿಸಬಾರದು ಎಂದರು.

**ವಾಹನಗಳ ಸಂಚಾರಕ್ಕೆ ಜಾಗ:** ಬಂಡೀಪಾಳ್ಯ ಬಳಿಯ ದೇವಲಾಪುರ ಗ್ರಾಮದಲ್ಲಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ಶುರು ಮಾಡಲಾಗಿದೆ. ಯುವ ದಸರಾ ಸಂದರ್ಭದಲ್ಲಿ ತೊಂದರೆ ಆಗದಂತೆ ನೋಡಿಕೊಳ್ಳುವ ದಕ್ಕಾಗಿ ಕಾಮಗಾರಿ ನಿಲ್ಲಿಸಿ ಸಮತಟ್ಟು ಮಾಡಿಕೊಡುವಂತೆ ಈಗಾಗಲೇ ಪತ್ರ ಬರೆಯಲಾಗಿದೆ. ಅಂತೆಯೇ ಮಣಿಪಾಲ್ ಜಂಕ್ಷನ್ ರಸ್ತೆಯ ಕಾಮಗಾರಿಯೂ ಪ್ರಗತಿಯಲ್ಲಿದೆ. ಮೈಸೂರು–ನಂಜನಗೂಡು ರಸ್ತೆ, ದೇವಲಾಪುರ ರಸ್ತೆಯಲ್ಲಿ ವಾಹನಗಳ ಸಂಚಾರಕ್ಕೆ ಜಾಗದ ವ್ಯವಸ್ಥೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

ಲೋಕೋಪಯೋಗಿ ಇಲಾಖೆ ಇಇ ಪದ್ಮನಾಭ, 'ಮುಖ್ಯಮಂತ್ರಿಯವರ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ 20 ಕಾಮಗಾರಿಗಳು ಮಂಜೂರಾಗಿವೆ. ಇದರಲ್ಲಿ ಒಂದು ಮುಗಿದಿದೆ. 16 ಪ್ರಗತಿಯಲ್ಲಿದ್ದು, ಮೂರನ್ನು ಆರಂಭಿಸಬೇಕಿದೆ. ವೈಟ್ ಟಾಪಿಂಗ್ ಕಾಮಗಾರಿಗಳ ಮುಕ್ತಾಯಕ್ಕೆ 2028ರ ಜನವರಿಯವರೆಗೆ ಗಡುವು ನೀಡಲಾಗಿದೆ. ಈಗಾಗಲೇ ಮಾನಂದವಾಡಿ, ಬೋಗಾದಿ ಮುಖ್ಯರಸ್ತೆ ಸೇರಿ ಆರು ಕಿ.ಮೀ.ನಷ್ಟು ಕಾಮಗಾರಿ ಮುಗಿದಿದೆ ಎಂದು ಮಾಹಿತಿ ನೀಡಿದರು.

# ಹಿರಿಯೂರು ಉಪಚುನಾವಣೆಗೆ ಕೆಪಿಸಿಸಿಯಿಂದ ಉಸ್ತುವಾರಿಗಳ ನೇಮಕ

**ಚಿತ್ರದುರ್ಗ, ಜು.15:** ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಭರ್ಜರಿ ಸಿದ್ಧತೆ ನಡೆಸಿರುವ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕ್ಷೇತ್ರ ವ್ಯಾಪ್ತಿಯ ಜಿಪಂ ಕ್ಷೇತ್ರಗಳು ಹಾಗೂ ನಗರಸಭೆಗೆ ಹಿರಿಯ ನಾಯಕರನ್ನು ಉಸ್ತುವಾರಿಗಳನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಿದೆ.



ಉಪಚುನಾವಣೆಯನ್ನು ಅತ್ಯಂತ ಪರಿಣಾಮಕಾರಿಯಾಗಿ ಎದುರಿಸಲು, ಪಕ್ಷದ ಸಂಘಟನೆಯನ್ನು ಬಲ ಗೊಳಿಸಲು ಮತ್ತು ಕಾರ್ಯಕರ್ತರನ್ನು ಸಜ್ಜುಗೊಳಿಸಲು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಮಹತ್ವದ ಜವಾಬ್ದಾರಿಯನ್ನು ಹಂಚಿಕೆ ಮಾಡಿದ್ದಾರೆ.

ಹಿರಿಯೂರು ಕ್ಷೇತ್ರದ ವಿವಿಧ ಜಿಪಂ ಕ್ಷೇತ್ರಗಳು ಮತ್ತು ನಗರಸಭೆ ವ್ಯಾಪ್ತಿಗೆ ಸಚಿವರು, ಶಾಸಕರು ಹಾಗೂ ಮಾಜಿ ಸಚಿವರನ್ನೊಳಗೊಂಡ ಪ್ರಮುಖ ನಾಯಕರನ್ನು ನಿಯೋಜಿಸ ಲಾಗಿದೆ.

ಎಲ್ಲಾ ಉಸ್ತುವಾರಿಗಳು ತಕ್ಷಣವೇ ತಮಗೆ ನೀಡಿರುವ ಜವಾಬ್ದಾರಿಯನ್ನು ವಹಿಸಿಕೊಂಡು, ಸ್ಥಳೀಯ ಮುಖಂಡರು, ಎಐಸಿಸಿ ಕಾರ್ಯದರ್ಶಿ ಗಳು ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷರ ಸಹಕಾರದೊಂದಿಗೆ ಚುನಾವಣ ಮುಗಿಯುವವರೆಗೂ ಕ್ಷೇತ್ರದಲ್ಲಿ ಬೀಡುಬಿಟ್ಟು ಕಾರ್ಯನಿರ್ವಹಿಸಬೇಕು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

**ಎಲ್ಲಿಗೆ, ಯಾರು ಉಸ್ತುವಾರಿ?**

1. **ಹಿರಿಯೂರು ನಗರಸಭೆ:** ಮಾಜಿ ಸಚಿವ ಚಲುವರಾಯಸ್ವಾಮಿ, ಮಾಜಿ ಸಂಸದ ಬಿ.ಎನ್. ಚಂದ್ರಪ್ಪ, ಶಾಸಕ ಹಾಗೂ ಮಾಜಿ ಸಚಿವ ಜಮೀರ್ ಅಹಮದ್ ಖಾನ್ ಮತ್ತು ಶಾಸಕ ಟಿ. ರಘುಮೂರ್ತಿ
2. **ಮಸ್ಕಲ್:** ದೆಹಲಿಯಲ್ಲಿ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ಶಾಸಕ ಹಾಗೂ ಮಾಜಿ ಸಚಿವ ಪುಟ್ಟರಂಗಶೆಟ್ಟಿ ಮತ್ತು ಶಾಸಕ ಜೆ.ಎನ್. ಗಣೇಶ್
3. **ಧರ್ಮಪುರ:** ಶಾಸಕ ಹಾಗೂ ಮಾಜಿ ಸಚಿವ ಶಿವರಾಜ್ ತಂಗಡಗಿ, ಶಾಸಕ ಎಚ್.ಸಿ. ಬಾಲಕೃಷ್ಣ, ಶಾಸಕಿ ರೂಪಕಲಾ ಮತ್ತು ಎಂಎಲ್‌ಸಿ ನಾಗರಾಜ್ ಯಾದವ್.
4. **ಹೊಸಯಳನಾಡು:** ಮಾಜಿ ಸಚಿವ ಎಚ್. ಆಂಜನೇಯ, ಶಾಸಕರಾದ ರಿಜ್ವಾನ್ ಅರ್ಷದ್, ಶರತ್ ಬಚ್ಚೇಗೌಡ ಹಾಗೂ ದರ್ಶನ್ ಧ್ರುವನಾರಾಯಣ್.
5. **ವಾಣಿವಿಲಾಸಪುರ:** ಮಾಜಿ ಸಚಿವ ಡಾ. ಎಂ.ಸಿ. ಸುಧಾಕರ್, ಶಾಸಕರಾದ ಬಿ.ಜಿ. ಗೋವಿಂದಪ್ಪ, ಬಸವರಾಜ್ ಶಿವಗಂಗಾ ಮತ್ತು ಎಚ್.ಎ. ವೆಂಕಟೇಶ್
6. **ಜವನಗೊಂಡನಹಳ್ಳಿ:** ಮಾಜಿ ಸಚಿವ ಪಿ.ಟಿ. ಪರಮೇಶ್ವರ್ ನಾಯ್ಕ್, ಶಾಸಕ ಡಾ. ರಂಗನಾಥ್, ಎಂಎಲ್‌ಸಿ ಡಿ.ಟಿ. ಶ್ರೀನಿವಾಸ್ ಮತ್ತು ಚೇರ್ಮನ್ ಜಿ.ಎಸ್. ಮಂಜುನಾಥ್

**ಐಮಂಗಲ:** ಸಂಸದೆ ಪ್ರಭಾ ಮಲ್ಲಿಕಾರ್ಜುನ್, ಶಾಸಕ ಹಾಗೂ ಮಾಜಿ ಸಚಿವ ಬಿ. ನಾಗೇಂದ್ರ, ಶಾಸಕರಾದ ಎನ್.ವೈ. ಗೋಪಾಲ ಕೃಷ್ಣ ಮತ್ತು ಕೆ.ಸಿ. ವೀರೇಂದ್ರ (ಪಪ್ಪಿ)

# ಎಸ್‌ಐಆರ್ ಗಣತಿ ನಮೂನೆಗಳ ವಿತರಣೆ



**ಬಳ್ಳಾರಿ,ಜು.15**.ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಅಂಗವಾಗಿ ಗಣತಿ ನಮೂನೆಗಳನ್ನು ಮುದ್ರಿಸಿ ಮನೆ–ಮನೆ ಭೇಟಿ ನೀಡಿ ವಿತರಿಸುವ ಹಾಗೂ ಗಣಕೀಕರಣ ಗೊಳಿಸುವ ಕಾರ್ಯವು ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಚುರುಕಿನಿಂದ ಸಾಗುತ್ತಿದೆ.

ಈ ಕ್ಷೇತ್ರದಲ್ಲಿ ಒಟ್ಟು 2,51,325 ಮತದಾರರಿದ್ದು, ಮುದ್ರಿಸಲಾದ ಒಟ್ಟು ಎಸ್‌ಐಆರ್ ಗಣತಿ ನಮೂನೆಗಳ ಪೈಕಿ 2,50,761 (ಶೇ. 99.78 ರಷ್ಟು) ಗಣತಿ ನಮೂನೆಗಳನ್ನು ಈಗಾಗಲೇ ಯಶಸ್ವಿಯಾಗಿ ವಿತರಿಸಲಾಗಿದೆ. ಕ್ಷೇತ್ರದ ಒಟ್ಟು ಶೇ. 97.21 ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ.

ವಿತರಿಸಲಾದ ನಮೂನೆಗಳ ಪೈಕಿ 1,00,294 (ಶೇ. 39.91 ರಷ್ಟು) ನಮೂನೆಗಳ ಗಣಕೀಕರಣ ಕಾರ್ಯ ಮುಕ್ತಾಯಗೊಂಡಿದೆ. ಇದರಲ್ಲಿ ಆನ್‌ಲೈನ್ ಮೂಲಕ ಮತದಾರರಿಂದ ಸ್ವೀಕೃತವಾದ 432 ನಮೂನೆಗಳೂ ಸೇರಿವೆ.

ಕ್ಷೇತ್ರದಾದ್ಯಂತ ವಿವಿಧ ಕಾರಣಗಳಿಂದಾಗಿ ಒಟ್ಟು 4,673 ಗಣತಿ ನಮೂನೆಗಳನ್ನು ಸಂಗ್ರಹಿಸಲು ಸಾಧ್ಯವಾಗಿಲ್ಲ. ಅದರಲ್ಲಿ 2,329 ಮಂದಿ ಮರಣ ಹೊಂದಿದ ಮತದಾರರು, 1,850 ಮಂದಿ ಶಾಶ್ವತ ವಲಸೆ ಹೋದವರು, 463 ಮಂದಿ ಈಗಾಗಲೇ ಹೆಸರು ನೋಂದಾಯಿತ ರಾದವರು, 23 ಮಂದಿ ಪತ್ತೆಯಾಗದ/ ಗೈರುಹಾಜರಾದವರು ಮತ್ತು 08 ಮಂದಿ ಇತರರು ಒಳಗೊಂಡಿದ್ದಾರೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮನೆ–ಮನೆ ಭೇಟಿ ನೀಡಿ ಗಣತಿ ನಮೂನೆ ವಿತರಿಸುವ ಕಾರ್ಯ ಮತ್ತು ಪರಿಶೀಲಿಸುವ ಪ್ರಕ್ರಿಯೆ ಜುಲೈ 29 ರ ವರೆಗೆ ನಡೆಯಲಿದೆ. ಹಾಗಾಗಿ ಅರ್ಹ ಮತದಾರರು ತಮ್ಮ ಮಾಹಿತಿಯನ್ನು ಸಂಬಂಧಿಸಿದ ಬೂತ್‌ಮಟ್ಟದ ಅಧಿಕಾರಿಗಳಿಗೆ ನೀಡಿ ಸಹಕರಿಸಬೇಕು ಎಂದು 93–ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಸಹಾಯಕ ಆಯುಕ್ತ ರಾಜೇಶ್ ಎಚ್.ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 10 ಸಾವಿರ ಮಕ್ಕಳ ಭವಿಷ್ಯಕ್ಕೆ ಸಂಚಕಾರ: ಗಡಿಭಾಗದ ಕನ್ನಡ ಶಾಲೆಗಳಿಗೆ ಇನ್ನೂ ಸಿಗದ ಪಠ್ಯಪುಸ್ತಕ

**ರಾಯಚೂರು, ಜು. 15:** ಶಾಲೆಗಳು ಆರಂಭವಾಗಿ ತಿಂಗಳಿಗೂ ಹೆಚ್ಚು ಸಮಯ ಕಳೆದಿದ್ದರೂ, ಕರ್ನಾಟಕ–ಆಂಧ್ರಪ್ರದೇಶ ಹಾಗೂ ತೆಲಂಗಾಣ ಗಡಿ ಭಾಗಗಳಲ್ಲಿರುವ 10 ಸಾವಿರಕ್ಕೂ ಹೆಚ್ಚು ಕನ್ನಡ ಮಾಧ್ಯಮದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಇನ್ನೂ ಎಲ್ಲಾ ವಿಷಯಗಳ ಕನ್ನಡ ಪಠ್ಯಪುಸ್ತಕಗಳು ಲಭ್ಯವಾಗಿಲ್ಲ. ಒಟ್ಟು 16 ಪ್ರಾಥಮಿಕ ಹಾಗೂ 17 ಪ್ರೌಢಶಾಲೆಗಳಿಗೆ ಇನ್ನೂ ಪಠ್ಯಪುಸ್ತಕಗಳು ತಲುಪಬೇಕಿದ್ದು, ಸರ್ಕಾರದ ನಿರ್ಲಕ್ಷ್ಯಕ್ಕೆ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಮೊದಲನೇ ಪುಟದಿಂದ

## ಬಿಡದಿ ಟೌನ್‌ಶಿಪ್‌ಗಾಗಿ ರೈತರ ಜಾಗ ಬಲವಂತ ಸ್ವಾಧೀನ ಮಾಡಲ್ಲ: ಡಿಕೆಶಿ

ಅಲ್ಲಿಂದ ಇದು ಆರಂಭವಾಗಿದೆ. ಇದನ್ನು ಬಳಿಕ ಬಿಎಂಆರ್‌ಡಿಎಯಿಂದ ಪಿಪಿಪಿ ಮಾದರಿಯಲ್ಲಿ ಸಮಗ್ರ ಉಪ ನಗರ ಅಭಿವೃದ್ಧಿ ಪಡಿಸಲು ಅಧಿಕೃತ ಪಾಲುದಾರರನ್ನು ಗುರುತಿಸಲು ಜಾಗತಿಕ ಟೆಂಡರ್ ಕರೆಯಲು ತೀರ್ಮಾನ ಕೈಗೊಂಡಿದ್ದರು.

ಅಶೋಕ್ ಅವರು ಸಹ ಅಂದು ಸಚಿವ ಸಂಪುಟದಲ್ಲಿದ್ದರು. 2007ರಲ್ಲಿ ಮತ್ತೆ ಹೆಚ್ಚುವರಿಯಾಗಿ ಮಾರಂಡಹಳ್ಳಿ, ವಡೆಯರಳ್ಳಿ ಸೇರಿದಂತೆ ಹೊಸದಾಗಿ ಗ್ರಾಮಗಳನ್ನು ಟೌನ್‌ಶಿಪ್‌ನಲ್ಲಿ ಸೇರಿಸಲು ನಿರ್ಧರಿಸಿದ್ದರು. ಮುಖ್ಯಮಂತ್ರಿಯಾಗಿದ್ದಾಗ ಕುಮಾರಸ್ವಾಮಿ ಅವರು ಈ ಎಲ್ಲಾ ಖಾಸಗಿ ಜಮೀನಿನಲ್ಲಿ ಯಾವುದೇ ಪ್ರಾಧಿಕಾರವಾಗಲಿ, ವ್ಯಕ್ತಿಯಾಗಲಿ, ಬಿಡಿಎ ವತಿಯಿಂದ ಪೂರ್ವಾನುಮತಿ ಪಡೆಯದೆ ಅಭಿವೃದ್ಧಿಗೆ ಅನುಮತಿ ನೀಡತಕ್ಕದ್ದಲ್ಲ ಎಂದು ಗೆಜೆಟ್ ನೋಟಿಫಿಕೇಶನ್ ಹೊರಡಿಸಿ ರೆಡ್‌ಜೋನ್ ಎಂದು ಗುರುತಿಸಿದ್ದರು ಎಂದು ದಾಖಲೆಗಳನ್ನು ತೋರಿಸಿದರು. ಇಷ್ಟು ಮಾತ್ರವಲ್ಲದೆ, ಗ್ರಾಮಠಾಣಾದಲ್ಲಿರುವ ಆಸ್ತಿ, ಮನೆಗಳು ಸೇರಿದಂತೆ ಒಕ್ಕಲೆಬ್ಬಿಸಲು, ಪರಿಹಾರ ಮೊತ್ತ ಘೋಷಿಸಿ ಆದೇಶ ಹೊರಡಿಸಿದ್ದರು. ಖಾಸಗಿ ಡೆವಲಪರ್ ಡಿಎಲ್‌ಎಫ್ ಗೆ ಪತ್ರ ಬರೆದು ರೂ. 400 ಕೋಟಿ ಸೆಕ್ಯೂರಿಟಿ ಡೆಪಾಸಿಟ್ ದುಡ್ಡು ಕಟ್ಟಿಸಿಕೊಂಡು ರಿಯಲ್ ಎಸ್ಟೇಟ್‌ಗೆ ಅವಕಾಶ ಕೊಟ್ಟಿದ್ದರು. ಈಗ ಹೇಳಿ ಕುಮಾರಣ್ಣಾ, ರಿಯಲ್ ಎಸ್ಟೇಟ್ ದಂಧೆ ಯಾರು ಮಾಡಿದ್ದು, ನಾನಾ ಎಂದು ಡಿ.ಕೆ. ಶಿವಕುಮಾರ್ ಪ್ರಶ್ನಿಸಿದರು.

2010ರಲ್ಲಿ ಯಡಿಯೂರಪ್ಪ ಅವರು ಸಮಗ್ರವಾದ ಉಪನಗರ ಯೋಜನೆ ಮುಂದುವರೆಸಲು ಎರಡನೇ ಬಾರಿ ಜಾಗತಿಕ ಟೆಂಡರ್ ಕರೆದು ಪಿಪಿಪಿ ಮಾದರಿಯಲ್ಲಿ ಅನುಷ್ಠಾನಕ್ಕೆ ಮುಂದಾದರು. ಆಗ ಸಹ ಅಶೋಕ್ ಅವರು ಸಚಿವರಾಗಿದ್ದರು. ರೈತರ ಆಸ್ತಿಯನ್ನು ಕಬಳಿಸಲು ನೀವು ನಡೆಸಿರುವ ಸಂಚನ್ನು ಎಷ್ಟು ದಿನ ಮುಚ್ಚಿಕೊಳ್ಳಲು ನಿಮಗೆ ಸಾಧ್ಯವಿದೆ. ರೈತ ಮಹಿಳೆಯರ ಬದುಕನ್ನು ಕಸಿದುಕೊಳ್ಳುವ ಕಾರ್ಯವನ್ನು ನಮ್ಮ ಸರ್ಕಾರ ಮಾಡಿಲ್ಲ. ಬಲವಂತವಾಗಿ ನಿಮ್ಮ ಜಮೀನು ತೆಗೆದುಕೊಳ್ಳುವ ಅವಶ್ಯಕತೆ ನಮ್ಮ ಸರ್ಕಾರಕ್ಕಿಲ್ಲ. ಇದರಲ್ಲಿ ಯಾರಿಗೂ ಬಲವಂತವಿಲ್ಲ. ಇಷ್ಟವಿದ್ದರೆ ರೈತರು ಪರಿಹಾರ ಪಡೆದು ತಮ್ಮ ಜಮೀನು ನೀಡಬಹುದಾಗಿದೆ. ಕುಮಾರಸ್ವಾಮಿ, ಯಡಿಯೂರಪ್ಪ ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಪ್ರಾರಂಭಿಸಿದ್ದ ಯೋಜನೆಯನ್ನು ಮುಂದುವರೆಸಿಕೊಂಡು ಹೋಗುತ್ತಿದ್ದೇವೆ ಅಷ್ಟೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಚಿವರಾದ ಎಂ.ಬಿ.ಪಾಟೀಲ್, ಶಾಸಕ ಬಾಲಕೃಷ್ಣ, ರಾಜಕೀಯ ಸಲಹೆಗಾರ ಜಿ.ಸಿ.ಚಂದ್ರಶೇಖರ್ ಮತ್ತಿತರರು ಉಪಸ್ಥಿತರಿದ್ದರು.

## ಭೂಮಿ ಕಸಿಯಲು ನೋಟಿಫಿಕೇಷನ್ ಹೊರಡಿಸಿರುವುದು ಅಮಾನವೀಯ: ಎಚ್‌ಡಿಕೆ

ಉಪನಗರ ನೆಪದಲ್ಲಿ ತಮ್ಮಿಂದ ಕಿತ್ತುಕೊಳ್ಳುವ ಜಮೀನು ಕೊನೆಗೆ ಯಾರ ಪಾಲಾಗುತ್ತದೆ ಎಂಬುದು ಕೂಡ ರೈತರಿಗೆ ತಿಳಿಯುತ್ತಿದೆ ಎಂದು ಕುಮಾರಸ್ವಾಮಿ ಕಿಡಿಕಾರಿದರು.

ನೀಡುವ ಮಾಡುತ್ತಿರುವ ಮಹಾಪಾಪಕ್ಕೆ ನನ್ನನ್ನು ಅಣ್ಣ ಮಾಡಿಕೊಳ್ಳುವುದು ಬೇಡ. ಜನರೇ ಈ ಯೋಜನೆಯನ್ನು ಬೇಡ ಎನ್ನುತ್ತಿದ್ದಾರೆ. ಹೀಗಾಗಿ ಅದನ್ನು ಕೈ ಬಿಡಿ ಎಂದಷ್ಟೇ ಒತ್ತಾಯ ಮಾಡುತ್ತಿದ್ದೇನೆ ಎಂದು ಹೇಳಿದರು.

ನೊಂದ ರೈತರನ್ನು ಏಜೆಂಟುಗಳೆಂದು ಎಂದು ಕರೆಯಬೇಡಿ. ಹಾಗೆ ಕರೆಯುವುದು ರೈತರಿಗೆ ನೀವು ಮಾಡುವ ಅವಮಾನ. ಎಂ.ಬಿ.ಪಾಟೀಲ್ ಅವರು ಕೈಗಾರಿಕಾ ಸಚಿವರಾಗಿದ್ದರು, ಹಾಗಾದರೆ ಅವರು ಯಾವ ಏಜೆಂಟ್ ಗಳನ್ನು ಇಟ್ಟುಕೊಂಡಿದ್ದರು? ನಾನು ಯಾವ ಏಜೆಂಟ್ ಗಳನ್ನು ಇಟ್ಟುಕೊಂಡಿಲ್ಲ, ಇಟ್ಟುಕೊಳ್ಳುವುದೂರ ಇಲ್ಲ. ಅದೇನಿದ್ದರೂ ನಿಮ್ಮಂತವರ ಸಂಸ್ಕೃತಿ ಎಂದು ಸಿಎಂ ಡಿಕೆಶಿಗೆ ಸಚಿವರು ತಿರುಗೇಟು ನೀಡಿದರು.

**ಯಾರು ಏನು ಮಾಡುತ್ತಿದ್ದಾರೆ ಎಂದು ನೋಡುವಷ್ಟು ಪುರುಸೊತ್ತಿಲ್ಲ**

ಕರ್ನಾಟಕದಲ್ಲಿ ಯಾರು ಮುಖ್ಯಮಂತ್ರಿ ಯಾರು? ಏನೇನೋ ಮಾಡುತ್ತಿದ್ದಾರೆ? ಎಂದು ನೋಡಿಕೊಂಡು ಕೂರುವಷ್ಟು ಸಮಯ ನನಗಿಲ್ಲ. ನಿಮ್ಮ ಮೇಲೆ ಹೊಟ್ಟೆ ಉರಿ ಪಡುವುದಕ್ಕೂ ನನಗೆ ಪುರುಸೊತ್ತು ಇಲ್ಲ. ನಿಮಗೇನಾದರೂ ಪುರುಸೊತ್ತು ಇದ್ದರೆ ಹೊಟ್ಟೆ ಉರಿ ಪಟ್ಟುಕೊಳ್ಳಿ. ಮುಖ್ಯಮಂತ್ರಿ ಆಗಿದ್ದೀರಿ, ಜನತೆಯಿಂದ ವರ್ತಿಸುವುದನ್ನು ಕಲಿತುಕೊಳ್ಳಿ..ಈ ರೀತಿ ಲಘುವಾಗಿ ಮಾತಾಡುವುದು ನಿಲ್ಲಿಸಿ ಮುಖ್ಯಮಂತ್ರಿಗಳೇ.. ನನಗೆ ಮತ ಕೊಟ್ಟ ಜನ ಅವರು. ಅವರ ಮನಸ್ಸಿಗೆ ನೋವು ಕೊಟ್ಟು ಒಕ್ಕಲೆಬ್ಬಿಸುವುದಿಲ್ಲ ಅಂತ ಅವತ್ತು ತೀರ್ಮಾನ ಮಾಡಿದ್ದೆ. ನಿಮಗೆ ತಾಕತ್ತಿದ್ದರೆ ಜನರ ಭೂಮಿಯನ್ನು ಬಿಟ್ಟುಬಿಡಿ ನೋಡೋಣ ಎಂದು ಸವಾಲು ಹಾಕಿದರು. ಅವತ್ತು ಯೋಜನೆಯನ್ನು ನಾನು ಸ್ಕ್ರಾಪ್ ಮಾಡಿದಾಗ ಏನೇನು ನಡೆಯಿತು ಎಂಬುದು ಪ್ರತಿಯೊಂದು ದಾಖಲೆಯಲ್ಲಿದೆ. ಡಿಎಲ್ ಎಫ್ ಬಗ್ಗೆ ಮಾತನಾಡಿದ್ದೀರಿ. ಮೇಲೆ ಬಗ್ಗೆ ಯಾರಿಗೆ ಯಾವ ರೀತಿಯ ಸಂಬಂಧವಿದೆ ಎಂಬುದು ಇಡೀ ಜಗತ್ತಿಗೆ ಗೊತ್ತು ಸಮಯ ಬಂದಾಗ ಅದರ ಬಗ್ಗೆಯೂ ಬಿಚ್ಚಿಡೋಣವಂತೆ ಎಂದು ಮುಖ್ಯಮಂತ್ರಿ ಡಿಕೆಶಿಗೆ ಸಚಿವ ಕುಮಾರಸ್ವಾಮಿ ಅವರು ನೇರವಾಗಿ ತಿರುಗೇಟು ನೀಡಿದರು

**ಅಧಿಕಾರ ಶಾಶ್ವತವಲ್ಲ**

ಪದೇಪದೆ ಜೈಲಿಗೆ ಹೋಗಿದ್ದೆ.. ಜೈಲಿಗೆ ಹೋಗಿದ್ದೆ.. ಎಂದು ಹೇಳಿಕೊಳ್ಳುತ್ತಾರೆ. ಅವರೇನು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಟ ಮಾಡಿ ಜೈಲಿಗೆ ಹೋಗಿದ್ದರಾ. ಸತ್ಯ ಒಂದಲ್ಲ ಒಂದು ದಿನ ಹೊರಗಡೆ ಬರುತ್ತದೆ, ಬಹಳ ದಿನ ಬೇಕಾಗಿಲ್ಲ. ಅವರು ಬಂದ ಹಿನ್ನೆಲೆ ನೋಡಿದರೆ ಅವರ ಬಗ್ಗೆ ತಿಳಿಯುತ್ತದೆ. ನೀವು ಮಾತಾಡುವಾಗಲೂ ನಿಮ್ಮ ಮುಖದಲ್ಲಿ ಭಯ, ಪಾಪಪ್ರಜ್ಞೆ ಎದ್ದು ಕಾಣುತ್ತದೆ. ನಿಮ್ಮದು ಕಟುಕ ಹೃದಯ. ನಿಮಗೆ ಯಾವ ನೋವು ಆಗುತ್ತದೆ? ಕುಮಾರಕೃಪ ಪರಂಪಾರಿಕ ಕಟ್ಟಡಕ್ಕೆ ಅನ್ಯಾಯ ಮಾಡಿದ್ದಿರಿ. ನಿಮ್ಮ ಪಾಪದ ಕೊಡ ತುಂಬುತ್ತಿದೆ. ಅಧಿಕಾರ ನಿಮ್ಮ ಒಬ್ಬರ ಸ್ವತ್ತಲ್ಲ, ನಿಮಗೆ ಅದು ಶಾಶ್ವತವೂ ಅಲ್ಲ. ನಿಮಗೆ ಪಾಠ ಕಲಿಸಲು ರಾಜ್ಯದ ಜನ ಕಾಯುತ್ತಿದ್ದಾರೆ ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

**ನಾನು ಬಿಡದಿ ಯೋಜನೆಯನ್ನು ರದ್ದು ಮಾಡಿದ್ದೆ:**

2006ರಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಬೆಂಗಳೂರು ನಗರದ ಮೇಲೆ ಒತ್ತಡ ಕಡಿಮೆ ಮಾಡಲು ಐದು ಟೌನ್ಶಿಪ್ ಮಾಡಲು ಯೋಜನೆ ಮಾಡಿದ್ದು ನಾನೇ ಗೌರವಾನ್ವಿತ ಮುಖ್ಯಮಂತ್ರಿ ಅವರೇ.., ಈ ಯೋಜನೆ ಮಾಡುವಾಗ ಬಿಡದಿ ಭಾಗದಲ್ಲಿ ಮೂರು ಬಾರಿ ಸಭೆ ಮಾಡಿದ್ದೆ. ಕೃಷ್ಣ ಕಚೇರಿಯಲ್ಲಿ ರೈತರನ್ನು ಕರೆದು ಚರ್ಚೆ ಮಾಡಿದ್ದೆ.

ಇಂತಹ ದಮ್ಮು ತಾಕತ್ತು ನಿಮಗೆ ಇದೆಯಾ? ರೈತರ ಜೊತೆ ಚರ್ಚೆ ಮಾಡುವ ಕನಿಷ್ಠ ಸೌಜನ್ಯವನ್ನು ನೀವು ತೋರಿಸಿದ್ದೀರಾ? ಅಂದು ವಿಶೇಷ ಕೈಗಾರಿಕಾ ವಲಯಗಳನ್ನು (SEZ) ನಿರ್ಮಿಸಲು ಮಾಡುವುದಕ್ಕಾಗಿ ಆಗ ಅಧಿಕಾರದಲ್ಲಿದ್ದ ನಿಮ್ಮದೇ ಪಕ್ಷದ ಕೇಂದ್ರ ಸರ್ಕಾರ ರಾಜ್ಯದ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿತ್ತು. ನಾನು ಜನರನ್ನು ಮನವೊಲಿಸಿ ಭೂಮಿ ಪಡೆದುಕೊಳ್ಳುವ ಬಗ್ಗೆ ಪ್ರಯತ್ನ ಮಾಡಿದೆ. ನಿಮ್ಮ ಹಾಗೆ ದುರ್ವರ್ತನೆ, ದಬ್ಬಾಳಿಕೆ ತೋರಲಿಲ್ಲ. ನೂರಾರು ವರ್ಷಗಳಿಂದ ಆ ಮಣ್ಣನ್ನೇ ನಂಬಿ ಬದುಕಿ ಬಾಳುತ್ತಿರುವ ಜನರನ್ನು ಅಲ್ಲಿಂದ ಹೊರಕ್ಕೆ ಹಾಕಲು ನಾನು ಪ್ರಯತ್ನಿಸಲಿಲ್ಲ. ನೋಟಿಫಿಕೇಷನ್ ಮಾಡುವ ಮುಂಚೆ ರೈತರ ಜೊತೆ ಮಾತುಕತೆ ನಡೆಸಬೇಕು ಎನ್ನುವ ಕನಿಷ್ಠ ಜ್ಞಾನ ನಿಮಗೆ ಇಲ್ಲದಾಯಿತಲ್ಲ ಎಂದು ಸಚಿವ ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ವಿರುದ್ಧ ವಾಗ್ದಾಳಿ ನಡೆಸಿದರು.

## ವಿಜಯಾನಂದ ಕಾಶಪ್ಪನವರಿಗೆ ಕೃಪೆ ತೋರುವರೇ ಡಿ.ಕೆ. ಶಿವಕುಮಾರ್?

ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನವನ್ನು ಬೇರೆಯವರಿಗೆ ನೀಡಿ ಯುವ ರಾಜಕಾರಣಿ ವಿಜಯಾನಂದ ಕಾಶಪ್ಪನವರಿಗೆ ಸಚಿವ ಸಾನ ನೀಡಬೇಕು. ಇದಕ್ಕೆ, ಉಜ್ಜಯಿನಿ, ಕೇದಾರ, ಶ್ರೀಶೈಲ, ಕಾಶಿ ಜಗದ್ಗುರುಗಳ ಹೃದಯಾಂತರಾಳದ ಸಹಮತವಿದೆ. ಸಿಎಂ ಜತೆ ಮಾತನಾಡುವಾಗ ವಿಜಯಾನಂದ ಕಾಶಪ್ಪನವರ ಬಗ್ಗೆ ಡಿ.ಕೆ.ಶಿವಕುಮಾರ್ ಅವರಿಗೆ ಅಭಿಮಾನ, ಒಲವು ಇದೆ. ಸಚಿವ ಸ್ಥಾನ ನೀಡುವ ಬಗ್ಗೆಯೂ ಮುಖ್ಯಮಂತ್ರಿಗಳು ಪ್ರಸ್ತಾಪ ಮಾಡಿದ್ದಾರೆ. ವಿಜಯಾನಂದ ಕಾಶಪ್ಪನವರಿಗೆ ಸಚಿವ ಸ್ಥಾನ ಒದಗಿಸಿ ರಾಜ್ಯದ ಜನರ ಸೇವೆ ಅನುವು ಮಾಡಿಕೊಡುವಂತೆ ರಂಭಾಪುರಿ ಪೀಠದ ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ ಒತ್ತಾಯಪೂರ್ವಕವಾಗಿ ಹೇಳಿದ್ದಾರೆ.

ಎಸ್.ಆರ್. ಕಂಠಿ ಮತ್ತು ಬಿ.ಡಿ. ಜತ್ತಿ ಅವರ ಕಾಲದಲ್ಲಿ ವೀರಶೈವ ಲಿಂಗಾಯತ ಪ್ರಾಬಲ್ಯ ಹೆಚ್ಚಿತ್ತು. ಪ್ರಸ್ತುತ ವೀರಶೈವ ಲಿಂಗಾಯತ ಒಳಪಂಗಡಗಳಲ್ಲಿನ ಭಿನ್ನಾಭಿಪ್ರಾಯಗಳಿಂದಾಗಿ ಮುಖ್ಯಮಂತ್ರಿ ಸ್ಥಾನದಿಂದ ವಂಚಿತರಾಗಿದ್ದೇವೆ. ವಿಜಯಾನಂದ ಕಾಶಪ್ಪನವರ ಅವರು ಸಮುದಾಯದಲ್ಲಿನ ಒಳಪಂಗಡಗಳಲ್ಲಿನ ಭಿನ್ನಾಭಿಪ್ರಾಯಗಳನ್ನು ಶಮನಗೊಳಿಸಿ ಒಂದುಗೂಡಿಸಿಕೊಂಡು ಮುನ್ನಡೆದರೆ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿಯಾಗುವುದರಲ್ಲಿ ಸಂದೇಹವಿಲ್ಲ.

ಮತ್ತೊಂದೆಡೆ ವಿಜಯಾನಂದ ಕಾಶಪ್ಪನವರಿಗೆ ರಾಜಕೀಯ ಕ್ಷೇತ್ರದಲ್ಲಿ ಯೋಗ್ಯವಾದ ಸ್ಥಾನಮಾನ ಸಿಗಬೇಕು ಎನ್ನುವಂತಹ ಒಟ್ಟು ಅಭಿಪ್ರಾಯ ವ್ಯಕ್ತವಾಗಿದೆ ಎಂದು ಕಾಶಿ ಮಹಾಪೀಠದ ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಹೇಳಿದ್ದಾರೆ.

ವಿಜಯಾನಂದ ಕಾಶಪ್ಪನವರ ಕೇವಲ ಪಂಚಮಸಾಲಿ ಅಥವಾ ವೀರಶೈವ ಲಿಂಗಾಯತ ಸಮುದಾಯಕ್ಕೆ ಮಾತ್ರವಲ್ಲ ಎಲ್ಲ ಸಮಾಜವನ್ನು ಒಟ್ಟಾಗಿ ಕೊಂಡೊಯ್ಯುವ ಶಕ್ತಿ ಅವರಿಗಿದೆ. ಹಾಗಾಗಿ ಅವರಿಗೆ ಸಚಿವ ಸ್ಥಾನ ನೀಡುವ ಬಗ್ಗೆ ಮುಖ್ಯಮಂತ್ರಿಗಳು ನಿರ್ಧಾರ ಮಾಡಬೇಕಿದೆ ಎಂದು ಪಂಚ ಪೀಠಾಧೀಶರು ಆಗ್ರಹಿಸಿದ್ದಾರೆ.

# ಟಿಟಿಡಿ ಶಿಕ್ಷಣ – ಆರೋಗ್ಯ ಕ್ಷೇತ್ರಗಳಿಗೆ ಹೆಚ್ಚಿನ ಆದ್ಯತೆ: ವಿದ್ಯಾರ್ಥಿಗಳು ಪ್ರತಿಭೆಯೊಂದಿಗೆ ಉನ್ನತ ಶಿಖರ ಏರಬೇಕು–ಬಿ.ಆರ್. ನಾಯ್ಡು ಆಶಯ

**ತಿರುಪತಿ, ಜು 15.**ಟಿಟಿಡಿ ಅಧ್ಯಕ್ಷ ಬಿ.ಆರ್. ನಾಯ್ಡು ಅವರು ಟಿಟಿಡಿಯಲ್ಲಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ ಮತ್ತು ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ ಎಂದು ಹೇಳಿದರು. ಬುಧವಾರ, ತಿರುಪತಿಯ ಮಹತಿ ಕಲಾಕ್ಷೇತ್ರದಲ್ಲಿ ಪ್ರತಿಭಾ ಪುರಸ್ಕಾರ–2026 ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, 147 ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಬಿ.ಆರ್. ನಾಯ್ಡು, ಮುಖ್ಯಮಂತ್ರಿ ನಾರಾ ಚಂದ್ರಬಾಬು ನಾಯ್ಡು ಅವರ ಸೂಚನೆಯಂತೆ ಟಿಟಿಡಿಯಲ್ಲಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳ ಅಭಿವೃದ್ಧಿಗೆ ವಿಶೇಷ ಗಮನ ನೀಡಲಾಗಿದೆ ಎಂದು ಹೇಳಿದರು. ಟಿಟಿಡಿ ವ್ಯಾಪ್ತಿಯ 33 ಶಿಕ್ಷಣ ಸಂಸ್ಥೆಗಳಲ್ಲಿ ಸುಮಾರು 20 ಸಾವಿರ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದು, ಅವರಿಗೆ ಅತ್ಯಾಧುನಿಕ ಮೂಲಸೌಕರ್ಯದೊಂದಿಗೆ ಗುಣಮಟ್ಟದ ಶಿಕ್ಷಣವನ್ನು ಒದಗಿಸಲಾಗುತ್ತಿದೆ ಎಂದು ಅವರು ಹೇಳಿದರು. ವಿದ್ಯಾರ್ಥಿಗಳು ಶಿಖರಗಳನ್ನು ಏರಿ, ಶಿಖರಗಳನ್ನು ಏರಿ, ಸಮಾಜಕ್ಕೆ ಮಾದರಿಯಾಗಬೇಕೆಂದು ಅವರು ಕರೆ ನೀಡಿದರು.

ಟಿಟಿಡಿ ಇಓ ಮುದ್ದಾಡ ರವಿಚಂದ್ರ ಅವರು, ಶಿಕ್ಷಣವು ಜೀವನವನ್ನು ಬದಲಾಯಿಸುವ ಶಾಶ್ವತ ಆಸ್ತಿಯಾಗಿದ್ದು, ಅದನ್ನು ಯಾರೂ ಕಸಿದುಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದರು. ಗ್ರಾಮೀಣ ಮತ್ತು ರೈತ ಕುಟುಂಬಗಳ ವಿದ್ಯಾರ್ಥಿಗಳು ಟಿಟಿಡಿ ಒದಗಿಸುವ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಉನ್ನತ ಹುದ್ದೆಗಳನ್ನು ತಲುಪಬೇಕು ಎಂದು ಅವರು ಆಶಿಸಿದರು. ಟಿಟಿಡಿ ಶಿಕ್ಷಣ ಸಂಸ್ಥೆಗಳನ್ನು ಕಾರ್ಪೊರೇಟ್ ಶಿಕ್ಷಣ ಸಂಸ್ಥೆಗಳಿಗೆ ಹೋಲಿಸಲು ಅಗತ್ಯವಾದ ಅಧ್ಯಾಪಕರು, ಮೂಲಸೌಕರ್ಯ, ಪೌಷ್ಟಿಕ ಆಹಾರ ಮತ್ತು ಗುಣಮಟ್ಟದ ಬೋಧನೆಯನ್ನು ಒದಗಿಸಲಾಗುತ್ತಿದೆ ಎಂದು ಅವರು ಹೇಳಿದರು.

ಟಿಟಿಡಿಯ 150 ವರ್ಷಗಳ ಇತಿಹಾಸದಲ್ಲಿ ಮೊದಲ ಬಾರಿಗೆ "ಪ್ರತಿಭಾ ಪುರಸ್ಕಾರ"ವನ್ನು ನೀಡುತ್ತಿರುವುದು ಐತಿಹಾಸಿಕ ಕ್ಷಣ ಎಂದು ಟಿಟಿಡಿ ಜೆಇಓ ಡಾ. ಎ. ಶರತ್ ಹೇಳಿದರು. 162 ಕೋಟಿ ರೂ.ಗಳೊಂದಿಗೆ ಶಿಕ್ಷಣ ಸಂಸ್ಥೆಗಳನ್ನು ಆಧುನೀಕರಿಸಲಾಗುತ್ತಿದೆ ಮತ್ತು ಡಿಜಿಟಲ್ ತರಗತಿ ಕೊಠಡಿಗಳು, ಕಂಪ್ಯೂಟರ್ ಲ್ಯಾಬ್‌ಗಳು, ಸಿಸಿಟಿವಿ ವ್ಯವಸ್ಥೆಗಳು ಮತ್ತು ಆಧುನಿಕ ಮೂಲಸೌಕರ್ಯಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಅವರು ಹೇಳಿದರು.

ದೇಶದ ಪ್ರಮುಖ ಶಿಕ್ಷಣ ಸಂಸ್ಥೆಗಳ ಸಹಯೋಗ 'ದೊಂದಿಗೆ ಟಿಟಿಡಿ ಶಿಕ್ಷಣ ಸಂಸ್ಥೆಗಳನ್ನು ಅತ್ಯುನ್ನತ ಗುಣಮಟ್ಟದೊಂದಿಗೆ ಅಭಿವೃದ್ಧಿಪಡಿಸ ಲಾಗುತ್ತಿದೆ. ಯೋಗ, ಸಂಗೀತ, ನೃತ್ಯ ಮತ್ತು ನೈತಿಕ ಮೌಲ್ಯಗಳನ್ನು ಕಲಿಸಲು ಆದ್ಯತೆ ನೀಡಲಾಗುತ್ತಿದೆ. ಟಿಟಿಡಿ ಮಂಡಳಿ ಸದಸ್ಯೆ ಶ್ರೀಮತಿ ಪಣಬಕ ಲಕ್ಷ್ಮಿ ಅವರು ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡೆಯಲ್ಲೂ ಉತ್ತಮ ಸಾಧನೆ ಮಾಡಬೇಕು. ಮಂಡಳಿ ಸದಸ್ಯ ಜಿ. ಭಾನು ಪ್ರಕಾಶ್ ರೆಡ್ಡಿ ಅವರು 250 ಹೆಚ್ಚುವರಿ ಸೀಟುಗಳು, ಹಗಲು ವಿದ್ಯಾರ್ಥಿಗಳಿಗೆ ಮಧ್ಯಾಹ್ನ ಊಟ ಯೋಜನೆ ಮತ್ತು ಹೊಸ ಶೈಕ್ಷಣಿಕ ಕಟ್ಟಡಗಳ ನಿರ್ಮಾಣದ ಮೂಲಕ ಹೆಚ್ಚಿನ ಜನರಿಗೆ ಗುಣಮಟ್ಟದ ಶಿಕ್ಷಣವನ್ನು ಒದಗಿಸುತ್ತಿದ್ದಾರೆ ಎಂದು ಹೇಳಿದರು.

ಟಿಟಿಡಿ ವಿದ್ಯಾದಾನ ಟ್ರಸ್ಟ್ ಮೂಲಕ 162 ಕೋಟಿ ರೂ.ಗಳ ಮೊತ್ತದಲ್ಲಿ ಶಿಕ್ಷಣ ಸಂಸ್ಥೆಗಳಲ್ಲಿ ಆಧುನಿಕ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಮಂಡಳಿ ಸದಸ್ಯ ಎನ್. ಸದಾಶಿವರಾವ್ ಹೇಳಿದರು.


ಈ ಸಂದರ್ಭದಲ್ಲಿ, ಎಸ್‌ವಿ ಜೂನಿಯರ್ ಕಾಲೇಜು, ಪದ್ಮಾವತಿ ಮಹಿಳಾ ಜೂನಿಯರ್ ಕಾಲೇಜಿನ 76 ಮಧ್ಯಂತರ ವಿದ್ಯಾರ್ಥಿಗಳು ಮತ್ತು ತಿರುಪತಿ ಮತ್ತು ತಿರುಮಲದ ವಿವಿಧ ಟಿಟಿಡಿ ಶಾಲೆಗಳ 71 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ರಾಜ್ಯ ಮಟ್ಟದಲ್ಲಿ ಶೇ 99 ಅಂಕಗಳನ್ನು ಗಳಿಸಿದ್ದಕ್ಕಾಗಿ ಎಸ್‌ಪಿಡಬ್ಲ್ಯೂ ಜೂನಿಯರ್ ಕಾಲೇಜಿನ ಕುಮಾರಿ ಪ್ರಣವಿ, ಕುಮಾರಿ ಉತ್ಪಲಾ ಮತ್ತು ಕುಮಾರಿ ನೇಹಶ್ರೀ ಅವರನ್ನು ಅಧ್ಯಕ್ಷರು ಮತ್ತು ಕಾರ್ಯನಿರ್ವಾಹಕ ಅಧಿಕಾರಿ ವಿಶೇಷವಾಗಿ ಅಭಿನಂದಿಸಿದರು. ಪ್ರತಿಭೆ ತೋರಿಸಿದ 147 ವಿದ್ಯಾರ್ಥಿಗಳಿಗೆ ಐದು ಗ್ರಾಂ ಬೆಳ್ಳಿ ಡಾಲರ್, ಸ್ಮರಣಿಕೆ, ಶಾಲು ಮತ್ತು ಪ್ರಶಂಸಾ ಪತ್ರವನ್ನು ನೀಡಲಾಯಿತು.

ನಂತರ, ವಿದ್ಯಾರ್ಥಿಗಳು ತಮ್ಮ ಶಿಕ್ಷಕರನ್ನು ಗೌರವಿಸುವುದಾಗಿ, ಶಿಸ್ತಿನಿಂದ ಕಠಿಣ ಅಧ್ಯಯನ ಮಾಡುವುದಾಗಿ ಮತ್ತು ಉನ್ನತ ಗುರಿಗಳನ್ನು ಸಾಧಿಸುವುದಾಗಿ ಪ್ರತಿಜ್ಞೆ ಮಾಡಿದರು. ನಂತರ, ಡಿಇಓ ಡಿ. ಫಣಿಕುಮಾರ್ ನಾಯ್ಡು ಧನ್ಯವಾದ ಅರ್ಪಿಸಿದರು. ಪಿಆರ್‌ಓ(ಎಫ್‌ಎಸಿ) ಕುಮಾರಿ ನೀಲಿಮಾ ಕಾರ್ಯಕ್ರಮದ ನಿರೂಪಕರಾಗಿದ್ದರು.

ನಂತರ, ಪ್ರತಿಭಾ ಪ್ರಶಸ್ತಿಗಳನ್ನು ಪಡೆದ ವಿದ್ಯಾರ್ಥಿಗಳೊಂದಿಗೆ ಗುಂಪು ಫೋಟೋ ತೆಗೆಯಲಾಯಿತು ಮತ್ತು ನಂತರ ಅವರು ಅವರೊಂದಿಗೆ ಸಂವಾದ ನಡೆಸಿದರು.

# ಹುಲಸೂರು ಪಟ್ಟಣದಲ್ಲಿ ಹುಚ್ಚುಮಂಗದ ಅಟ್ಟಹಾಸ

**ಬೀದರ, ಜು. 15:** ಜಿಲ್ಲೆಯ ಹುಲಸೂರ್ ಪಟ್ಟಣದಲ್ಲಿ ಕೋತಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಕಳೆದ ಎರಡು ದಿನಗಳಿಂದ ಹುಚ್ಚು ಮಂಗವೊಂದು ಸಾರ್ವಜನಿಕರ ಮೇಲೆ ಅಪ್ರಚೋದಿತವಾಗಿ ದಾಳಿ ನಡೆಸಿ ಗಾಯಗೊಳಿಸುವ ಮೂಲಕ ಆತಂಕ ಸೃಷ್ಟಿಸುತ್ತಿದೆ. ಇಂದು ಒಂದೇ ದಿನ ಸುಮಾರು ಎಂಟು ಮಂದಿಗೆ ಮಂಗ ದಾಳಿ ನಡೆಸಿ ಅವರಿಗೆ ಕಡಿದು ಗಾಯಗೊಳಿಸಿದ್ದು, ಭಕಳೆದ ಭಾನುವಾರ ಬೆಳಗ್ಗೆಯೂ ಮತ್ತೆ ಮೂರು–ನಾಲ್ಕು ಮಂದಿಗೆ ಮಂಗ ಕಚ್ಚಿರುವ ಮಾಹಿತಿ ಲಭ್ಯವಾಗಿದೆ.



ಪಟ್ಟಣದ ಕಟುಕರ ಬೀದಿ, ಹನುಮಾನ ದೇವಸ್ಥಾನ, ಸಂತ ರಘುನಾಥ ಮಹಾರಾಜ ಪ್ರೌಢಶಾಲೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಈ ಮಂಗದ ಉಪಟಳ ಹೆಚ್ಚಾಗಿದೆ. ಏಕಾಏಕಿ ಜನರ ಮೇಲೆ ಎರಗುತ್ತಿರುವ ಕೋತಿಯಿಂದ ಮಕ್ಕಳು, ಮಹಿಳೆಯರು ಹಾಗೂ ವೃದ್ಧರು ಭಯಭೀತರಾಗಿದ್ದಾರೆ.

ರಘುನಾಥ ಮಹಾರಾಜ ಸಂಸ್ಥಾನ ಮಠದ ಸಮೀಪದ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ದೇವಾನಂದ ಮುಸ್ತಾಪುರೆ ಅವರ ಮೇಲೆ ಮಂಗ ದಾಳಿ ನಡೆಸಿ ಕಾಲಿಗೆ ಬಲವಾಗಿ ಕಡಿದಿದೆ. ಗಾಯದಿಂದ ತೀವ್ರ ರಕ್ತಸ್ರಾವ ಉಂಟಾಗಿದ್ದು, ಸ್ಥಳೀಯರು ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿದ್ದಾರೆ. ಇದೇ ರೀತಿ ಇಬ್ಬರು ಮಹಿಳೆಯರು ಸೇರಿದಂತೆ ಇನ್ನೂ ಐದು ಮಂದಿಗೂ ಮಂಗ ಕಡಿದು ಗಾಯಗೊಳಿಸಿದೆ.

ಸಂತ ರಘುನಾಥ ಮಹಾರಾಜ ಸಂಸ್ಥಾನ ಮಠದ ಆವರಣದ ಮರಗಳಲ್ಲಿ ಸುಮಾರು 50ಕ್ಕೂ ಹೆಚ್ಚು ಮಂಗಗಳು ನೆಲೆಸಿದ್ದು, ಪ್ರತಿದಿನ ಬೆಳಗ್ಗೆ ಮಠಕ್ಕೆ ಆಗಮಿಸುವ ಭಕ್ತರು ಹಾಗೂ ಸಮೀಪದ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ತೊಂದರೆ ಉಂಟು ಮಾಡುತ್ತಿವೆ. ಶಾಲೆಗೆ ತೆರಳುವ ಮಕ್ಕಳು ಹಾಗೂ ಪಾದಚಾರಿಗಳು ಭಯದಲ್ಲೇ ಸಂಚರಿಸುವಂತಾಗಿದೆ.

ಮಂಗಗಳ ಸಂಖ್ಯೆ ಹೆಚ್ಚುತ್ತಿರುವುದರ ಜೊತೆಗೆ ಅವುಗಳಲ್ಲಿ ಒಂದು ಮಂಗ ಅಸಹಜ ವರ್ತನೆ ತೋರುತ್ತಿದ್ದು, ಕಾರಣವಿಲ್ಲದೆ ಜನರ ಮೇಲೆ ದಾಳಿ ನಡೆಸುತ್ತಿರುವುದರಿಂದ ಸಾರ್ವಜನಿಕರಲ್ಲಿ ಆತಂಕ ಮತ್ತಷ್ಟು ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಮಂಗಗಳನ್ನು ಸುರಕ್ಷಿತವಾಗಿ ಸೆರೆಹಿಡಿದು ಬೇರೆಡೆ ಸ್ಥಳಾಂತರಿಸುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ.

**ಸಾರ್ವಜನಿಕರ ಆಗ್ರಹ:** ಮಕ್ಕಳು ಶಾಲೆಗೆ ಹೋಗುವುದಕ್ಕೂ ಭಯಪಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಭಕ್ತರು ಮತ್ತು ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಅರಣ್ಯ ಇಲಾಖೆ ಕೂಡಲೇ ಕ್ರಮ ಕೈಗೊಂಡು ಮಂಗಗಳ ಹಾವಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಬಿಡದಿ ಟೌನ್‌ಶಿಪ್ ಬಗ್ಗೆ ತಲೆಕೆಡಿಸಿಕೊಳ್ಳದೇ ಉತ್ತರ ಕರ್ನಾಟಕದ ಅಭಿವೃದ್ಧಿ ಕಡೆ ಗಮನ ಕೊಡಿ: ವಿಜಯೇಂದ್ರ

**ಕಲಬುರಗಿ, ಜು. 15:** ಬಿಡದಿಯ ರೈತರನ್ನು ಬೀದಿಗೆ ತಂದು ಜಮೀನು ಕಸಿದುಕೊಳ್ಳುವ ಭ್ರಮೆಯಲ್ಲಿ ಮುಖ್ಯಮಂತ್ರಿಗಳು ಇದ್ದಲ್ಲಿ ಆ ಭ್ರಮೆಯಿಂದ ಹೊರಕ್ಕೆ ಬಂದು ಉತ್ತರ ಕರ್ನಾಟದ ಬರಗಾಲ ಮತ್ತು ಅಭಿವೃದ್ಧಿ ಕಡೆಗೆ ಗಮನಹರಿಸಬೇಕು ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ಮಾಧ್ಯಮ ಪ್ರತಿನಿಧಿಗಳ ಜತೆ, ರಾಜ್ಯದ ಮುಖ್ಯಮಂತ್ರಿಗಳಾಗಿ ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕಾದ ಕರ್ತವ್ಯ ಅವರ ಮೇಲಿದೆ. ದಬ್ಬಾಳಿಕೆ ಮಾಡಲು ನೀವು ರಾಜ್ಯದ ಮುಖ್ಯಮಂತ್ರಿಗಳಾಗಿಲ್ಲ. ಈಗಲೂ ಕಾಲ ಮಿಂಚಿಲ್ಲ. ಜನರು ಈಗಾಗಲೇ ಬಿಡದಿ ವಿಚಾರದಲ್ಲಿ ಬೀದಿಗೆ ಇಳಿದಿದ್ದಾರೆ. ಟೌನ್‌ಶಿಪ್ ಬಗ್ಗೆ ತಲೆ ಕೆಡಿಸಿಕೊಳ್ಳದೇ ಉತ್ತರ ಕರ್ನಾಟಕದ ಅಭಿವೃದ್ಧಿ ಬಗ್ಗೆ ತಲೆ ಕೆಡಿಸಿಕೊಳ್ಳಿ ಎಂದು ಆಗ್ರಹಿಸಿದರು. ಇಲ್ಲಿ ಬಂದು ಫೋಟೊ ಹೊಡೆಸಿಕೊಂಡು ಶಿವಪೂಜೆ ಮಾಡಿದ್ದು, ಆ ಕಪಟ ನಾಟಕವಾಡಿದ್ದು ಸಾಕು. ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕದ ಅಭಿವೃದ್ಧಿ ಬಗ್ಗೆ ತಲೆಕೆಡಿಸಿಕೊಳ್ಳಿ. ರೈತರ ಬಗ್ಗೆ ತಲೆಕೆಡಿಸಿಕೊಳ್ಳಿ. ಕಾಂಗ್ರೆಸ್ ಸರ್ಕಾರ ಮತ್ತು ಮುಖ್ಯಮಂತ್ರಿಗಳಿಗೆ ರೈತರ ವಿಚಾರ ಆದ್ಯತೆ ಆಗಬೇಕೇ ವಿನಾ, ಟೌನ್‌ಶಿಪ್‌ಗಳಲ್ಲ. ರೈತರ ಭೂಮಿ ಕಸಿದುಕೊಂಡು ಟೌನ್‌ಶಿಪ್ ಮಾಡುವುದು ಅಗತ್ಯವೇ. ಟೌನ್‌ಶಿಪ್ ಖಂಡಿತ ಅಗತ್ಯವಿದೆ. ಆದರೆ, ರೈತರ ಜಮೀನು ಕಸಿದುಕೊಂಡು ಮಾಡಲು ಸಾಧ್ಯವಿಲ್ಲ ಎಂದು ಎಚ್ಚರಿಸಿದರು.

ನಿಜವಾಗಿಯೂ ನಿಮಗೆ ಅಭಿವೃದ್ಧಿಯ ಕಾಳಜಿ ಇದ್ದರೆ, ಬೆಂಗಳೂರಿನ ಅಭಿವೃದ್ಧಿಯೇ ರಾಜ್ಯದ ಅಭಿವೃದ್ಧಿ ಎಂಬ ಭ್ರಮೆಯಿಂದ ಕಾಂಗ್ರೆಸ್ ಸರ್ಕಾರ ಹೊರಕ್ಕೆ ಬರಲಿ. ಉತ್ತರ ಕರ್ನಾಟಕದ ಅಭಿವೃದ್ಧಿ ಕಡೆ ಗಮನ ಹರಿಸಲಿ ಎಂದು ಒತ್ತಾಯಿಸಿದರು.



ಬಿಡದಿ ಟೌನ್‌ಶಿಪ್ ಜತೆಗೆ ಕನಕಪುರದಲ್ಲಿ ವಿಮಾನ ನಿಲ್ದಾಣ ಮಾಡಲು ಹೊರಟಿದ್ದಾರಲ್ಲವೇ? ಇವೆರಡೂ ಒಟ್ಟೊಟ್ಟಿಗೆ ಸೇರಿಕೊಂಡಿದೆ. ಡಿ.ಕೆ.ಶಿವಕುಮಾರ್ ಅವರ ಸಾವಿರಾರು ಎಕರೆ ಜಮೀನು ಅಲ್ಲಿದೆ ಎಂದು ಜನಸಾಮಾನ್ಯರು ಮಾತನಾಡುತ್ತಿದ್ದಾರೆ. ಮುಖ್ಯಮಂತ್ರಿಗಳಿಗೆ ರೈತರ ಬಗ್ಗೆ ಆಸಕ್ತಿ ಇರಬೇಕೇ ವಿನಾ ರಿಯಲ್ ಎಸ್ಟೇಟ್ ಬಗ್ಗೆ ಅಲ್ಲ. ರಿಯಲ್ ಎಸ್ಟೇಟ್ ವಿಷಯ ಮರೆತು ರೈತರ ಬಗ್ಗೆ ಆಲೋಚಿಸಿದರೆ ಬಿಡದಿಯಲ್ಲಿ ರೈತರು ಬೀದಿಗಿಳಿದು ಹೋರಾಟ ಮಾಡುವ ಪರಿಸ್ಥಿತಿ ನಿರ್ಮಾಣ ಆಗುತ್ತಿರಲಿಲ್ಲ ಎಂದು ಟೀಕಿಸಿದರು.

ಮುಖ್ಯಮಂತ್ರಿಗಳ ಆದ್ಯತೆ ಏನೆಂದು ಇದರಲ್ಲೇ ಗೊತ್ತಾಗುತ್ತದೆ.

ಮುಖ್ಯಮಂತ್ರಿಗಳಾಗಿ ಅಧಿಕಾರ ಸ್ವೀಕರಿಸಿದ ತಕ್ಷಣ ಬಿಡದಿ ಟೌನ್‌ಶಿಪ್, ಕನಕಪುರದಲ್ಲಿ ವಿಮಾನ ನಿಲ್ದಾಣದ ನೆನಪಾಗಿದೆ. ಇದರ ಬಗ್ಗೆ ನಾವು ಮುಖ್ಯಮಂತ್ರಿಗಳಿಗೆ ಪತ್ರ ಬರೆಯಲಿದ್ದೇನೆ ಎಂದು ಹೇಳಿದರು.



ವಾರ್ಷಿಕ ಮುಂಗಾರು ಮೀನುಗಾರಿಕೆ ನಿಷೇಧದ ಸಮಯದಲ್ಲಿ ಮಂಗಳೂರು ಬಳಿಯ ಮಲ್ಪೆ ಮೀನುಗಾರಿಕಾ ಬಂದರಿನಲ್ಲಿ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ಮತ್ತು ಸಣ್ಣದೋಣಿಗಳು ಲಂಗರು ಹಾಕಿವೆ. ಮೀನುಗಾರಿಕೆ ಚಟುವಟಿಕೆಗಳು ಸ್ಥಗಿತಗೊಂಡಿರುವುದರಿಂದ ನೂರಾರು ಟ್ರಾಲರ್‌ಗಳು ಬಂದರು ಅಂಗಳದಲ್ಲಿ ನಿಂತಿವೆ, ಆದರೆ ಮೀನುಗಾರರು ಹೊಸ ಮೀನುಗಾರಿಕೆ ಋತುವಿನ ಆರಂಭದ ಮೊದಲು ನಿರ್ವಹಣೆ ಮತ್ತು ದುರಸ್ತಿಗಾಗಿ ಈ ಅವಧಿಯನ್ನು ಬಳಸುತ್ತಾರೆ.

# ಮಾತೃ ವಂದನಾ ಯೋಜನೆ ಅನುಷ್ಠಾನಕ್ಕೆ ತರಬೇತಿ ಅವಶ್ಯಕ: ರಾಜಕುಮಾರ

**ಕಲಬುರಗಿ, ಜು. 15:** ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಅಧಿಕಾರಿ ಮತ್ತು ಸಿಬ್ಬಂದಿಗೆ ಸೂಕ್ತ ತರಬೇತಿ ಅವಶ್ಯವಾಗಿದೆ. ಎಲ್ಲ ಶಿಬಿರಾರ್ಥಿಗಳೀಗೆ ಆಯೋಜಿಸಿರುವ ಈ ತರಬೇತಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಕುಮಾರ ಹೇಳಿದರು.



ನಗರದ ಸರ್ಕಾರಿ ಬಾಲಕಿಯರ ಬಾಲಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಆಶ್ರಯದಲ್ಲಿ ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯ ಸಮರ್ಪಕ ಅನುಷ್ಠಾನ ಕ್ಕಾಗಿ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ,

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ಮಾತನಾಡಿ, ರಾಜ್ಯ ಮಟ್ಟದಲ್ಲಿ ಜಿಲ್ಲೆಯಿಂದ ಆಯ್ದ ಅಧಿಕಾರಿ ಹಾಗೂ ಸಿಬ್ಬಂದಿಗೆ ಮಾಸ್ಟರ್ ಟ್ರೇನರ್ಸ್ ಎಂದು ತರಬೇತಿ ನೀಡಲಾಗಿತ್ತು. ಈಗ ರಾಜ್ಯ ಮಟ್ಟದಿಂದ ಸಂಪನ್ಮೂಲ ವ್ಯಕ್ತಿಗಳು ತರಬೇತಿ ನೀಡಲು ಬಂದಿರುವುದರಿಂದ ತರಬೇತಿಯು ಖಂಡಿತವಾಗಿ ಪರಿಣಾಮಕಾರಿ ಆಗಿದ್ದು, ಶಿಬಿರಾರ್ಥಿಗಳು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

# ಮಾದಕ ವ್ಯಸನ ಬಿಡಿ, ಆರೋಗ್ಯ ಕಾಪಾಡಿಕೊಳ್ಳಿ: ನ್ಯಾ.ಶ್ರೀನಿವಾಸ ನವಲೆ

**ಕಲಬುರಗಿ, ಜು. 15:** ವಿದ್ಯಾರ್ಥಿಗಳು ಮಾದಕ ವಸ್ತುಗಳ ವ್ಯಸನದಿಂದ ದೂರವಿದ್ದು, ಉತ್ತಮ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವ ಮೂಲಕ ಭವಿಷ್ಯ ಉಜ್ವಲಗೊಳಿಸಿಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀನಿವಾಸ ನವಲೆ ಹೇಳಿದರು.



ಡಾ.ಅಂಬೇಡ್ಕರ್ ಕಾಲೇಜ್ ಸಭಾಂಗಣದಲ್ಲಿ ಕಾಲೇಜು ಶಿಕ್ಷಣ ಇಲಾಖೆ, ಸರ್ಕಾರಿ ಮಹಾವಿದ್ಯಾಲಯ (ಸ್ವಾಯತ್ತ), ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳಸಾಗಣೆ ವಿರೋಧಿ ದಿನ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಕುರಿತು ಅರಿವು ಕಾರ್ಯಕ್ರಮ ಉದ್ಘಾಟಿಸಿ, ಮಾದಕ ವಸ್ತುಗಳ ಸೇವನೆಯು ವ್ಯಕ್ತಿಯ ಆರೋಗ್ಯ, ಕುಟುಂಬ ಹಾಗೂ ಸಮಾಜದ ಮೇಲೆ ದುಷ್ಪರಿಣಾಮ ಬೀರಲಿದೆ. ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು, ಕಾನೂನಿನ ಅರಿವಿನೊಂದಿಗೆ ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ. ರವಿಕಾಂತಿ ಎಸ್.ಕ್ಯಾತನಾಳ ಮಾತನಾಡಿದರು. ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋವೈದ್ಯ ಡಾ.ಮಹಮ್ಮದ್ ಇರ್ಫಾನ್ ಮಹಾಗಾವಿ ಅವರು ಮಾನಸಿಕ ಆರೋಗ್ಯ, ಒತ್ತಡ ನಿರ್ವಹಣೆ, ಮಾದಕ ವ್ಯಸನದ ದುಷ್ಪರಿಣಾಮ ಹಾಗೂ ಅವುಗಳಿಂದ ಹೊರಬರುವ ಮಾರ್ಗಗಳ ಕುರಿತು ಮಾಹಿತಿ ನೀಡಿದರು.

> ವಿದ್ಯಾರ್ಥಿಗಳಲ್ಲಿ ಮಾನಸಿಕ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವುದು ಇಂದಿನ ಅಗತ್ಯ. ಸಮಸ್ಯೆಗಳನ್ನು ಮುಚ್ಚಿಡದೆ ತರ ಸಲಹೆ ಪಡೆಯುವ ಮನೋಭಾವ ಬೆಳೆಸಿಕೊಳ್ಳಬೇಕು.
> – ಡಾ.ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಆರೋಗ್ಯಾಧಿಕಾರಿ, ಕಲಬುರಗಿ.

## ಕಂಬಳ ಕೂಡ ನಮ್ಮ ಸಂಸ್ಕೃತಿ ಭಾಗ, ಪ್ರಚಾರ ದೃಷ್ಟಿಯಿಂದ

# ದಸರಾದಲ್ಲಿ ಆಯೋಜಿಸಲು ಚಿಂತನೆ: ಸಚಿವ ಯತೀಂದ್ರ ಸಿದ್ದರಾಮಯ್ಯ

**ಮೈಸೂರು, ಜು.15:** ಕಂಬಳ ಕೂಡ ನಮ್ಮ ಸಂಸ್ಕೃತಿಯ ಭಾಗ ಅದನ್ನು ಮೈಸೂರು ಭಾಗಕ್ಕೂ ಪ್ರಚಾರ ಮಾಡುವ ದೃಷ್ಟಿಯಿಂದ ದಸರಾದಲ್ಲಿ ಕಂಬಳ ನಡೆಸಲು ಚಿಂತನೆ ನಡೆಸಿದ್ದು, ಈ ಬಗ್ಗೆ ಅಂತಿಮ ನಿರ್ಧಾರವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೈಗೊಳ್ಳಲಿದ್ದಾರೆ ಎಂದು ನಗರಾಭಿವೃದ್ಧಿ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಯತೀಂದ್ರ ಸಿದ್ಧರಾಮಯ್ಯ ತಿಳಿಸಿದ್ದಾರೆ.



ಚಾಮುಂಡಿ ಬೆಟ್ಟದಲ್ಲಿ ಆಷಾಢ ಶುಕ್ರವಾರದ ಸಿದ್ಧತೆಗಳನ್ನು ಪರಿಶೀಲಿಸಿದ ಬಳಿಕ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಕಂಬಳವೂ ಕರಾವಳಿ ಭಾಗದಷ್ಟೇ ರಾಜ್ಯದ ಸಾಂಸ್ಕೃತಿಕ ಪರಂಪರೆಯ ಭಾಗವಾಗಿದ್ದು, ಅದನ್ನು ಮೈಸೂರು ಭಾಗದಲ್ಲಿಯೂ ಪರಿಚಯಿಸುವ ಉದ್ದೇಶದಿಂದ ದಸರಾ ವೇಳೆ ಆಯೋಜಿಸುವ ಕುರಿತು ಚರ್ಚೆ ನಡೆಯುತ್ತಿದೆ ಎಂದರು.

ಸರ್ಕಾರ ಇನ್ನೂ ಕಂಬಳ ಆಯೋಜನೆ ಕುರಿತು ಅಂತಿಮ ತೀರ್ಮಾನ ಕೈಗೊಂಡಿಲ್ಲ. ಪ್ರತಿ ವರ್ಷ ದಸರಾದಲ್ಲಿ ಹೊಸತನ ತರಲು ಪ್ರಯತ್ನಿಸಲಾಗುತ್ತದೆ. ಈ ಬಾರಿಯೂ ಕಂಬಳ ಆಯೋಜನೆಯ ಸಾಧಕ–ಬಾಧಕಗಳ ಕುರಿತು ಸಮಗ್ರವಾಗಿ ಪರಿಶೀಲನೆ ನಡೆಸಲಾಗುತ್ತಿದ್ದು, ಎಲ್ಲರ ಅಭಿಪ್ರಾಯಗಳನ್ನು ಗೌರವಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾ ಗುವುದು ಎಂದು ಹೇಳಿದರು.


ಪರಿಸರಕ್ಕೆ ಯಾವುದೇ ಹಾನಿಯಾಗದಂತೆ ಕಾರ್ಯಕ್ರಮ ಆಯೋಜಿಸುವ ಕುರಿತು ಗಮನ ಹರಿಸಲಾಗುವುದು. ಕಂಬಳಕ್ಕೆ ಪರ–ವಿರೋಧ ಅಭಿಪ್ರಾಯಗಳು ವ್ಯಕ್ತವಾಗಿದ್ದು, ಎಲ್ಲ ಅಂಶಗಳನ್ನು ಪರಿಗಣಿಸಿ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಲಿದೆ

ಸಂಪುಟ ವಿಸ್ತರಣೆ ಕುರಿತು ಪ್ರತಿಕ್ರಿಯಿಸಿದ ಅವರು, ವಿಧಾನಪರಿಷತ್ ಹಾಗೂ ರಾಜ್ಯಸಭೆ ಚುನಾವಣೆಗಳ ಹಿನ್ನೆಲೆಯಲ್ಲಿ ವಿಳಂಬವಾಗಿದ್ದು, ಮುಖ್ಯಮಂತ್ರಿ, ಮಾಜಿ ಮುಖ್ಯಮಂತ್ರಿ ಹಾಗೂ ಪಕ್ಷದ ಹೈಕಮಾಂಡ್ ಶೀಘ್ರದಲ್ಲೇ ಅಂತಿಮ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಹೈಕಮಾಂಡ್ ಗೆ ಸೂಟ್ ಕೇಸ್ ಕೊಡುವ ಸಂಸ್ಕೃತಿ ಬಿಜೆಪಿಯವರಿಗೆ ಇದೆ ಹೊರತು ಅದು ಕಾಂಗ್ರೆಸ್ ಸಂಸ್ಕೃತಿ ಅಲ್ಲ. ಸಿಎಂ ಮಾಡಲು ಎಷ್ಟು ಹಣ ಹೈಕಮಾಂಡ್ ಗೆ ನೀಡಲಾಗಿದೆ ಎಂಬುದನ್ನು ಅವರ ಬಿಜೆಪಿ ಪಕ್ಷದವರೆ ಹೇಳಿದ್ದಾರೆ. ವಿರೋಧ ಪಕ್ಷದವರ ಆರೋಪಕ್ಕೆಲ್ಲ ಉತ್ತರ ಕೊಡುವ ಅಗತ್ಯವಿಲ್ಲ ಎಂದರು.ಸಚಿವ ಸಂಪುಟಕ್ಕೆ ಪಕ್ಷಕ್ಕೆ ನಿಷ್ಠೆ ಮತ್ತು ದಕ್ಷತೆ ಹೊಂದಿರುವವರನ್ನು ಸೇರಿಸಿಕೊಳ್ಳಲಾಗುತ್ತದೆ ಎಂದು ಈ ವೇಳೆ ಹೇಳಿದರು.

# ಕಂಪ್ಲಿ ಶಾಸಕ ಜೆ.ಎನ್. ಗಣೇಶ್ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ತನ್ನ ರಕ್ತದಿಂದ ಸಿ.ಎಂ.ಗೆ ಪತ್ರ ಬರೆದ ಯುವಕ ಎಂ.ಗಣೇಶ್

**ಬಳ್ಳಾರಿ, ಜು.15–** ಕಂಪ್ಲಿ ವಿಧಾನಸಭೆ ಕ್ಷೇತ್ರದ ಕಾಂಗ್ರೆಸ್ ಯುವ ಮುಖಂಡರಾದ ಎಂ.ಗಣೇಶ್ ಅವರು, ಕಂಪ್ಲಿ ಕ್ಷೇತ್ರದ ಶಾಸಕ ಗಣೇಶ್ ಅವರಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಂಪುಟದಲ್ಲಿ ಸಚಿವಸ್ಥಾನ ನೀಡಬೇಕೆಂದು, ಶಾಸಕ ಗಣೇಶ್ ಅವರು ಪ್ರಾಮಾಣಿಕ ವ್ಯಕ್ತಿಯಾಗಿದ್ದು, ಅವರಿಗೆ ಸಚಿವ ಸ್ಥಾನ ನೀಡಿದರೇ ಕ್ಷೇತ್ರ ಇನ್ನಷ್ಟು ಅಭಿವೃದ್ಧಿ ಕಾಣಲಿದೆ ಅಲ್ಲದೇ ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಶಕ್ತಿ ತುಂಬಿದಂತಾಗುತ್ತದೆ ಎಂದು ತನ್ನ ರಕ್ತದಿಂದ ಪತ್ರ ಬರೆದು ಎಂ.ಗಣೇಶ್ ಅವರು ಆಶಯವನ್ನು ವ್ಯಕ್ತಪಡಿಸಿದ್ದಾರೆ.



ಈ ಮನವಿಯನ್ನು ಎಂ.ಗಣೇಶ್ ಅವರ ರಕ್ತದಿಂದ ಅಪಾರ ಗೌರವ, ಅಭಿಮಾನ ಮತ್ತು ಬದ್ಧತೆಯ ಸಂಕೇತವಾಗಿ ಪತ್ರ ಬರೆದು ಸಲ್ಲಿಸಿದ್ದಾರೆ. ನನ್ನ ಈ ಮನವಿಯನ್ನು ದಯವಿಟ್ಟು ಪರಿಗಣಿಸಿ, ಸೂಕ್ತ ಕ್ರಮ ಕೈಗೊಳ್ಳುವಂತೆ ವಿನಮ್ರವಾಗಿ ಕೋರಿ ರಕ್ತದಿಂದ ಬರೆದ ಈ ಮನವಿ ಪತ್ರವನ್ನು ಡಿ.ಕೆ. ಶಿವಕುಮಾರ್ ಅವರ ಕಚೇರಿಗೆ ಅಂಚೆ ಮೂಲಕ ಕಳುಹಿಸಿಕೊಡುತಿದ್ದೇನೆ ಎಂದು ತಿಳಿಸಿದ್ದಾರೆ.

## ಷಣ್ಮುಖ ಜನ್ಮದಿನದ ಅಂಗವಾಗಿ 600 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್ ವಿತರಣೆ

# ಎಸ್‌ಎಲ್‌ಎನ್ ಸೇವಾ ಸಂಸ್ಥೆಯಿಂದ ಸಮಾಜ ಸೇವೆಯಲ್ಲಿ ಮಾದರಿಯಾದ ಷಣ್ಮುಖ



**ಬಳ್ಳಾರಿ, ಜು 15:** ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಸ್ಥಾಪಕ ಅಧ್ಯಕ್ಷ ಹಾಗೂ ಶ್ರೀಧರಗಡ್ಡ ಚಿನ್ನದ ಅಂಗಡಿ ಮಾಲೀಕ ಷಣ್ಮುಖ ತಮ್ಮ 43ನೇ ಜನ್ಮದಿನವನ್ನು ಬಳ್ಳಾರಿ ತಾಲೂಕಿನ ಕಪ್ಪಗಲ್ಲು ಸರ್ಕಾರಿ ಪ್ರೌಢಶಾಲೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಿದರು. ಈ ಸಂದರ್ಭದಲ್ಲಿ ಶಾಲೆಯ 600 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳನ್ನು ಉಚಿತವಾಗಿ ವಿತರಿಸಿದರು.

ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಮೂಲಕ ಷಣ್ಮುಖ ಅವರು ಈಗಾಗಲೇ ಬಡವರಿಗೆ ಆರ್ಥಿಕ ನೆರವು, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಸಾಮಗ್ರಿಗಳ ವಿತರಣೆ, ವೈದ್ಯಕೀಯ ಶಿಬಿರಗಳು, ಅನ್ನದಾನ, ಹಾಗೂ ವಿವಿಧ ಸಾಮಾಜಿಕ ಮತ್ತು ಧಾರ್ಮಿಕ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಿ ಜನಮನ್ನಣೆ ಗಳಿಸಿದ್ದಾರೆ.


ಕಾರ್ಯಕ್ರಮದ ಆರಂಭದಲ್ಲಿ ವಿದ್ಯಾರ್ಥಿಗಳ ಸಮ್ಮುಖದಲ್ಲಿ ಕೇಕ್ ಕತ್ತರಿಸಿ ಜನ್ಮದಿನ ಆಚರಿಸಲಾಯಿತು. ಬಳಿಕ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್‌ಗಳನ್ನು ವಿತರಿಸಿ, ಶಿಕ್ಷಣಕ್ಕೆ ತಮ್ಮ ಸಹಕಾರ ಮುಂದುವರಿಯಲಿದೆ ಎಂದು ಷಣ್ಮುಖ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ಮುಖ್ಯೋಪಾಧ್ಯಾಯರು, "ಜನ್ಮದಿನವನ್ನು ಸಮಾಜಮುಖಿ ಸೇವಾ ಕಾರ್ಯಕ್ರಮವಾಗಿ ಆಚರಿಸಿರುವುದು ಶ್ಲಾಘನೀಯ. ವಿದ್ಯಾರ್ಥಿಗಳಿಗೆ ನೀಡಿದ ಬ್ಯಾಗ್‌ಗಳು ಅವರ ಶಿಕ್ಷಣಕ್ಕೆ ನೆರವಾಗಲಿವೆ. ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಸೇವಾ ಕಾರ್ಯಗಳು ಇತರರಿಗೆ ಮಾದರಿಯಾಗಿವೆ" ಎಂದು ಪ್ರಶಂಸಿಸಿದರು.

ಈ ವೇಳೆ ಎರ್ರಗುಡಿ ಮಲ್ಲಯ್ಯ, ಕರ್ನಾಟಕ ರಕ್ಷಣಾ ವೇದಿಕೆಯ ರಘು, ಉಪ್ಪಾರ್ ಹನುಮೇಶ್, ಸೀನಾ ರಾಜು, ಸತ್ಯ, ಎರಗುಂಟ್ಲಾ ಕೃಷ್ಣ ಮಾತನಾಡಿ, "ಷಣ್ಮುಖ ಅವರು ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಮೂಲಕ ನಿರಂತರವಾಗಿ ಸಮಾಜ ಮುಖಿ ಸೇವೆ ಸಲ್ಲಿಸುತ್ತಿದ್ದು, ಯುವಜನತೆಗೆ ಪ್ರೇರಣೆಯಾಗಿದ್ದಾರೆ" ಎಂದು ಹೇಳಿದರು.

ಕೊನೆಯಲ್ಲಿ ಷಣ್ಮುಖ ಮಾತನಾಡಿ, "ನನ್ನ ಜನ್ಮದಿನವನ್ನು ಯಶಸ್ವಿಗೊಳಿಸಿದ ಶಾಲಾ ಆಡಳಿತ ಮಂಡಳಿ, ಗಣ್ಯರು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳಿಗೆ ಹೃತ್ಪೂರ್ವಕ ಧನ್ಯವಾದಗಳು. ಮುಂದೆಯೂ ಎಸ್‌ಎಲ್‌ಎನ್ ಸೇವಾ ಸಂಸ್ಥೆಯ ಮೂಲಕ ಇನ್ನಷ್ಟು ಸಮಾಜಮುಖಿ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತೇನೆ" ಎಂದು ಹೇಳಿದರು.

# ಬೀದರ ಜಿಲ್ಲಾ ಮಹಿಳಾ ಸಮ್ಮೇಳನಾಧ್ಯಕ್ಷೆ ಮಲ್ಲಮ್ಮ ಪಾಟೀಲ್‌ಗೆ ಸನ್ಮಾನ



**ಬೀದರ್, ಜು. 15:** ನಗರದಲ್ಲಿ ಈ ತಿಂಗಳ ಕೊನೆಯ ವಾರದಲ್ಲಿ ನಡೆಯಲಿರುವ ಬೀದರ್ ಜಿಲ್ಲಾ ಮಟ್ಟದ ತೃತೀಯ ಮಹಿಳಾ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಮಲ್ಲಮ್ಮ ಆರ್.ಪಾಟೀಲ ಅವರನ್ನು ಸನ್ಮಾನಿಸಲಾಯಿತು. ನಗರದ ಲೆಕ್ಚರರ್ ಕಾಲೋನಿಯಲ್ಲಿರು ಮಲ್ಲಮ್ಮ ಅವರ ನಿವಾಸಕ್ಕೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಪದಾಧಿಕಾರಿಗಳು ಭೇಟಿ ನೀಡಿ ಅವರನ್ನು ಪೇಟ, ಶಾಲು ಹೊದಿಸಿ ಸನ್ಮಾನಿಸಲಾಯಿತು.

# ಭಾರತದ ಸಂವಿಧಾನ ವಿಶ್ವಕ್ಕೆ ಮಾದರಿ : ಕುಲಪತಿ ಪ್ರೊ. ಕೆ.ಸಿ.ವೀರಣ್ಣ



**ಬೀದರ್, ಜು. 15:** ಭಾರತರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳು ಕೇವಲ ಸಂವಿಧಾನ ರಚನೆಗೆ ಸೀಮಿತವಾಗದೇ, ಸಮಾನತೆ, ಶಿಕ್ಷಣ, ಸಾಮಾಜಿಕ ನ್ಯಾಯ ಮತ್ತು ಪ್ರಜಾಸತ್ತಾತ್ಮಕ ಮೌಲ್ಯಗಳ ಸದೃಢ ಅಡಿಪಾಯವಾಗಿದ್ದು, ಇವೆಲ್ಲವುಗಳಿಂದ ಭಾರತದ ಸಂವಿಧಾನ ವಿಶ್ವಕ್ಕೆ ಮಾದರಿಯಾಗಿದೆ ಎಂದು ಪಶು ವೈದ್ಯಕಿಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಕೆ.ಸಿ.ವೀರಣ್ಣ ಹೇಳಿದರು.

ನಗರದ ಪಶುವೈದ್ಯಕಿಯ ವಿಶ್ವವಿದ್ಯಾಲಯ ಆವರಣದಲ್ಲಿ –ಕರ್ನಾಟಕ ಪಶು ವೈದ್ಯಕಿಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕೋಶ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಬೋಧಕ ಹಾಗೂ ಬೋಧಕೇತರ ನೌಕರರ ಸಂಘದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಯನ್ನು ಅನಾವರಣಗೊಳಿಸಿ ಮಾತನಾಡಿದ ಅವರು, ಇಂದಿನ ಯುವಜನತೆ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಡಾ.ಅಂಬೇಡ್ಕರ್‌ರ ದೂರದೃಷ್ಟಿಯ ಫಲವಾಗಿ ದೇಶಕ್ಕೆ ವಿಶ್ವದ ಶ್ರೇಷ್ಠ ಸಂವಿಧಾನ ದೊರೆತಿದೆ. ಸಂವಿಧಾನದಲ್ಲಿ ಅಡಕವಾಗಿರುವ ಸಮಾನತೆ, ಸ್ವಾತಂತ್ರ್ಯ ಮತ್ತು ಭ್ರಾತೃತ್ವದ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದರು.

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕ ಡಾ.ಅಪ್ಪಗೆರೆ ಸೋಮಶೇಖರ ವಿಶೇಷ ಉಪನ್ಯಾಸ ನೀಡಿ, ಡಾ.ಅಂಬೇಡ್ಕರ್‌ರ ವಿಚಾರಧಾರೆಗಳು, ಭಾರತೀಯ ಸಂವಿಧಾನದ ರೂಪುರೇಷ ಹಾಗೂ ಸಮಕಾಲೀನ ಸಮಾಜದಲ್ಲಿ ಅವರ ಚಿಂತನೆಗಳ ಪ್ರಸ್ತುತತೆಯನ್ನು ವಿಶ್ಲೇಷಿಸಿದರು.

ಡಾ. ಅಂಬೇಡ್ಕರ್ ಅವರು ಸಂವಿಧಾನದ ಶಿಲ್ಪಿಯಷ್ಟೇ ಅಲ್ಲ. ಅವರು ಅರ್ಥಶಾಸ್ತ್ರ ಪಂಡಿತರು, ಪತ್ರಕರ್ತರು, ಮಹಾನ್ ಮೇಧಾವಿ ಹಾಗೂ ಶಿಕ್ಷಣದ ಮೂಲಕ ಸಮಾಜದಲ್ಲಿ ಸಮಾನಾವಕಾಶಗಳನ್ನು ನಿರ್ಮಿಸುವುದರಿಂದ ವಿಕಸಿತ ಭಾರತದ ಪರಿಕಲ್ಪನೆ ಸಾಧ್ಯವೆಂಬ ಸಂದೇಶವನ್ನು ಡಾ.ಅಂಬೇಡ್ಕರ್ ಅಂದಿನ ದಿನಗಳಲ್ಲೇ ನೀಡಿದ್ದರು ಎಂದು ತಿಳಿಸಿದರು.

# ಕೃಷಿ ಇಲಾಖೆ ನೇಮಕಾತಿ, ನಿಯಮ ಉಲ್ಲಂಘನೆಗೆ ವಿರೋಧ, ಪ್ರತಿಭಟನೆ



**ರಾಯಚೂರು, ಜು. 15:** ಕೃಷಿ ಇಲಾಖೆ ನೇಮಕಾತಿಯಲ್ಲಿ ಸಿ ಮತ್ತು ಆರ್ ನಿಯಮಗಳನ್ನು ಉಲ್ಲಂಘಿಸಿ ಬಿಇ ಬಯೋಟೆಕ್ ಹಾಗೂ ಐಸಿಎಆರ್ ಮಾನ್ಯತೆ ಇಲ್ಲದ ಖಾಸಗಿ ವಿಶ್ವವಿದ್ಯಾ ಲಯಗಳ (ರೈಟ್ಸ್) ವಿದ್ಯಾರ್ಥಿಗಳಿಗೆ ಅಕ್ರಮವಾಗಿ ಅವಕಾಶ ಕಲ್ಪಿಸಲಾಗಿದೆ ಎಂದು ಆರೋಪಿಸಿ, ವಿದ್ಯಾರ್ಥಿಗಳು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ನೇಮಕಾತಿಯಲ್ಲಿ ಸಿ ಅಂಡ್ ಆರ್ ನಿಯಮಗಳ ಉಲ್ಲಂಘನೆ ಯಾಗುತ್ತಿದೆ. ಕೃಷಿ ವಿದ್ಯಾರ್ಥಿಗಳು, ಅವೈಜ್ಞಾನಿಕ 'ದೇಸಿ ಪ್ರೋಗ್ರಾಂ' ಜಾರಿಯಿಂದ ರೈತರು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಕೃಷಿ ಪದವಿ ವಿದ್ಯಾರ್ಥಿಗಳನ್ನು ಕೃಷಿ ಇಲಾಖೆಯಲ್ಲಿ ನೇಮಕಾತಿಗೆ ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ನಿಯಮಬಾಹಿರ ನೇಮಕಾತಿ ರದ್ದಾಗಬೇಕು. ಕೃಷಿ ವಿದ್ಯಾರ್ಥಿಗಳ ಭವಿಷ್ಯ ಕಸಿದುಕೊಳ್ಳುತ್ತಿರುವ ಕೆಇಎಗೆ ಧಿಕ್ಕಾರ ಎನ್ನುವ ಘೋಷಣೆ ಕೂಗಿದರು. ನೂರಾರು ಸಂಖ್ಯೆಯಲ್ಲಿದ್ದ ವಿದ್ಯಾರ್ಥಿಗಳು ಬ್ಯಾನರ್‌ಗಳನ್ನು ಹಿಡಿದು

## ಮಂಗಳೂರಿಗೆ ಶೀಘ್ರದಲ್ಲೇ ವಿಮಾನ ಸೇವೆ ಕೇಂದ್ರ ನಿರ್ಧಾರ

# ಕೇಂದ್ರ ನಾಗರಿಕ ವಿಮಾನಯಾನ ಖಾತೆಯ ರಾಜ್ಯ ಸಚಿವ ಮುರಳೀಧರ್ ಮಾಹೋಲ್ ಭರವಸೆ

**ಕಲಬುರಗಿ, ಜು.15–** ಮಂಗಳೂರಿಗೆ ಕಲಬುರಗಿಯಿಂದ ಶೀಘ್ರದಲ್ಲೇ ವಿಮಾನ ಸೇವೆ ಪ್ರಾರಂಭದ ಕುರಿತು ಕೇಂದ್ರ ನಿರ್ಧಾರ ಕೈಗೊಳ್ಳಲಿದೆ ಎಂದು ಕೇಂದ್ರ ನಾಗರಿಕ ವಿಮಾನಯಾನ ಖಾತೆಯ ರಾಜ್ಯ ಸಚಿವ ಮುರಳೀಧರ್ ಮಾಹೋಲ್ ಕಲಬುರಗಿಯ ಹೋಟೆಲ್ ಅಸೋಸಿಯೇಷನ್ ನಿಯೋಗಕ್ಕೆ ಭರವಸೆ ನೀಡಿದರು.



ಕಲಬುರಗಿಯಲ್ಲಿ ಕೇಂದ್ರ ಸಚಿವರ ಆಪ್ತರು ಹಾಗೂ ಪುಣೆ ಮಹಾನಗರ ಪಾಲಿಕೆಯ ಹಣಕಾಸು ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಮೂಲತಃ ಯಾದಗಿರಿಯವರಾದ ಶ್ರೀನಾಥ್ ಭೀಮಾಲೆ ಅವರು ಜು.13ರಂದು ಕಲಬುರಗಿಗೆ ಆಗಮಿಸಿದ ಸಂದರ್ಭದಲ್ಲಿ ನಿಯೋಗವು ಸಲ್ಲಿಸಿದ ಮನವಿಗೆ ದೂರವಾಣಿ ಮೂಲಕ ಕೇಂದ್ರ ಸಚಿವರು ಮಾತನಾಡಿ ತಮ್ಮ ಬೇಡಿಕೆಗಳ ಮನವಿಯನ್ನು ಕೂಡಲೇ ಕಳುಹಿಸಿದರೆ ನಾಗರಿಕ ವಿಮಾನಯ ಖಾತೆಯ ಅಧಿಕಾರಿಗಳ ಜೊತೆ ಚರ್ಚಿಸುವೆ ಸಾಕಷ್ಟು ಪ್ರಯಾಣಿಕರು ಲಭ್ಯವಾದಲ್ಲಿ ವಿಮಾನ ಸೇವೆಯನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರದಿಂದ ಯಾವುದೇ ಅಡ್ಡಿ ಇಲ್ಲ ಎಂದು ಸಚಿವರು ಭರವಸೆ ನೀಡಿದರು. ಸಚಿವರ ಜೊತೆ ಮಾತುಕತೆಯಲ್ಲಿ ಡಾ. ಸದಾನಂದ ಪೆರ್ಲ ಅವರು ನೇರ ಸಂಚಾರದ ಬದಲಾಗಿ ಕಲಬುರಗಿಯಿಂದ ಬೆಂಗಳೂರು ಮಾರ್ಗವಾಗಿ ಒನ್ ಸ್ಟಾಪ್ ಮಂಗಳೂರು ವಿಮಾನ ಸೇವೆ ಪ್ರಾರಂಭಿಸುವಂತೆ ನೀಡಿದ ಸಲಹೆಯನ್ನು ಸಚಿವರು ಸ್ವೀಕರಿಸಿ ಶೀಘ್ರದಲ್ಲೇ ಈ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಭರವಸೆಯನ್ನಿತ್ತರು.

ಮಂಗಳೂರಿಗೆ ಸದ್ಯ ಬಸ್ ಮೂಲಕ 16 ಗಂಟೆಗಳ ಪ್ರಯಾಣದ ವೇಳೆ ತಗಲುತಿದ್ದು ವಿಮಾನಸೇವೆ ಅಗತ್ಯವಾಗಿ ಒದಗಿಸಬೇಕು ಎಂದು ಹೋಟೆಲ್ ಅಸೋಸಿಯೇಷನ್ ಅಧ್ಯಕ್ಷ ನರಸಿಂಹ ಮೆಂಡನ್ ಅವರು ನೀಡಿದ ಸಲಹೆಯನ್ನು ಗಮನಿಸುವುದಾಗಿ ಸಚಿವರು ತಿಳಿಸಿದರು. ಮೋದಿ ಸರ್ಕಾರವು ಜನರ ಅವಶ್ಯಕತೆಗಳಿಗೆ ತುರ್ತು ಸ್ಪಂದನೆ ನೀಡಿ ಉತ್ತಮ ಆಡಳಿತ ನೀಡುತ್ತಿದೆ ಎಂದು ಈ ಸಂದರ್ಭದಲ್ಲಿ ಸಚಿವ ಮಾಹೋಲ್ ತಿಳಿಸಿದರು.

ಕಲಬುರಗಿಯಿಂದ ಖಾಸಗಿ ಏರ್ ಲೈನ್ಸ್ ಗಳಿಗೆ ಸಂಚಾರ ಅನುಮತಿ ಹಾಗೂ ಉಡಾನ್ ಯೋಜನೆ ಪುನಃ ಆರಂಭಗೊಳಿಸಿದರೆ ಪ್ರಯಾಣಿಕರಿಗೆ ಅನುಕೂಲ. ಬೀದರ್ ಶಹಾಪುರ ಯಾದಗಿರಿ ಮುಂತಾದಡೆಗಳಿಂದ ಏಳು ಬಸ್ಸುಗಳು ನಿತ್ಯ ಮಂಗಳೂರಿಗೆ ಸಂಚರಿಸುತ್ತಿದ್ದು ವಿಮಾನ ಸಂಚಾರಕ್ಕೆ ಪ್ರಯಾಣಿಕರ ಕೊರತೆಯಾಗುವುದಿಲ್ಲ ಎಂದು ಹೋಟೆಲ್ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ಸುನಿಲ್ ಶೆಟ್ಟಿ ಸಲಹೆ ನೀಡಿದರು. ಮನವಿಯನ್ನು ಸಚಿವರ ಪರವಾಗಿ ಸ್ವೀಕರಿಸಿದ ಶ್ರೀನಾಥ್ ಭೀಮಾಲೆ ಮಾತನಾಡಿ ಬೇಡಿಕೆಗಳನ್ನು ಸಚಿವರಿಗೆ ಖುದ್ದಾಗಿ ನೀಡಿ ಸಂಚಾರ ಆರಂಭಿಸಲು ಕೇಂದ್ರ ನಾಗರಿಕ ವಿಮಾನಯಾನ ಖಾತೆಯ ರಾಜ್ಯ ಸಚಿವರಿಗೆ ಒತ್ತಡ ಹೇರುವುದಾಗಿ ಜಿಲ್ಲಾ ಹೋಟೆಲ್ ಆಸೋಸಿಯೇಷನ್ ಪದಾಧಿಕಾರಿಗಳ ನಿಯೋಗಕ್ಕೆ ಭರವಸೆ ನೀಡಿದರು.


ರಾಜ್ಯಸಭೆಯ ನೂತನ ಸಂಸತ್
ಸದಸ್ಯರಾಗಿ ಗೌರವಾನ್ವಿತ
ಉಪರಾಷ್ಟ್ರಪತಿಗಳು ಹಾಗೂ
ರಾಜ್ಯಸಭೆಯ ಸಭಾಪತಿಗಳಾದ
ಶ್ರೀ ಸಿ.ಪಿ.ರಾಧಾಕೃಷ್ಣನ್ ಅವರಿಂದ
ಪ್ರಮಾಣವಚನ ಸ್ವೀಕರಿಸಿದ
ಸನ್ಮಾನ್ಯ ಶ್ರೀ ಮನ್ಸೂರ್ ಅಲಿಖಾನ್
ಅವರಿಗೆ ಹಾರ್ದಿಕ ಅಭಿನಂದನೆಗಳು.
ರಾಜ್ಯಸಭೆಯ ನೂತನ ಸಂಸತ್ ಸದಸ್ಯರಾಗಿ
ಪ್ರಮಾಣ ವಚನ ಸ್ವೀಕರಿಸಿದ
ಸನ್ಮಾನ್ಯಶ್ರೀ ಮನ್ಸೂರ್ ಅಲಿಖಾನ್
ಅವರಿಗೆ...
ಹಾರ್ದಿಕ ಅಭಿನಂದನೆಗಳು
ಶುಭಕೋರುವವರು:
ಟಿ.ಎಂ. ಶಾಹೀದ್ ತೆಕ್ಕಿಲ್
ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ
ಅಧ್ಯಕ್ಷರು, ಕನಿಷ್ಠ ವೇತನ ಸಲಹಾ ಮಂಡಳಿ,
(ರಾಜ್ಯ ಸಚಿವ ಸ್ಥಾನಮಾನ) ಕರ್ನಾಟಕ ಸರ್ಕಾರ